ಸಂಪುಟ: 14 Volume | ಸಂಚಿಕೆ: 65 Issue | ಪುಟಗಳು 08 Pages | ಶನಿವಾರ 13 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನನ್ನ ಅಜ್ಜ ಯಾರೆಂದು ನನಗೆ ಗೊತ್ತಿಲ್ಲ;ಆದರೆ ಆತನ ಮೊಮ್ಮಗ ಏನಾಗಬೇಕೆಂದು ನನಗೆ ಗೊತ್ತಿದೆ.

–ಅಬ್ರಹಾಂ ಲಿಂಕನ್



ರಾಜ್ಯಸಭೆಯ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾದ ಹಿರಿಯ ರಾಜಕಾರಣಿ ಕಲಬುರಗಿಯ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರು ಇಂದು ವಿಧಾನಸೌಧದಲ್ಲಿ ಚುನಾವಣಾಧಿಕಾರಿ ಶ್ರೀಮತಿ ವಿಶಾಲಾಕ್ಷಿ ಅವರಿಂದ ಪ್ರಮಾಣಪತ್ರ ಪಡೆದರು.

## 6 ಲಕ್ಷಕ್ಕೂ ಅಧಿಕ ಮೌಲ್ಯದ ಗಾಂಜಾ ಜಪ್ತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಗಾಂಜಾ ಸಾಗಿಸುತ್ತಿದ್ದ ಇಬ್ಬರನ್ನು ಬಂಧಿಸಿದ ಪೊಲೀಸರು ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನ ಸೇರಿ ಒಟ್ಟು 6,38,750 ರೂ. ಮೌಲ್ಯದ 11.775 ಕೆಜಿ ಗಾಂಜಾ ಜಪ್ತಿ ಸೊತ್ತು ಜಪ್ತಿ ಮಾಡಿರುವ ಘಟನೆ ಬೀದರ್ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗುರುವಾರ ನಡೆದಿದೆ.

ಬೀದರ್ ತಾಲೂಕಿನ ಮರ್ಜಾಪುರ (ಟಿ) ಗ್ರಾಮದ ಅರಣ್ಯ ಪ್ರದೇಶದ ಹತ್ತಿರ ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಪೊಲೀಸರು ಅಕ್ರಮವಾಗಿ ಗಾಂಜಾ ಸಾಗಾಟ ಮಾಡುತ್ತಿರುವಾಗ ಸುಮಾರು ₹5.88 ಲಕ್ಷ ಮೌಲ್ಯದ 11.775 ಕೆಜಿ ಗಾಂಜಾ, ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನ ಜಪ್ತಿ ಮಾಡಿ, ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.

ದಾಳಿ ನಡೆಸಿದ ವೇಳೆ ಆರೋಪಿಗಳ ವಶದಲ್ಲಿದ್ದ



11.775 ಕೆಜಿ ಗಾಂಜಾವನ್ನು ವಶಪಡಿಸಿಕೊಳ್ಳಲಾಯಿತು. ಈ ಸಂಬಂಧ ಇಬ್ಬರನ್ನು ಬಂಧಿಸಿ, ಅವರ ವಿರುದ್ಧ ಸಂಬಂಧಿತ ಎನ್ ಡಿಪಿಎಸ್ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಬೀದರ ಡಿವೈಎಸ್ಪಿ ದುದಪೀರ್ ಹುಸೇನಸಾಬ ಮುಲ್ಲಾ ಗ್ರಾಮೀಣ ಠಾಣೆಯ ವೃತ್ತ ನಿರೀಕ್ಷಕರಾದ ಮಹೇಶ ಗೌಡ ಪಾಟೀಲ್, ಎಎಸ್ಐ ಸೂರ್ಯಕಾಂತ,ಸಿಬ್ಬಂದಿಯವರಾದ ಸಿದ್ದಯ್ಯ,ಶ್ರೀನಿವಾಸ, ಬೀದರ್ ಡಿಎಸ್ಬಿ ಘಟಕದ ಸಂತೋಷ್, ಸಂತೋಷ್ ಮಹಾರಾಜ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

## ತುಂಗಭದ್ರಾ ಅಣೆಕಟ್ಟು ಗೇಟ್ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

"ರಾಜ್ಯದ ನೀರಾವರಿ ಯೋಜನೆಗಳ ಜಾರಿಗೆ ಸಂಬಂಧಿಸಿದಂತೆ ನಾನು, ರಾಮಲಿಂಗಾ ರೆಡ್ಡಿ ಹಾಗೂ ಟಿ.ಬಿ ಜಯಚಂದ್ರ ಅವರು ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್ ಪಾಟೀಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೇವೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ನವದೆಹಲಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ಕೇಂದ್ರ ಜಲಶಕ್ತಿ ಸಚಿವರ ಭೇಟಿ ಬಗ್ಗೆ ಕೇಳಿದಾಗ, "ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ತೀರ್ಪು, ಕೃಷ್ಣಾ ನೀರು ವಿವಾದ ನ್ಯಾಯಾಧೀಕರಣ ತೀರ್ಪಿನ ಅನ್ವಯ ಅಧಿಸೂಚನೆ, ಮಹದಾಯಿ ನೀರು, ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರದ 5,300 ಕೋಟಿ ರೂ. ಅನುದಾನ ವಿಚಾರವಾಗಿ ಪ್ರಸ್ತಾಪಿಸಿದ್ದೇವೆ" ಎಂದು ತಿಳಿಸಿದರು.

**ಕೇಂದ್ರ ಸಚಿವರಿಂದ ತುಂಗಭದ್ರಾ ಅಣೆಕಟ್ಟು ನೂತನ ಗೇಟ್ ಉದ್ಘಾಟನೆ**

"ತುಂಗಭದ್ರಾ ಅಣೆಕಟ್ಟಿನ ನೂತನ ಗೇಟ್ ಗಳ ಉದ್ಘಾಟನೆಗೆ ಕೇಂದ್ರ ಜಲಶಕ್ತಿ ಸಚಿವರು ಆಗಮಿಸುತ್ತಿದ್ದು, ನೆರೆ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ಸಾಧ್ಯತೆ ಇದೆ. ನ್ಯಾಯ ನೀಡುವ ಸ್ಥಾನದಲ್ಲಿ ಕೂತು ಅವರು ಅನ್ಯಾಯ ಮಾಡುವುದಿಲ್ಲ ಎಂಬ ವಿಶ್ವಾಸ ನಮಗಿದೆ"ಎಂದು ತಿಳಿಸಿದರು.

ಪ್ರಧಾನಮಂತ್ರಿಗಳಿಗೆ ನೀಡಿರುವ ಮನವಿ ಬಗ್ಗೆ ಕೇಳಿದಾಗ, "ಕರ್ನಾಟಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೃಷಿ, ನೀರಾವರಿ, ನಗರಾಭಿವೃದ್ಧಿ, ಸಂಚಾರ ವಿಚಾರಗಳಿಗೆ ಸಂಬಂಧಿಸಿದಂತೆ ಮನವಿ ಮಾಡಲಾಗಿದೆ. ಅವರು ಪರಿಶೀಲಿಸಿ ತೀರ್ಮಾನ ಮಾಡಲಿದ್ದಾರೆ" ಎಂದು ತಿಳಿಸಿದರು.

## ವಿಲೇವಾರಿಯಾಗದ ಸಾರ್ವಜನಿಕ ಅರ್ಜಿಗಳು: ಜನರ ಆಕ್ರೋಶ

**ಹುಮನಾಬಾದ್:** ತಹಸೀಲ್ದಾರ ಕಚೇರಿಯಲ್ಲಿ ಸಾರ್ವಜನಿಕರು ಸಲ್ಲಿಸಿರುವ ಅನೇಕ ಅರ್ಜಿಗಳು ತಿಂಗಳುಗಟ್ಟಲೆ ವಿಲೇವಾರಿಯಾಗದೆ ಉಳಿದಿರುವುದರಿಂದ ಜನರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಜಾತಿ, ಆದಾಯ, ನಿವಾಸ ಪ್ರಮಾಣಪತ್ರ, ಪಹಣಿ ತಿದ್ದುಪಡಿ, ಭೂ ದಾಖಲೆ ಸೇರಿದಂತೆ ವಿವಿಧ ಸೇವೆಗಳಿಗಾಗಿ ಸಲ್ಲಿಸಲಾದ ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವುದಾಗಿ ಸಾರ್ವಜನಿಕರು ದೂರಿದ್ದಾರೆ. ಕಚೇರಿಗೆ ಪದೇ ಪದೇ ಅಲೆದಾಡಿದರೂ ಸಮರ್ಪಕ ಮಾಹಿತಿ ಸಿಗುತ್ತಿಲ್ಲ ಎಂದು ಅರ್ಜಿದಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದರಿಂದ ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಹಾಗೂ ಬಡ ಜನರು ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ.

ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ದೊರೆಯಬೇಕಾದರೆ ಬಾಕಿ ಇರುವ ಅರ್ಜಿಗಳನ್ನು ಆದ್ಯತೆಯ ಮೇರೆಗೆ ಪರಿಶೀಲಿಸಿ ಶೀಘ್ರ ವಿಲೇವಾರಿ ಮಾಡಬೇಕು ಎಂಬ ಒತ್ತಾಯ ಕೇಳಿಬಂದಿದೆ.

ಜಿಲ್ಲಾಡಳಿತ ಹಾಗೂ ಸಂಬಂಧಿತ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಬಾಕಿ ಇರುವ ಅರ್ಜಿಗಳ ವಿವರವನ್ನು ಪರಿಶೀಲಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಜನಸ್ನೇಹಿ ಆಡಳಿತದ ಉದ್ದೇಶ ಸಫಲವಾಗಬೇಕಾದರೆ ಕಚೇರಿಗಳಲ್ಲಿ ಪಾರದರ್ಶಕತೆ ಹಾಗೂ ಸಮಯಬದ್ಧ ಸೇವೆ ಖಚಿತವಾಗಬೇಕಿದೆ.



ಬೆಂಗಳೂರು: ಮಾಜಿ ಸಚಿವ ರಾಜಶೇಖರ ಪಾಟೀಲ, ಹಾಗೂ ವಿಧಾನ ಪರಿಷತ್ ಸದಸ್ಯ ಡಾ ಚಂದ್ರಶೇಖರ ಪಾಟೀಲ ರವರು ಧರ್ಮಸ್ಥಳ ಕ್ಕೆ ತೆರಳಿ ಶ್ರೀ ಮಂಜುನಾಥ ಸ್ವಾಮಿ ದೇವರ ದರುಶನ ಪಡೆದು. ಅಲ್ಲಿನ ಪೀಠಾಧಿಪತಿಗಳಾದ ಡಾ. ವೀರೇಂದ್ರ ಹೆಗ್ಗಡೆ ರವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

# ಒತ್ತಡ ತಂತ್ರ ಹೈ ಶಾಂತ

### ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ಹಿರಿಯ ಶಾಸಕರು | ಲಾಬಿ ಜೋರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಸಂಪುಟ ಸಂಕಟ ಮುಂದುವರಿದಿದೆ. ಶಾಂತವಾಗಿ ಗಮನಿಸುತ್ತಿರುವ ಹೈಕಮಾಂಡ್‌ಗೆ, ಹೊಸಬರಿಗೆ ಅವಕಾಶ ಕಲ್ಪಿಸುವ ಇರಾದೆ ಇದೆ. ಆದರೆ ಹಿರಿಯ ಶಾಸಕರೂ ರೇಸ್ ನಲ್ಲಿರುವುದು ವರಿಷ್ಠರಿಗೆ ಬಿಸಿತುಪ್ಪವಾಗಿ ಪರಿಣಮಿಸಿದೆ. ಏತನ್ಮಧ್ಯೆ ಸಚಿವ ಸ್ಥಾನದ ಆಕಾಂಕ್ಷಿಗಳು ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಅವಕಾಶ ನೀಡುವಂತೆ ಮನವಿ ಮಾಡಿದ್ದು ಚರ್ಚೆಗೆ ಗ್ರಾಸವಾಗಿದೆ.

**ಅವಿರೋಧ ಆಯ್ಕೆ ಆದರೆ..!:** ಖರ್ಗೆ ಅವರು ಬೆಂಗಳೂರಿಗೆ ಆಗಮಿಸಿದರು. ರಾಜ್ಯಸಭೆಯ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಅವರು, ಚುನಾವಣಾಧಿಕಾರಿಯಿಂದ ಪ್ರಮಾಣಪತ್ರ ಪಡೆದುಕೊಂಡಿದ್ದಾರೆ. ಇಂದು ಖರ್ಗೆ ಅವರನ್ನು ಭೇಟಿ ಮಾಡಿದ ಬಹಳಷ್ಟು ಶಾಸಕರು ಸಂಪುಟದಲ್ಲಿ ಅವಕಾಶ ಕಲ್ಪಿಸುವಂತೆ ಒತ್ತಡ ಹಾಕಿದ್ದಾರೆ.

**ಅವಕಾಶಕ್ಕೆ ಹಿರಿಯರು ಮನವಿ**

ಹಿರಿಯ ಶಾಸಕ ಆರ್.ವಿ.ದೇಶಪಾಂಡೆ, ಹಂಪನಗೌಡ ಬಾದರ್ಲಿ, ಮಾಜಿ ಸಚಿವ ಮಾಂಕಾಳ ವೈದ್ಯ ಸೇರಿದಂತೆ ಹಲವಾರು ಮಂದಿ ಖರ್ಗೆ ಅವರನ್ನು ಭೇಟಿ ಮಾಡಿದ್ದಾರೆ. ಆರ್.ವಿ.ದೇಶಪಾಂಡೆ ಪ್ರತಿಕ್ರಿಯಿಸಿ, ಹಿರಿಯ ಶಾಸಕರಾಗಿದ್ದು, ಬಹುತೇಕ ಇದು ನನ್ನ ಕೊನೆಯ ಚುನಾವಣೆ. ಹೀಗಾಗಿ ತಮಗೆ ಅವಕಾಶ ಕೊಡಿಸುವಂತೆ ಖರ್ಗೆ ಬಳಿ ಮನವಿ ಮಾಡಿದ್ದಾರೆ ಎನ್ನಲಾಗಿದೆ ಎಂದಿದ್ದಾರೆ.

**ಮಂಕಾಳ, ಬಾದರ್ಲಿ ಬೇಡಿಕೆ**

ಮಾಂಕಾಳ ವೈದ್ಯ ಅವರು ಉತ್ತರ ಕರ್ನಾಟಕ ಭಾಗಕ್ಕೆ ಪ್ರಾತಿನಿಧ್ಯ ಸಿಕ್ಕಿಲ್ಲ ಎಂದಿದ್ದು, ಈ ಬಾರಿ ಅವಕಾಶ ಮಾಡಿಕೊಡಬೇಕೆಂದು ಕೋರಿದ್ದಾರೆ. ಸಿಂಧನೂರು ಕ್ಷೇತ್ರದ ಶಾಸಕ ಹಂಪನಗೌಡ ಬಾದರ್ಲಿ ಖರ್ಗೆ ಅವರ ಭೇಟಿಯ ವೇಳೆ ತಮಗೆ ನಿರಂತರವಾಗಿ ಅನ್ಯಾಯವಾಗುತ್ತಿದೆ. ಪಕ್ಷದ ನಿಷ್ಠಾವಂತನಾಗಿ ಕೆಲಸ ಮಾಡಿದ್ದೇನೆ. ಸಂಪುಟದಲ್ಲಿ ಅವಕಾಶ ಮಾಡಿಕೊಡಿ ಎಂದು ಒತ್ತಾಯಿಸಿದ್ದಾರೆ.



**ಹೈಕಮಾಂಡ್ ಮೇಲೆ ವಿಭಿನ್ನ ತಂತ್ರ**

ಪಕ್ಷದ ವಿವಿಧ ಬಣಗಳಿಗೆ ಸೇರಿದ ನಾಯಕರು ಹೈಕಮಾಂಡ್ ಗಮನ ಸೆಳೆಯಲು ವಿಭಿನ್ನ ತಂತ್ರ ಅನುಸರಿಸುತ್ತಿದ್ದು, ಸಿದ್ದರಾಮಯ್ಯ ಅವರ ಆಪ್ತರಾಗಿದ್ದ ಮಾಜಿ ಸಚಿವ ಜಮೀರ್ಅಹ್ಮದ್, ಹಿರಿಯ ನಾಯಕ ಎಚ್.ಸಿ.ಮಹದೇವಪ್ಪ ಅವರ ಬೆಂಬಲಿಗರು ಸಮುದಾಯದ ಹೆಸರಿನಲ್ಲಿ ಪ್ರತಿಭಟನೆಗಳನ್ನು ನಡೆಸುವ ಮೂಲಕ ವರಿಷ್ಠರ ಮೇಲೆ ಒತ್ತಡ ಹೇರುವ ಪ್ರಯತ್ನ ನಡೆಸಿದ್ದಾರೆ ಎನ್ನಲಾಗಿದೆ.

**ಮಾಜಿ ಮುಖ್ಯಮಂತ್ರಿ ಒಲವು..?**

ಸಿದ್ದರಾಮಯ್ಯ ಅವರು ಮಹದೇವಪ್ಪ ಅಥವಾ ಜಮೀರ್ ಪರವಾಗಿ ಬಲವಾಗಿ ಲಾಬಿ ನಡೆಸುವ ಸಾಧ್ಯತೆ ಕಡಿಮೆಯಿದ್ದು, ಇದರ ಬದಲಾಗಿ ತಮ್ಮ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅಥವಾ ರಾಮದುರ್ಗ ಶಾಸಕ ಅಶೋಕ್ ಎಂ ಪಟ್ಟಣ ಅವರಿಗೆ ಅವಕಾಶ ಕಲ್ಪಿಸಲು ಪ್ರಯತ್ನಿಸಬಹುದು ಎಂದು ಪಕ್ಷದ ಮೂಲಗಳು ಸ್ಪಷ್ಟಪಡಿಸುತ್ತಿವೆ.

## ಸಮಾನತೆ ಮತ್ತು ಸಹೋದರತೆಯ ಮೇಲೆ ಭಾರತದ ಆದರ್ಶ ಸಮಾಜ ನಿರ್ಮಾಣ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಈ ನೆಲದ ಮೇಲೆ ಜೀವಿಸಿರುವ ಯಾವುದೇ ವ್ಯಕ್ತಿಗಳು ಅಥವಾ ಜೀವಿಗಳು ಅವುಗಳ ಮೂಲಭೂತ ಹಕ್ಕುಗಳಿಂದ ಸ್ವಲ್ಪವೂ ವಂಚಿತವಾಗಬಾರದು. ಇಂದು ಪ್ರಕೃತಿಯ ಮೂಲಭೂತ ನಿಯಮ ಅದರಲ್ಲೂ ಮಾನವನಿಗೆ ಅವನ ಎಲ್ಲಾ ಮಾನವ ಹಕ್ಕುಗಳು ದೊರಕಬೇಕು. ಹಾಗಾದರೆ ಮಾತ್ರ ಅವನಿಗೆ ಅವನು ವಾಸಿಸುತ್ತಿರುವ ದೇಶ ಅಥವಾ ಸಮಾಜದಲ್ಲಿ ಸ್ವಾತಂತ್ರ್ಯ ಸಿಕ್ಕಿದೆ ಎಂದರ್ಥ. ಇಲ್ಲದಿದ್ದರೆ ಆ ಸ್ವಾತಂತ್ರ್ಯಕ್ಕೆ ಅರ್ಥವೇ ಇಲ್ಲವಂತಾಗುತ್ತದೆ ಹಾಗಾಗಿ



ಭಾರತದ ಸಂವಿಧಾನ ಬರೆದ ಡಾ.ಬಿ.ಆರ್.ಅಂಬೇಡ್ಕರ್ ರವರು ಭಾರತಕ್ಕೆ ರಾಜಕೀಯ ಸ್ವತಂತ್ರ ಸಿಕ್ಕಿದರೆ ಕೇವಲ ಈ ದೇಶವನ್ನು ಆಳುವ ವರ್ಗಗಳಿಗೆ ಮಾತ್ರ. ಸ್ವಾತಂತ್ರ ಸಿಕ್ಕಿದಂತೆ. ಹಾಗಾಗಿ ಈ ದೇಶದಲ್ಲಿ ಬದುಕುತ್ತಿರುವ ಪ್ರತಿಯೊಬ್ಬನಿಗೂ ಸ್ವಾತಂತ್ರ ಸಿಗಬೇಕಾದರೆ ಭಾರತಕ್ಕೆ ರಾಜಕೀಯ ಸ್ವಾತಂತ್ರ್ಯದ ಜೊತೆಗೆ ಸಾಮಾಜಿಕ ಸ್ವಾತಂತ್ರವು ಸಿಗಬೇಕು ಎಂದು ಹೋರಾಡಿದರು ಎಂದು ದಸಂಸ ಮುಖಂಡ ಕೆ.ಸಿ.ರಾಜಾಕಾಂತ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ದೇಶದಲ್ಲಿ ವಾಸಿಸುವ ಪ್ರತಿ ವ್ಯಕ್ತಿಯು ಅವನ ಜಾತಿ ಧರ್ಮ, ಲಿಂಗ, ಹುಟ್ಟಿದ ಸ್ಥಳಗಳ, ತಾರತಮ್ಯವಿಲ್ಲದೆ ಶಿಕ್ಷಣ, ರಾಜಕೀಯ ಅಧಿಕಾರ ಸಂಪತ್ತು ಮುಂತಾದುಗಳೆಲ್ಲದರಲ್ಲೂ ಸಮಾನ ಅವಕಾಶ ಮತ್ತು ಸಮಾನ ಹಕ್ಕುಗಳು ಸಿಗಬೇಕೆಂದು ಪ್ರಬಲವಾಗಿ ಪ್ರತಿಪಾದಿಸಿದರು. ಸ್ವಾತಂತ್ರ ಸಮಾನತೆ ಮತ್ತು ಸಹೋದರತೆಯ ಮೇಲೆ ಭಾರತದ ಆದರ್ಶ ಸಮಾಜ ನಿರ್ಮಾಣವಾಗಬೇಕೆಂದು ನಂಬಿದ ಡಾ.ಬಿ.ಆರ್ ಅಂಬೇಡ್ಕರ್ ರವರು ಇವುಗಳನ್ನು ಪ್ರತಿಪಾದಿಸುವ ಭಾರತದ ಸಂವಿಧಾನವನ್ನು ರಚಿಸಿದರು.ಹಾಗಾಗಿ ಜಗತ್ತಿನಲ್ಲೇ ಸರ್ವಶ್ರೇಷ್ಠ ಸಂವಿಧಾನವಾಗಿ ಭಾರತ ಸಂವಿಧಾನ ಹೊರಹೊಮ್ಮಿದೆ ಭಾರತದ ಸಂವಿಧಾನದ ಬಗ್ಗೆ ಕನಿಷ್ಠಮಟ್ಟದ ಜ್ಞಾನವಾದರೂ ಪ್ರತಿ ವ್ಯಕ್ತಿಗೂ ಇದ್ದರೆ ಅವನು ಕೈಗೊಳ್ಳುವ ಕೆಲಸ ಸಂವಿಧಾನ ಬದ್ಧವಾಗಿಯೋ ಅಥವಾ ಇಲ್ಲವೋ ಎಂದು ಗೊತ್ತಾಗುತ್ತದೆ ಎಂದರು.

## ಈ ಬಾರಿ ಮುನಿದ ಮುಂಗಾರು, ರೈತರ ಕಾರುಬಾರು?

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜೂ.1 ರಿಂದ ಜೂ.10ರ ವರೆಗೆ ಬೀದರ್ ಜಿಲ್ಲೆಯಾದ್ಯಂತ ವಾಡಿಕೆಯ 30.8 ಮಿಮೀ ಮಳೆಯಾಗಬೇಕಿತ್ತು. ಆದರೆ, ಕೇವಲ 21 ಮಿಮೀ ಮಳೆ ಸುರಿದಿದೆ. ಇದು ಬಿತ್ತನೆಗೆ ಸಾಕಾಗುವುದಿಲ್ಲ. ಕನಿಷ್ಠ 80 ರಿಂದ 100 ಮಿಮೀ ಮಳೆಯಾಗಬೇಕಿದ್ದು, ಮಣ್ಣಿನ ತೇವಾಂಶ ನೋಡಿ–ಕೊಂಡು ಬಿತ್ತನೆ ಮಾಡಲು ಕೃಷಿ ಇಲಾಖೆ ಸೂಚಿಸಿದೆ. ಈಗ ಜಿಲ್ಲೆಯಲ್ಲಿ ಎಲ್ಲರ ಚಿತ್ತ ಆಗಸದತ್ತ ನೆಟ್ಟಿದೆ.

**ಯಾವುದೇ ಮಳೆ ಆಗಿಲ್ಲ. ಆದರೆ...**

ಕಳೆದ ಒಂದು ವಾರದಲ್ಲಿ ವಾಡಿಕೆಯ 25.2 ಮಿಮೀ ಬದಲು ಕೇವಲ 17.7 ಮಿಮೀ ಮಳೆಯಾಗಿದೆ. ಕಳೆದ 24 ಗಂಟೆಗಳಲ್ಲಿ ವಾಡಿಕೆಯ 3.1 ಮಿಮೀ ಬದಲು 0.1 ಮಿಮೀ ಅಂದರೆ, ಯಾವುದೇ ಮಳೆಯೇ ಆಗಿಲ್ಲ. ಇದೀಗ ಮೂರ್ನಾಲ್ಕು ದಿನಗಳಿಂದ ಬೇಸಿಗೆಯಂತೆ ಬಿಸಿಲು ಹೆಚ್ಚಾಗಿದ್ದು, ಸೆಕೆ, ಬೆವರಿನಿಂದಾಗಿ ಜನತೆ ಪರದಾಡುವಂತಾಗಿದೆ.ಜೂ.11ರ ಗುರುವಾರವಂತೂ ಭಾರಿ ಬಿಸಿಲಿನಿಂದಾಗಿ ಜನ ಕಂಗೆಡುವಂತಾಗಿತ್ತು. ಈ ಮೊದಲು ಜೂ.10 ರ ನಂತರ ಮಳೆಯಾಗಲಿದೆ ಎಂದು ಹವಾಮಾನ ತಜ್ಞರು ಮಾಹಿತಿ ನೀಡಿದ್ದರು. ಇದೀಗ ಜೂ.13ರ ನಂತರ ನಿರಂತರ ಮಳೆಯಾಗಲಿದೆ. ಬಿತ್ತನೆಗೆ ಬೇಕಾಗುವಷ್ಟು ಮಳೆ ಸುರಿಯಲಿದೆ ಎಂದಿದ್ದಾರೆ. ಆದರೆ, ಹೆಸರು,ಉದ್ದು ಬಿತ್ತನೆಗೆ ಜೂನ್ ಅಂತ್ಯದವರೆಗೆ ಮಾತ್ರ ಅವಕಾಶವಿದ್ದು, ಶೀಘ್ರ ಮಳೆಯಾದರೆ ಮಾತ್ರ ಉದ್ದು–ಹೆಸರು ಬಿತ್ತನೆಯಾಗುತ್ತದೆ. ಇಲ್ಲವಾದರೆ ಸೋಯಾದತ್ತಲೇ ಮುಖ ಮಾಡಬೇಕಾಗುತ್ತದೆ.

ನಮ್ಮದು ಮಳೆಯಾಶ್ರಿತ ಬೆಳೆಗಳನ್ನು ಬೆಳೆಯುವ ಜಮೀನುಗಳು. ಮಳೆ ಬಿದ್ದರಷ್ಟೆ ಬಿತ್ತನೆ ಮಾಡುತ್ತೇವೆ. ಮಳೆ ಖಂಡಿತ ಬರುತ್ತದೆ ಎಂದುಕೊಂಡು ಸ್ವಲ್ಪ ಬಿತ್ತನೆ ಮಾಡಿದ್ದು, ಇನ್ನೂ ಸುಮಾರು ಜಮೀನು ಬಿತ್ತನೆ ಮಾಡಬೇಕಿದೆ. ಮಳೆಯೇ ಇಲ್ಲದ ಕಾರಣ ಸುಮ್ಮನಾಗಿದ್ದೇವೆ. ಮಳೆ ಶುರುವಾದರೆ, ಕೂಡಲೇ ಬಿತ್ತನೆ ಕೈಗೊಳ್ಳುತ್ತೇವೆ ಎಂದಿದ್ದಾರೆ ದಶರಥ ದೊಡ್ಡಿ.



ಬೀದರ್ ಜಿಲ್ಲೆಯಲ್ಲಿ ಜೂನ್ 13ರ ನಂತರ ಮಳೆ ಆರಂಭವಾಗಲಿದೆ. ಆರಂಭದಲ್ಲಿ ಎರಡ್ಮೂರು ದಿನ ಸಾಧಾರಣೆ ಮಳೆ ಸುರಿಯಲಿದ್ದು, ಬಳಿಕ ಹೆಚ್ಚಿನ ಮಳೆಯಾಗಲಿದೆ. ಮಳೆಯ ಬಗ್ಗೆ ಯಾರೂ ಯೋಚನೆ ಮಾಡುವುದೇ ಬೇಡ. ಖಂಡಿತ ಮಳೆ ಬರಲಿದೆ. ಮುಂದಿನ ಒಂದೆ–ರಡು ದಿನಗಳಲ್ಲಿ ಮುಂಗಾರು ಮಳೆ ಸುರಿಯಲಿದೆ.

–ಬಸವರಾಜ ಬಿರಾದಾರ್, ಹವಾಮಾನ ತಜ್ಞರು, ಬೀದರ್

**4.12 ಲಕ್ಷ ಹೆಕ್ಟೇರ್ ಬಿತ್ತನೆಯ ಗುರಿ**

ಪ್ರಸಕ್ತ ಸಾಲಿನ ಮುಂಗಾರಿಗೆ ಬೀದರ್ ಜಿಲ್ಲೆಯಲ್ಲಿ 4,12,194 ಹೆಕ್ಟೇರ್ ಪ್ರದೇಶದಲ್ಲಿಬಿತ್ತನೆಯ ಗುರಿ ಹೊಂದಲಾಗಿದೆ. ಈ ಪೈಕಿ ಅರ್ಧಕ್ಕೂ ಹೆಚ್ಚಿನ ಪ್ರದೇಶದಲ್ಲಿಅಂದರೆ 2,22,500 ಹೆಕ್ಟೇರ್ ಪ್ರದೇಶದಲ್ಲಿಸೋಯಾ ಅವರೆ ಬಿತ್ತನೆಯ ಗುರಿಯಿದೆ. ಮಳೆಯೇ ಇಲ್ಲದ ಕಾರಣ ಸದ್ಯಕ್ಕೆ ರೈತಾಪಿ ವಲಯ ವರುಣನ ಕೃಪೆಗಾಗಿ ಕಾದು ಕುಳಿತಿದೆ.

**ಇರಾನ್ ಜೊತೆ ಯುದ್ಧ ಅಂತ್ಯಗೊಂಡಿದೆ, ವಾರಾಂತ್ಯದಲ್ಲಿ ಯುರೋಪಿನಲ್ಲಿ ಶಾಂತಿ ಒಪ್ಪಂದ: ಡೊನಾಲ್ಡ್ ಟ್ರಂಪ್**

## ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ನಿಗಾ ವಹಿಸಲಿ

ಶಿಕ್ಷಣವು ಪ್ರತಿಯೊಬ್ಬರ ಮೂಲಭೂತ ಹಕ್ಕಾಗಿದ್ದು, ದೇಶದ ಅಭಿವೃದ್ಧಿಗೆ ಭದ್ರ ಬುನಾದಿಯಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಶಿಕ್ಷಣ ಸೇವೆಗಿಂತ ವ್ಯಾಪಾರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವ ಬಗ್ಗೆ ಪೋಷಕರು ಮತ್ತು ಸಾರ್ವಜನಿಕ ವಲಯದಿಂದ ದೂರುಗಳು ಕೇಳಿಬರುತ್ತಿವೆ. ಇದರಿಂದ ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿತನ ಹೆಚ್ಚಿಸುವ ಅಗತ್ಯತೆ ಎದುರಾಗಿದೆ.

## ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349



ಶಾಲಾ–ಕಾಲೇಜುಗಳಲ್ಲಿ ನಿಯಮಬಾಹಿರ ಶುಲ್ಕ ವಸೂಲಿ, ಪ್ರವೇಶ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯ ಕೊರತೆ, ಪುಸ್ತಕ, ಸಮವಸ್ತ್ರ ಹಾಗೂ ಇತರ ವಸ್ತುಗಳನ್ನು ನಿರ್ದಿಷ್ಟ ಅಂಗಡಿಗಳಿಂದಲೇ ಖರೀದಿಸುವಂತೆ ಒತ್ತಾಯಿಸುವ ಘಟನೆಗಳು ಪೋಷಕರಿಗೆ ಆರ್ಥಿಕ ಹೊರೆ ಉಂಟುಮಾಡುತ್ತಿವೆ. ಶಿಕ್ಷಣದ ಗುಣಮಟ್ಟದ ಜೊತೆಗೆ ವಿದ್ಯಾರ್ಥಿಗಳ ಸುರಕ್ಷತೆ, ಮೂಲಸೌಕರ್ಯ ಮತ್ತು ಶಿಕ್ಷಕರ ಅರ್ಹತೆಗಳ ಮೇಲೂ ಸರ್ಕಾರ ನಿರಂತರ ನಿಗಾ ವಹಿಸುವುದು ಅಗತ್ಯವಾಗಿದೆ.

ಸರ್ಕಾರವು ಖಾಸಗಿ ಶಿಕ್ಷಣ ಸಂಸ್ಥೆಗಳ ಕಾರ್ಯವೈಖರಿಯನ್ನು ಕಾಲಕಾಲಕ್ಕೆ ಪರಿಶೀಲಿಸಿ, ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಜೊತೆಗೆ ಪೋಷಕರ ದೂರುಗಳನ್ನು ಸ್ವೀಕರಿಸಲು ವಿಶೇಷ ಸಹಾಯವಾಣಿ ಹಾಗೂ ದೂರು ಪರಿಹಾರ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು.

ಖಾಸಗಿ ಶಿಕ್ಷಣ ಸಂಸ್ಥೆಗಳು ಸಮಾಜದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಆದರೆ ಶಿಕ್ಷಣವನ್ನು ಸೇವಾ ಮನೋಭಾವದಿಂದ ನಡೆಸುವುದು ಅವುಗಳ ಸಾಮಾಜಿಕ ಜವಾಬ್ದಾರಿಯಾಗಿದೆ. ಸರ್ಕಾರದ ಸಮರ್ಪಕ ಮೇಲ್ವಿಚಾರಣೆ ಹಾಗೂ ಸಂಸ್ಥೆಗಳ ಜವಾಬ್ದಾರಿಯುತ ನಡೆ ಎರಡೂ ಇದ್ದಾಗ ಮಾತ್ರ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯಲು ಸಾಧ್ಯ.

ಆದ್ದರಿಂದ ರಾಜ್ಯ ಸರ್ಕಾರವು ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಿ, ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ, ಗುಣಮಟ್ಟ ಮತ್ತು ಸಮಾನ ಅವಕಾಶಗಳನ್ನು ಖಚಿತಪಡಿಸಬೇಕಾಗಿದೆ. ಶಿಕ್ಷಣ ವ್ಯಾಪಾರವಲ್ಲ, ಅದು ರಾಷ್ಟ್ರ ನಿರ್ಮಾಣದ ಮಹತ್ತರ ಸಾಧನ ಎಂಬುದನ್ನು ಎಲ್ಲರೂ ಅರಿಯಬೇಕಾಗಿದೆ.

## ವಿದ್ಯುತ್ ವಿತರಣಾ ಜವಾಬ್ದಾರಿ ಟಾಟಾ ಪವರ್ ಕಂಪನಿಗೆ ನೀಡಬೇಡಿ: ವೀರಸಂಗಯ್ಯ



**ಬೀದರ್:** ಟಾಟಾ ಪವರ್ ಕಂಪನಿ ಲಿಮಿಟೆಡ್ ಎಂಬ ಖಾಸಗಿ ಕಂಪನಿಗೆ ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ವಿತರಣಾ ಜವಾಬ್ದಾರಿ ಯಾವುದೇ ಕಾರಣಕ್ಕೂ ನೀಡಬಾರದು. ಏಕೆಂದರೆ ಇದೊಂದು ಜನವಿರೋಧಿ ನೀತಿಯಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ.ವೀರಸಂಗಯ್ಯ ತಿಳಿಸಿದರು.

ನಗರದ ಮಯೂರಾ ಹೊಟೇಲ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಕರೆದ ಜಿಲ್ಲಾ ಮಟ್ಟದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಂಬೈನ ಟಾಟಾ ಪವರ್ ಕಂಪನಿ ಎಂಬ ಖಾಸಗಿ ಸಂಸ್ಥೆಯೊಂದು ಕರ್ನಾಟಕ ಸರ್ಕಾರದ ಸಾಮ್ಯತೆಗೊಳಪಡುವ ಎಲ್ಲಾ ವಿದ್ಯುತ್ ಕಂಪನಿಗಳ ಆಯಾ ಪ್ರದೇಶಗಳಲ್ಲಿ ಸಮಾನಾಂತರವಾಗಿ ವಿತರಣಾ ಕಾರ್ಯಕ್ಕೆ ಪರವಾನಿಗೆಯನ್ನು ಕೋರಿ ಕರ್ನಾಟಕ ವಿದ್ಯುತ್‌ಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಅರ್ಜಿ ಸಲ್ಲಿಸಿ ಆಕ್ಷೇಪಣೆಯನ್ನು ಆಹ್ವಾನಿಸಿರುವುದನ್ನು ಪ್ರಕಟವಾಗಿದೆ.

ರಾಜ್ಯದ ಪ್ರಜೆಗಳಾಗಿ ಹಾಗೂ ವಿದ್ಯುಚ್ಛಕ್ತಿಯ ಗ್ರಾಹಕರಾಗಿ ರೈತ ಸಂಘ ಇದಕ್ಕೆ ವಿರೋಧಿಸಲಿದೆ. ಜನತೆಗೆ ಮಾರಕವಾಗುವ ಈ ಖಾಸಗಿ ಅರ್ಜಿದಾರ ಕಂಪನಿಗೆ ಅನುಮತಿ ನೀಡದೆ ಅರ್ಜಿಯನ್ನು ತಿರಸ್ಕರಿಸಬೇಕು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಅಂದೇ ಹೇಳಿದ್ದರು. ವಿದ್ಯುಚ್ಛಕ್ತಿ, ನೀರು ಮತ್ತು ಲೋಕೋಪಯೋಗಿ ಮೊದಲಾದ ಸಂಸ್ಥೆಗಳು ಸರ್ಕಾರದ ಹಿಡಿತದಲ್ಲಿಯೇ ನಿರ್ವಹಿಸಬೇಕಲ್ಲದೆ ಯಾವುದೇ ಕಾರಣಕ್ಕೂ ಲಾಭಗಳಿಕೆ ದೃಷ್ಟಿಯ ಖಾಸಗಿ ಸಂಸ್ಥೆಗಳಿಗೆ ನೀಡುವುದು ಸಲ್ಲದು ಎಂದು. ಹೀಗಾಗಿ ಬೀದರ ಜಿಲ್ಲೆಯ ಪ್ರತೀ ಹಳ್ಳಿಗಳಿಗೆ ತೆರಳಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಕಾರ್ಯದರ್ಶಿಗಳಿಗೆ ಪ್ರತೀ ರೈತರು ಒಂದೊಂದು ಆಕ್ಷೇಪಣಾ ಅರ್ಜಿ ಸಲ್ಲಿಸಲು ಕೋರಿ ಜಾಗೃತಿ ಜಾಥಾ ಹಮ್ಮಿಕೊಂಡಿದ್ದೇವೆ. ಜೊತೆಗೆ ಕೇಂದ್ರ ಚುನಾವಣಾ ಆಯೋಗದ ಎಸ್‌ಐಆರ್ ನೀತಿಯನ್ನು ಖಂಡಿಸಿ ಇಂದಿನಿಂದಲೇ ಜಾಗೃತಿ ಜಾಥಾ ಹಮ್ಮಿಕೊಂಡಿದ್ದೇವೆ ಎಂದು ಜೆಎಂ ವೀರಸಂಗಯ್ಯ ತಿಳಿಸಿದರು.

**ಕರ್ನಾಟಕ ರಾಜ್ಯ ರೈತ ಸಂಘದ ನೂತನ ಪದಾಧಿಕಾರಿಗಳ ಪಟ್ಟಿ ಪ್ರಕಟ ರಾಜ್ಯ ಸಂಘದಿದ ಬಿಡುಗಡೆ:** ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ಬಿರಾದಾರ ಸಂಗಮಕರ್, ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಸಂತೋಷಕುಮಾರ ಗುದಗೆ ಬಸವಕಲ್ಯಾಣ, ಜಿಲ್ಲಾ ಉಪಾಧ್ಯಕ್ಷರಾಗಿ ವಿಠಲರೆಡ್ಡಿ ಆಣದೂರ, ಭವರಾವ ನೆಲವಾಡೆ ಅವರನ್ನು ಖಜಾಂಚಿಯಾಗಿ, ವಿಠಲರಾವ ಮೇತ್ರ ಅವರನ್ನು ಕಾರ್ಯದರ್ಶಿಯಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆಎಂ ವೀರಸಂಗಯ್ಯ ಹಾಗೂ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್





ಸಮಾಜದಲ್ಲಿ ಪಿಡುಗಾಗಿರುವ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಮುಂದಾಗುವಂತೆ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಗೌರವಾನ್ವಿತ ಶ್ರೀ ರಾಘವೇಂದ್ರ ಉಪಧ್ಯೆ ಅವರು ಕರೆ ನೀಡಿದರು.

ಬೀದರ ನಗರದ ರಂಗ ಮಂದಿರದಲ್ಲಿ ಇಂದು ಶುಕ್ರವಾರ ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೋಸೈಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಶಾಸನಾತ್ಮಕವಾಗಿ ಹಾಗೂ ಕಾನೂನಾತ್ಮಕವಾಗಿ ಬಾಲಕಾರ್ಮಿಕ ಪದ್ಧತಿಗೆ ಶಿಕ್ಷೆ ಸಹ ಇದೆ. ಈ ಹಿನ್ನೆಲೆಯಲ್ಲಿ ಬಾಲಕಾರ್ಮಿಕರನ್ನಾಗಿ ಮಕ್ಕಳನ್ನು ದುಡಿಸಿಕೊಳ್ಳುವ ಪಾಲಕರಲ್ಲಿ ಸೂಕ್ತ ಅರಿವು ಮೂಡಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಮಕ್ಕಳು ಮನೆಗಳಲ್ಲಿ ಕೆಲಸಮಾಡುವದು ಹಿರಿಯರಿಗೆ ಗೌರವ ನೀಡಿದಂತೆ.ಆದರೆ 14 ವರ್ಷ ಒಳಗಿನ ಬಾಲಕಾರ್ಮಿಕರು ಹಾಗೂ 14 ರಿಂದ 18 ವರ್ಷ ಒಳಗಿನ ಕಿಶೋರ್ ಮಕ್ಕಳನ್ನು ಬಾಲಕಾರ್ಮಿಕತೆಗೆ ಬಳಸುವುದು ಅಪರಾಧ ಹಾಗೂ ತಪ್ಪಿತಸ್ಥರಿಗೆ ಜೈಲು ಶಿಕ್ಷೆ ಸಹ ಇದೆ ಎಂದು ಹೇಳಿದರು.

ಸಾಮಾನ್ಯ ಮಕ್ಕಳಂತೆ ಬಾಲಕಾರ್ಮಿಕ ಮಕ್ಕಳಿಗೂ ಉತ್ತಮ ಶಿಕ್ಷಣ ದೊರೆಯಬೇಕು. ಮಕ್ಕಳು ಬಾಲಕಾರ್ಮಿಕರಾಗಿ ಉಳಿಯುವುದರಿಂದ ದೇಶದ ಅಭಿವೃದ್ಧಿಗೆ ಮಾರಕ.ಅದರಂತೆ ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೂ ತೊಂದರೆಯಾಗುವದರಿಂದ ಬಾಲಕಾರ್ಮಿಕ ಪದ್ಧತಿ ಹೋಗಲಾಡಿಸಲು ನೆರವಾಗಬೇಕು. ಮಕ್ಕಳ ಹಕ್ಕುಗಳ ಬಗ್ಗೆ ಪಾಲಿಕ, ಪೋಷಕರಲ್ಲಿ ಸೂಕ್ತ ಅರಿವು ಮೂಡಿಸುವಂತೆ ಅವರು ಸಲಹೆ ನೀಡಿದರು.

ನಮ್ಮ ದೇಶದ ಭವಿಷ್ಯ ಮಕ್ಕಳ ಕೈಯಲ್ಲಿದೆ ನಮ್ಮ ದೇಶದಲ್ಲಿ ಮಕ್ಕಳ ಮೇಲೆ ಹಲವರು ರೀತಿ ಮಕ್ಕಳ ಮೇಲೆ ದೌರ್ಜನ್ಯ ಆಗ್ತಾ ಇದೆ. ಬಾಲ್ಯ ವಿವಾಹ ಮದುವೆಯನ್ನು ತಡೆಯಬೇಕಾದರೆ ಒಂದು ಇಲಾಖೆಯಲ್ಲಿ ನಂಬರ್ 1098 ಅನ್ನು ಕೊಟ್ಟಾಗ ಮಕ್ಕಳನ್ನು ಯಾರು ನೋಡಿಕೊಳ್ಳುತ್ತಿದ್ದರು ಅಂತ ಪಾಲಕರೆ ಬಾಲ ವಿವಾಹ ಮದುವೆಗಳಲ್ಲಿ ಭಾಗಿ ಆ ಕರೆಯ ಮೂಲಕ ಸ್ನೇಹಿತರು ಬಾಲ ವಿವಾಹ ತಡೆದ ಘಟನೆಗಳಾಗಿವೆ ಅವರು ತಿಳಿಸಿದರು.

ಬಾಲ್ಯ ವಿವಾಹ ತಡೆಯಬೇಕಾದರೆ ಒಂದು ಇಲಾಖೆಯಲ್ಲಿ 1098 ಕೊಡಲಾಗಿತ್ತು. ಬಾಲಕ, ಬಾಲಕಿಯ ತಂದೆ–ತಾಯಿಗಳೇ ವಿವಾಹ ಮಾಡಿ ಮಾನವನ ಹಾಳು ಮಾಡುತ್ತಿದ್ದಾರೆ ವಿವಾಹವನ್ನು ತಡೆಯಲು ಬಾಲಕಿಯ ಸ್ನೇಹಿತರು ಕರೆ ಮಾಡಿ ಹಲವಾರು ಮದುವೆಗಳನ್ನು ನಿಲ್ಲಿಸಿದರೆ. ಅದೇ ರೀತಿಯಾಗಿ ಒಂದು ಪೆಟಿಷನ್ ಇತ್ತು ಹೈಕೋರ್ಟ್ ಪ್ರತಿಕ್ಷಣ ಏನೆಂದರೆ ಯಾವುದೋ ಒಂದು ಸರ್ಕಾರಿ ಶಾಲೆಯಲ್ಲಿ ಒಂದು ಜೊತೆ ಬಟ್ಟೆ ಕೊಡುತ್ತಾರೆ, ಈ ರೀತಿ ಬಟ್ಟೆ ಕೊಟ್ಟರೆ ಹೇಗೆ ಸಾಧ್ಯ ಎಂದು ಪ್ರಶ್ನೆ ಮಾಡಿದಾಗ ಹೈಕೋರ್ಟಿನಲ್ಲಿ ಎರಡು ಜೊತೆ ಬಟ್ಟೆ ಕೊಡಲು ಆದೇಶವಾಯಿತು ಎಂದು ತಿಳಿಸಿದರು.

ಬಾಲಕರಿಗೆ ತಂದೆ–ತಾಯಿ ಒಳ್ಳೆಯ ಮಾರ್ಗದರ್ಶನ ನೀಡದಿದ್ದರೆ, ಶಿಕ್ಷಣದಲ್ಲಿ ಸಿಗಬೇಕಾದ ಶಿಕ್ಷಣವನ್ನು ಸರಿಯಾದ ಸಮಯಕ್ಕೆ ಒದಗಿಸಿ ಕೊಡಬೇಕು ಅಂದರೆ ಮಾತ್ರ ನಮ್ಮ ದೇಶ ಉತ್ತಮ ಗುಣಮಟ್ಟಗೆ ಕೊಂಡೊಯ್ಯಲು ಸಾಧ್ಯ. ಅದರಂತೆ ಮಗನ ಕನಸುಗಳು ಎಲ್ಲ ಮಕ್ಕಳು ತಂದೆ ತಾಯಿ ಶಿಕ್ಷಣ ಕೊಡಬೇಕು ಅನ್ನೋದು ಎಲ್ಲರ ಬಯಕೆ, ಕೆಲವರು ಬಡತನದಿಂದ ಕಳಸಬಹುದು ಇಲ್ಲಿ ಎಲ್ಲ ಮಕ್ಕಳು ಕೆಂಪು, ಅಥವಾ ಬಳಿ ಬಟ್ಟೆ ಧರಿಸಿದನ್ನು ನೋಡಿರಬಹುದು, ಈ ರೀತಿಯಾಗಿ ಹಲವಾರು ಸಮಸ್ಯೆಗಳು ಎದುರಿಸುತ್ತಿದ್ದಾರೆ ಎಂದು ಹೇಳಿದರು.

# ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕ: ಎಸ್ಪಿ ಡಾ.ಸುಮನ್ ಡಿ.ಪೆನ್ನೇಕರ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ದೇಶ ಹಾಗೂ ರಾಜ್ಯದ ಹಿಂದುಳಿದ ಜಿಲ್ಲೆಗಳಲ್ಲಿ ಇಂದಿಗೂ ಬಾಲಕಾರ್ಮಿಕ ಪದ್ಧತಿ ಆಚರಣೆಯಲ್ಲಿರುವುದು ಸಮಾಜದ ಸ್ವಾಸ್ಥ ಕ್ಕೆ ಮಾರಕವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ– ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 'ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ, ಮಕ್ಕಳಿಗೆ ನ್ಯಾಯಯುತ ರಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ' ಎಂಬ ಘೋಷವಾಕ್ಯದೊಂದಿಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಮಾನವ ಸಂಪನ್ಮೂಲದ ಅಗತ್ಯ ಹೆಚ್ಚಿರುವ ಕಡೆಗಳಲ್ಲಿ ಸಣ್ಣ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ತೊಡಗಿಸಿಕೊಳ್ಳುವ ಪ್ರವೃತ್ತಿ ವ್ಯಾಪಕವಾಗಿ ಕಂಡುಬರುತ್ತಿದೆ. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳಲು ಸಮಾಜದಲ್ಲಿರುವ ತಪ್ಪು ಕಲ್ಪನೆಗಳು ಮತ್ತು ಆಲೋಚನೆಗಳೇ ಮುಖ್ಯ ಕಾರಣವಾಗಿದೆ. ಬಾಲಕಾರ್ಮಿಕರಿಗೆ ಹೆಚ್ಚಿನ ಸಂಬಳ ನೀಡುವ ಅಗತ್ಯವಿರುವುದಿಲ್ಲ ಮತ್ತು ಅತ್ಯಂತ ಕಡಿಮೆ ವೇತನದಲ್ಲಿ ಅವರಿಂದ ಹೆಚ್ಚಿನ ಕೆಲಸ ಮಾಡಿಸಿಕೊಳ್ಳಬಹುದು ಎನ್ನುವ ಶೋಷಣೆಯ ಮನೋಭಾವನೆ ಇಂದಿಗೂ ಜೀವಂತವಾಗಿದೆ. ಇಂತಹ ಆಲೋಚನೆಗಳು ಮಕ್ಕಳ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು, ಅವರ ವಿದ್ಯಾಭ್ಯಾಸದ ಪ್ರಗತಿಯನ್ನು ಕುಂಠಿತಗೊಳಿಸುತ್ತಿವೆ ಎಂದು ತಿಳಿಸಿದರು. ಮಕ್ಕಳು ತಮ್ಮ ಬೆಳವಣಿಗೆಯ ಹಂತದಲ್ಲಿ ವಿದ್ಯಾಭ್ಯಾಸದ ಕಡೆಗೆ ಎಷ್ಟು ಗಮನ ಹರಿಸುತ್ತಾರೋ, ಅಷ್ಟೇ ಉತ್ತಮವಾಗಿ ಅವರು ದೊಡ್ಡವರಾದ ಮೇಲೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಆದರೆ, ಅವರು ಸಾಧನೆ ಮಾಡುವಂತಹ ಆರಂಭಿಕ ಹಂತದಲ್ಲೇ ಅವರ ಕೈಗೆ ಪುಸ್ತಕ ನೀಡುವ ಬದಲು ಕೆಲಸಕ್ಕೆ ದೂಡಿ, ಅವರ ಭವಿಷ್ಯವನ್ನು ಮೊಟಕುಗೊಳಿಸುವುದು ಅಕ್ಷಮ್ಯ ಅಪರಾಧವಾಗಿದೆ ಎಂದರು.

ಬಾಲಕಾರ್ಮಿಕ ಪದ್ಧತಿಯು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಹಿರಿಯರು ಮತ್ತು ಸಮಾಜದ ಪ್ರಮುಖರು ಬಾಲಕಾರ್ಮಿಕ ಪದ್ಧತಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಮಕ್ಕಳ ಬೆಳವಣಿಗೆಗೆ ಪೂರಕವಾದ ಮತ್ತು ಅನುಕೂಲಕರವಾದ ವಾತಾವರಣವನ್ನು ಸೃಷ್ಟಿಸುವ ಮೂಲಕ ಒಂದು 'ಸ್ವಸ್ಥ ಸಮಾಜ'ವನ್ನು ನಿರ್ಮಿಸಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಮಕ್ಕಳು ಬೇರೆ ಯಾವುದೇ ಕಡೆಗೆ ಗಮನ ಹರಿಸದೆ ಕೇವಲ ಶಿಕ್ಷಣ, ಕ್ರೀಡೆ ಹಾಗೂ ಸೃಜನಶೀಲ ಚಟುವಟಿಕೆಗಳ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಕೆಲವೊಮ್ಮೆ ನಿರಂತರ ಓದು ಬೇಸರ ತರಿಸಬಹುದು, ಆದರೆ ಶಿಕ್ಷಣವೇ ನಮ್ಮ ಭವಿಷ್ಯವನ್ನು ರೂಪಿಸುವ ಏಕೈಕ ಶಕ್ತಿ. ಓದು ಎಂದರೆ ಕೇವಲ ಪುಸ್ತಕ ಹಿಡಿದು ಕುಳಿತುಕೊಳ್ಳುವುದಲ್ಲ, ಅದು ವ್ಯಕ್ತಿತ್ವದ ಒಟ್ಟಾರೆ ಬೆಳವಣಿಗೆಗೆ ಕಾರಣವಾಗಬೇಕು. ಶಿಕ್ಷಣವು ಮನುಷ್ಯನ ವ್ಯಕ್ತಿತ್ವವನ್ನು ಸುಂದರವಾಗಿ ರೂಪಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ತಮ್ಮ ಗಮನ ಬೇರೆಡೆಗೆ ಹರಿಯದಂತೆ ಜಾಗ್ರತೆ ವಹಿಸಿ, ಶಿಕ್ಷಣದ ಮಹತ್ವವನ್ನು ಅರಿತು ಮುನ್ನಡೆಯಬೇಕು ಎಂದು ಕರೆ ನೀಡಿದರು.

# ಮಂಜಗುಣಿ ಸರ್ವೀಸ್ ರಸ್ತೆ ನಿರ್ಮಾಣಕ್ಕೆ ಸ್ಥಳೀಯರ ಮನವಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನ ಮಂಜಗುಣಿ ಗ್ರಾಮಕ್ಕೆ ತೆರಳುವ ಸರ್ವೀಸ್ ರಸ್ತೆ ಸಂಪೂರ್ಣ ಹಾಳಾಗಿದ್ದು, ಬಸ್ ಸಂಚಾರ ಸ್ಥಗಿತಗೊಂಡಿದೆ. ಹೀಗಾಗಿ ಕೂಡಲೇ ರಸ್ತೆಯನ್ನು ದುರಸ್ಥಿಗೊಳಿಸಿ ಬಸ್ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಮಂಜಗುಣಿ ಗ್ರಾಮಸ್ಥರು ಶಾಸಕ ಸತೀಶ ಸೈಲ್ ಅವರಿಗೆ ಮನವಿ ಸಲ್ಲಿಸಿದರು.

ಮಂಜಗುಣಿ–ಗಂಗಾವಳಿ ಸೇತುವೆ ನಿರ್ಮಾಣಗೊಂಡ ಹಿನ್ನೆಲೆಯಲ್ಲಿ ಮಂಜಗುಣಿಗೆ ಪ್ರತ್ಯೇಕ ಸರ್ವೀಸ್ ರಸ್ತೆ ಮಾಡಬೇಕಾಗಿತ್ತು. ಆದರೆ ಇದುವರೆಗೂ ರಸ್ತೆ ನಿರ್ಮಾಣಗೊಂಡಿಲ್ಲ. ಇದರಿಂದಾಗಿ ಈಗಿರುವ ತಾತ್ಕಾಲಿಕ ರಸ್ತೆ ಮಳೆಯಿಂದಾಗಿ ಕೊರಕಲಾಗಿದೆ. ಹೀಗಾಗಿ ಸಾರಿಗೆ ಸಂಸ್ಥೆಯವರು ಬಸ್ ಸಂಚಾರ ಸ್ಥಗಿತಗೊಳಿಸಿದ್ದಾರೆ. ಕೂಡಲೇ ಅಧಿಕಾರಿಗಳಿಗೆ ಸೂಚನೆ ನೀಡಿ ತಾತ್ಕಾಲಿಕವಾಗಿ ರಸ್ತೆಯನ್ನು ದುರಸ್ಥಿಗೊಳಿಸಿ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು. ಹಾಗೇ ಸೇತುವೆಯ ಸಮೀಪದಲ್ಲಿಯೇ ಶೆಡ್ ನಿರ್ಮಾಣ ಮಾಡಲಾಗಿದೆ. ಅದನ್ನು ಕೂಡ ತೆರವುಗೊಳಿಸಬೇಕು ಎಂದು ಸ್ಥಳೀಯರು ಶಾಸಕರಿಗೆ ವಿವರಿಸಿದರು.



ಶಾಸಕ ಸತೀಶ ಸೈಲ್ ಮಾತನಾಡಿ, ಸೋಮವಾರದ ಒಳಗಡೆ ಈಗಿರುವ ರಸ್ತೆ ಸರಿಪಡಿಸಿ ಬಸ್ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು. ಹಾಗೇ ಶೆಡ್‌ನ್ನು ಕೂಡ ತೆರವುಗೊಳಿಸಲಾಗುವುದು. ತಹಸೀಲ್ದಾರರ ಮುಂದೆ ನಿಂತು ಈ ಎಲ್ಲ ಕಾರ್ಯ ಮಾಡುತ್ತಾರೆ ಎಂದು ಸ್ಥಳೀಯರಿಗೆ ಆಶ್ವಾಸನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಮಾಜಿ ಅಧ್ಯಕ್ಷರಾದ ವೆಂಕಟ್ರಮಣ ಕೆ. ನಾಯ್ಕ, ಲೀಲಾವತಿ ನಾಯ್ಕ, ಮಾಜಿ ಸದಸ್ಯ ಮಂಜುನಾಥ ಆರ್. ನಾಯ್ಕ, ಪ್ರಮುಖರಾದ ಮಹಾಬಲೇಶ್ವರ ವಿ. ನಾಯ್ಕ, ಅಶೋಕ ಡಿ. ನಾಯ್ಕ, ಅಶೋಕ ವಿ. ನಾಯ್ಕ, ಶ್ರೀಪಾದ ನಾಯ್ಕ, ಕೆ.ಡಿ.ನಾಯ್ಕ, ಮೋಹನ ನಾಯ್ಕ, ಪ್ರಶಾಂತ ವಿ. ನಾಯ್ಕ ನಾರಾಯಣ ನಾಯ್ಕ, ಗಣಪತಿ ಎಸ್. ನಾಯ್ಕ, ಗಣಪತಿ ಎ. ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಾಲಕಾರ್ಮಿಕ ಪದ್ಧತಿ ದೇಶದ ಪ್ರಗತಿಗೆ ಮಾರಕ: ನ್ಯಾಯಾಧೀಶ





• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ದೇಶದ ಸಮಗ್ರ ಅಭಿವೃದ್ಧಿ ಮತ್ತು ಪ್ರಗತಿಯಲ್ಲಿ ಮಕ್ಕಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಬಾಲಕಾರ್ಮಿಕ ಪದ್ಧತಿಯು ದೇಶದ ಪ್ರಗತಿಗೆ ದೊಡ್ಡ ಅಡ್ಡಿಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಹೇಳಿದರು.

ನಗರದ ಸೇಂಟ್ ಮೇರಿ ಪದವಿ ಪೂರ್ವ ವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ವಿವಿಧ ಇಲಾಖೆಗಳು ಹಾಗೂ ಸ್ವಯಂಸೇವಾ ಸಂಸ್ಥೆಗಳ ಒಕ್ಕೂಟದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಕಾಯ್ದೆಯಡಿ 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗದಲ್ಲಿ ತೊಡಗಿಸುವುದನ್ನು ನಿಷೇಧಿಸಲಾಗಿದೆ.

ಬಾಲಕಾರ್ಮಿಕ ಪದ್ಧತಿಯಿಂದ ಮಕ್ಕಳು ತಮ್ಮ ಅಮೂಲ್ಯ ಬಾಲ್ಯವನ್ನು ಕಳೆದುಕೊಳ್ಳುವುದರ ಜೊತೆಗೆ ಶಿಕ್ಷಣದಿಂದ ವಂಚಿತರಾಗುತ್ತಾರೆ. ಶಿಕ್ಷಣವೇ ವ್ಯಕ್ತಿ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಪ್ರಮುಖ ಅಸ್ತ್ರವಾಗಿದ್ದು, ಅದರ ಮೂಲಕವೇ ದೇಶದ ಉನ್ನತಿ ಸಾಧ್ಯ ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಅನೇಕ ಸಂಕಷ್ಟಗಳ ನಡುವೆಯೂ ಉನ್ನತ ಶಿಕ್ಷಣ ಪಡೆದು ದೇಶಕ್ಕೆ ಹೆಮ್ಮೆಯ ಸಂವಿಧಾನ ನೀಡಿದ ಮಹನೀಯರು. ಅವರ ಜೀವನವು ಶಿಕ್ಷಣದ ಮಹತ್ವವನ್ನು ಸಾರುತ್ತದೆ ಎಂದು ಸ್ಮರಿಸಿದರು.

ಬಾಲಕಾರ್ಮಿಕ ಪದ್ಧತಿಗೆ ಬಡತನ ಪ್ರಮುಖ ಕಾರಣವಾಗಿದ್ದು, ಇಂತಹ ಕುಟುಂಬಗಳಿಗೆ ಸರ್ಕಾರದ ಸೌಲಭ್ಯಗಳು ಪರಿಣಾಮಕಾರಿಯಾಗಿ ತಲುಪಬೇಕು. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕೇವಲ ಸರ್ಕಾರದ ಹೊಣೆಗಾರಿಕೆಯಲ್ಲ; ಪ್ರತಿಯೊಬ್ಬ ನಾಗರಿಕರೂ ಈ ನಿಟ್ಟಿನಲ್ಲಿ ಜವಾಬ್ದಾರಿಯಿಂದ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವಾರಾಧ್ಯ ಇಜೇರಿ ಮಾತನಾಡಿ, ಬಾಲಕಾರ್ಮಿಕ ಹಾಗೂ ಭಿಕ್ಷಾಟನೆ ಪ್ರಕರಣಗಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡಬೇಕು. ಯಾವುದೇ ಕಾರಣಕ್ಕೂ ಮಕ್ಕಳ ಶಿಕ್ಷಣ ಮತ್ತು ಹಕ್ಕುಗಳನ್ನು ಕಸಿದುಕೊಳ್ಳುವುದು ಕಾನೂನುಬಾಹಿರವಾಗಿದ್ದು, ವಲಸೆ ಮಕ್ಕಳನ್ನು ಗುರುತಿಸಿ ಅವರಿಗೆ ಶಿಕ್ಷಣ ಕಲ್ಪಿಸಲು ಸರ್ಕಾರ ಮತ್ತು ಸಮಾಜ ಒಟ್ಟಾಗಿ ಶ್ರಮಿಸಬೇಕು ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಆರ್. ಹಳಿಮನಿ ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳುವುದು ಹಾಗೂ 15 ರಿಂದ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ಯೋಗಗಳಲ್ಲಿ ತೊಡಗಿಸುವುದು ಕಾನೂನುಬಾಹಿರವಾಗಿದೆ. ನಿಯಮ ಉಲ್ಲಂಘಿಸುವ ಮಾಲೀಕರಿಗೆ 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಹಾಗೂ ₹20 ಸಾವಿರದಿಂದ ₹50 ಸಾವಿರದವರೆಗೆ ದಂಡ ವಿಧಿಸಲಾಗುತ್ತದೆ ಎಂದು ಹೇಳಿದರು.

ಇದಕ್ಕೂ ಮುನ್ನ ನ್ಯಾಯಾಧೀಶ ಶ್ರೀನಿವಾಸ ನವಲೆ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದರು. ಜಾಥಾ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಿಂದ ಸೇಂಟ್ ಮೇರಿ ಶಾಲೆಯವರೆಗೆ ಸಂಚರಿಸಿತು.

ಸಂತ ಜೋಸೆಫ್ ಪ್ರೌಢಶಾಲೆ ವಿದ್ಯಾರ್ಥಿಗಳು ಪ್ರಾರ್ಥನಾ ಗೀತೆಯನ್ನು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಡಿಎಚ್‌ಒ ಡಾ. ಶರಣಬಸಪ್ಪ ಯಾತ್ನಾಳ, ಉಪ ಕಾರ್ಮಿಕ ಆಯುಕ್ತ ಡಾ. ವೆಂಕಟೇಶ್ ಎ. ಶಿಂಧಿಹಟ್ಟಿ, ಸಹಾಯಕ ಕಾರ್ಮಿಕ ಆಯುಕ್ತ ಮಹಮ್ಮದ್ ಬಶೀರ್ ಅನ್ಸಾರಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ. ಪಾಟೀಲ್, ಫಾದರ್ ಜೋಸೆಫ್ ಪ್ರವೀಣ್, ಆನಂದರಾಜ್, ಶಿವಕುಮಾರ ರೇಷ್ಮೆ, ವಿಠ್ಠಲ ಚಿಕ್ಕಣಿ, ಸಂತೋಷ್ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.



**ಗೋಕರ್ಣ : ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಶ್ರೀ ನಾರಾಯಣಗುರು ಶಕ್ತಿಪೀಠದ ಡಾ. ಶ್ರೀ ಪ್ರಣವಾನಂದ ಸ್ವಾಮೀಜಿ ಅವರಿಗೆ ಪುಣ್ಯಾಶ್ರಮದಲ್ಲಿ ಫಲ ಹಾಗೂ ಫಲಕ ನೀಡಿ ಗೌರವಿಸಿದರು. ಪುಣ್ಯಾಶ್ರಮದ ರಾಜಗೋಪಾಲ ಅಡಿ ಗುರೂಜಿ ಅವರ ಅನುಪಸ್ಥಿತಿಯಲ್ಲಿ ಅನುಪ ಗುನಗಾ ಅವರು ಫಲಕಾಣಿಕೆ ನೀಡಿದರು.**

# ಗೋಕರ್ಣದಲ್ಲಿ ಹಲಸು ಮತ್ತು ವಿವಿಧ ಹಣ್ಣುಗಳ ಹಬ್ಬಕ್ಕೆ ಚಾಲನೆ



- ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಶ್ರೀಗುರುರಾಘವೇಂದ್ರ ಇವೆಂಟ್ಸ್ ಇವರ ಆಶ್ರಯದಲ್ಲಿ ಗೋಕರ್ಣದಲ್ಲಿ ಇದೇ ಮೊದಲ ಬಾರಿಗೆ ಹಲಸು ಮತ್ತು ವಿವಿಧ ಹಣ್ಣುಗಳ ಹಬ್ಬವನ್ನು ಆಯೋಜಿಸಲಾಗಿದ್ದು ಶ್ರೀ ಭದ್ರಕಾಳಿ ದೇವಸ್ಥಾನ ಎದುರುಗಡೆ ಶ್ರೀ ಶಂಕರ ಮಠದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ಈ ಹಣ್ಣುಗಳ ಹಬ್ಬ ನಡೆಯಲಿದೆ. ಈ ಹಣ್ಣುಗಳ ಹಬ್ಬಕ್ಕೆ ಶ್ರೀ ಮಹಾಬಲೇಶ್ವರ ಅರ್ಬನ್ ಬ್ಯಾಂಕಿನ ಅಧ್ಯಕ್ಷರು ಹಾಗೂ ಕೆ.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಮೋಹನ ನಾಯಕ ದೇವರಬಾವಿ ಅವರು ಚಾಲನೆ ನೀಡಿ ಮಾತನಾಡಿ, ಪ್ರತಿವರ್ಷ ಇಂತಹ ಕಾರ್ಯಕ್ರಮಗಳು ನಡೆಯುವಂತಾಗಬೇಕು ಎಂದರು. ನಿಕಟಪೂರ್ವ ಗ್ರಾ.ಪಂ. ಸದಸ್ಯ ಸುಜಯ ಶೆಟ್ಟಿ ಗೋಕರ್ಣ, ಸತೀಶ್ ದೇಶಭಂಡಾರಿ, ಕರವೇ ಅಧ್ಯಕ್ಷ ಕುಮಾರ ದಿವಟಿಗೆ, ತಿಮ್ಮಣ್ಣ ನಾಯಕ, ಕಾರ್ಯಕ್ರಮ ಆಯೋಜಕರಾದ ಗಣೇಶ ಗುನಗ ಉಪಸ್ಥಿತರಿದ್ದರು. ಮಾಜಿ ಗ್ರಾ.ಪಂ. ಅಧ್ಯಕ್ಷ ನಾಗರಾಜ ಹಿತ್ತಲಮಕ್ಕಿ, ಅರ್ಬನ್ ಬ್ಯಾಂಕ್ ನಿರ್ದೇಶಕ ಗಜಾನನ ನಾಯಕ ಉಪಸ್ಥಿತರಿದ್ದರು. ಈ ಹಬ್ಬದಲ್ಲಿ ಸಿದ್ದು ಹಲಸು, ರುದ್ರಾಕ್ಷಿ ಹಲಸು, ಹಲಸಿನ ಹಣ್ಣಿನ ಜಾಮ್, ಮಾವಿನ ಹಣ್ಣಿನ ಜಾಮ್ ಸೇರಿದಂತೆ ಹಲಸು ಮತ್ತು ಮಾವಿನಿಂದ ತಯಾರಿಸಿದ ವಿವಿಧ ಖಾದ್ಯಗಳು ಗ್ರಾಹಕರಿಗೆ ದೊರೆಯಲಿದೆ. ಜೊತೆಗೆ ಹಲಸಿನ ಚಿಪ್ಸ್, ಹಲಸಿನ ವಿವಿಧ ಉತ್ಪನ್ನಗಳು ವಿವಿಧ ತಳಿಯ ಹೂವು ಹಣ್ಣಿನ ಗಿಡಗಳು ಆಯುರ್ವೇದಿಕ ಮತ್ತು ಗೃಹ ಉತ್ಪನ್ನಗಳ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ.ಜಪಾನ್ ತಳಿಯ ಜಪಾನಿನಲ್ಲಿ ಕೆಜಿಗೆ ಎರಡೂವರೆ ಲಕ್ಷ ಬೆಲೆ ಬಾಳುವ ಮಿಯಾಜಾಕಿ ಮಾವಿನ ಹಣ್ಣನ್ನು ಪ್ರದರ್ಶನಕ್ಕೆ ಇಡಲಾಗಿದೆ. ಜೊತೆಗೆ ಹಲಸಿನ ಹೋಳಿಗೆ, ಹಲಸಿನ ಜಿಲೇಬಿ, ವಿವಿಧ ಉಪ್ಪಿನಕಾಯಿಗಳು, ಹಲಸಿನ ಹಣ್ಣಿನ ಬಿರಿಯಾನಿ, ಹಲಸಿನ ಕಬಾಬ್, ಹಲಸಿನ ಪಾಯಸ, ಐಸ್ ಕ್ರೀಮ್ ಹಬ್ಬದ ವಿಶೇಷತೆಯಾಗಿದೆ.

# ಸಮಯಕ್ಕೆ ಬಾರದ ವೈದ್ಯರು ಕಾದು ಬೇಸತ್ತ ರೋಗಿಗಳು



- ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಉಪ ವಿಭಾಗ ಮಟ್ಟದ ಸರಕಾರಿ ಸಾರ್ವಜನಿಕ ನೂರು ಹಾಸಿಗೆ ಆಸ್ಪತ್ರೆಯಲ್ಲಿ ಸೂಕ್ತ ಸಮಯಕ್ಕೆ ವೈದ್ಯರು ಬಾರದ ಹಿನ್ನೆಲೆಯಲ್ಲಿ ರೋಗಿಗಳು ಪರದಾಡುವಂತಾಗಿದೆ. ವೈದ್ಯರು ಸಕಾಲದಲ್ಲಿ ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸಿಗುವುದು ಕಷ್ಟವಾಗುತ್ತಿದೆ ಎಂದು ಸಾರ್ವಜನಿಕರ ಆರೋಪಿಸಿದರೆ. ಬೆಳಗ್ಗೆಯಿಂದ ಯಾವುದೇ ವೈದ್ಯರು ಆಸ್ಪತ್ರೆಯಲ್ಲಿ ಕಂಡುಬರಲಿಲ್ಲ.ಬೆಳಗ್ಗೆ ಚಿಕಿತ್ಸೆಗೆಂದು ಆಸ್ಪತ್ರೆಗೆ ಬಂದ ರೋಗಿಗಳಿಗೆ ಮಧ್ಯಾಹ್ನ 3:30 ವೈದ್ಯರಿಲ್ಲದೆ ಪರದಾ ಡುವಂತಹ ಸ್ಥಿತಿ ನಿರ್ಮಾಣವಾಗಿತ್ತು. ಭರತ್ ವೈದ್ಯರ ಪೈಕಿ 3.37 ಆಸ್ಪತ್ರೆಗೆ ಬಂದರು, ಹೆಚ್ಚಿನ ಸಂಖ್ಯೆಯಲ್ಲಿದ್ದ ರೋಗಿಗಳನ್ನು ಪರೀಕ್ಷಿಸಲು ಹರಸಾಹಸ ಪಡಬೇಕಾಯಿತು. ಈ ಸಂದರ್ಭ ಸ್ಥಳದಲ್ಲಿದ್ದ ರೋಗಿಗಳ ಸಂಬಂಧಿಕರೂ ಸೇರಿದಂತೆ ಸಾರ್ವಜನಿಕರು ವೈದ್ಯರು ಲಭ್ಯವಿಲ್ಲದ ಇಡೀ ಶಾಪ ಹಾಕುತ್ತಾ ಪರದಾಡುತ್ತಿದ್ದರು. ಪತ್ರಕರ್ತರು ದೂರವಾಣಿ ಮೂಲಕ ಡ್ಯೂಟಿ ಡಾಕ್ಟರ್ ಯಾರು ಇದ್ದಾರೆ, ಮತ್ತು ನಿಗದಿತ ಸಮಯ ತಿಳಿಸಿ ಎಂಬ ಪ್ರಶ್ನೆ ಮಾಡಿದಾಗ ಮಾತನಾಡಿದ ಡಾ.ಹರಿಪ್ರಸಾದ್ ವೈದ್ಯರು ಎಮರ್ಜೆನ್ಸಿ ಇದ್ದಾಗ ಟೈಮಿಂಗ್ ಇರಲ್ಲ 1:30 ಕ್ಕೆ ಹೋಗಬಹುದಿತ್ತು 2.50 ಕೆಲಸ ಮಾಡಿ ಹೋಗಿದ್ದೇವೆ ಬರುವುದಕ್ಕೆ ತಡವಾಗಿದೆ ಐದು ನಿಮಿಷದಲ್ಲಿ ಬರುತ್ತೇವೆ 5.30 ವರೆಗು ಪೇಷಂಟ್ ಕ್ಲಿಯರ್ ಮಾಡುತ್ತೇವೆ ಭರತ್, ಪಣೇಂದ್ರ,ಮಾಂತಪ್ಪ, ಫಜರುದ್ದೀನ್ ಇವತ್ತು ಆಫ್ ಡ್ಯೂಟಿ ಇದೆ ಉತ್ತರಿಸಿದರು.ಸಾರ್ವಜನಿಕರು ಮಾತನಾಡಿ ಅನುಕೂಲವಾಗುವ ಹಾಗೆ ಸಮಯಕ್ಕೆ ಸರಿಯಾಗಿ ವೈದ್ಯರು ದೊರಕಿಸುವ ಕೆಲಸ ಮಾಡಿಕೊಡಿ ಜೀವ ಉಳಿಸಿ ಎಂದು ಸಾರ್ವಜನಿಕರು ಜಿಲ್ಲಾ ಆರೋಗ್ಯ ಅಧಿಕಾರಿಗೆ ಮತ್ತು ಜಿಲ್ಲಾಧಿಕಾರಿಗೆ ಮನವಿ ಮಾಡುತ್ತೇವೆ ಎಂದು ತಿಳಿಸಿದರು.

# ರೈತರ ಸೆಳೆಯುವ ಹಸಿರು ಸಸಿ : ಕಾಳು ಮೆಣಸು, ಕರಿ ಇಶಾಡ ಸಸಿಗಳ ಆರೈಕೆ

**ನಾಗರಾಜ ಮಂಜಗುಣಿ**

- ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಮುಂಗಾರು ಮಳೆ ಆರಂಭಗೊಂಡಿದ್ದು,ಕೃಷಿ ಹಾಗೂ ತೋಟಗಾರಿಕೆ ಚಟುವಟಿಕೆಗಳುಗರಿಗೆದರುತ್ತಿವೆ. ಇದಕ್ಕೆ ಪೂರಕವಾಗಿ ತಾಲೂಕಿನ ಬಾಸಗೋಡದಲ್ಲಿನ ತೋಟಗಾರಿಕೆ ಇಲಾಖೆಯ ನರ್ಸರಿಯಲ್ಲಿ ವಿಧವಿಧದ ಸಸಿಗಳು ನಾಟಿಗೆ ಸಜ್ಜುಗೊಂಡಿವೆ.22.19ಎಕರೆ ಪ್ರದೇಶದಲ್ಲಿರುವ ಸಸ್ಯ ಪಾಲನಾ ಕೇಂದ್ರದಲ್ಲಿ ಸ್ಥಳೀಯ ವಿಶೇಷ ತಳಿಯಾಗಿರುವ ಕರಿ ಇಶಾಡ ಸೇರಿದಂತೆ ವಿಭಿನ್ನ ತಳಿಯ ಸಸಿಗಳನ್ನು ಬೆಳೆಸಲಾಗಿದೆ. ರೈತರಿಗೆ ರಿಯಾಯಿತಿ ದರದಲ್ಲಿ ಒದಗಿಸಲು ಅವು ಸಜ್ಜುಗೊಂಡಿವೆ.ಕೇಂದ್ರದಲ್ಲಿ ಮಾವು, ಗೇರು, ಅಡಕೆ, ತೆಂಗು ಹಾಗೂ ಸಾಂಬಾರು ಪದಾರ್ಥಗಳಾದ ಕಾಳು ಮೆಣಸು, ದಾಲಚ್ಚಿನ್ನಿ, ಲವಂಗ, ಜಾಯಿ ಕಾಯಿ ಸೇರಿದಂತೆ ಸುಮಾರು 85 ಸಾವಿರ ಸಸಿಗಳನ್ನು ಈ ವರ್ಷ ತಯಾರಿಸಲಾಗಿದೆ.ರೈತರ ಬೇಡಿಕೆಗೆ ಅನುಗುಣವಾಗಿ ಸಸ್ಯ ಪಾಲನಾ ಕೇಂದ್ರದಲ್ಲಿ ಪಣಿಯೂರು–1 ತಳಿಯ 40 ಸಾವಿರ ಕಾಳು ಮೆಣಸಿನ ಸಸಿಗಳನ್ನು ತಯಾರಿಸಲಾಗಿದೆ. ಈ ತಳಿಯ ಸಸಿಗೆ ಶಿರಸಿ, ಶಿವಮೊಗ್ಗ ಹಾಗೂ ಹಾವೇರಿ ಭಾಗದ ರೈತರಿಂದ ಹೆಚ್ಚು ಬೇಡಿಕೆ ಇದೆ. ಈ ಕಾರಣಕ್ಕೆ ಈ ವರ್ಷ ಅತೀ ಹೆಚ್ಚು ಕಾಳು ಮೆಣಸಿನ ಸಸಿಗಳನ್ನು ತಯಾರಿಸಲು ಆದ್ಯತೆ ನೀಡಿದ್ದೇವೆ’ ಎಂದು ಸಸ್ಯ ಪಾಲನಾ ಕೇಂದ್ರದ ತೋಟಗಾರಿಕಾ ಸಹಾಯಕ ಟಿ.ಎಂ. ನಾಯ್ಕ ತಿಳಿಸಿದರು.ಕಳೆದ ವರ್ಷ ವೆಂಗುರ್ಲಾ–77, ವೆಂಗುರ್ಲಾ–4 ತಳಿಯ 12 ಸಾವಿರದಷ್ಟು ಗೇರು ಸಸಿಗಳನ್ನು ಅಂಕೋಲಾ, ಕುಮಟಾ ಹಾಗೂ ಹೊನ್ನಾವರ ತಾಲೂಕಿನ ರೈತರಿಗೆ ವಿತರಿಸಲಾಗಿತ್ತು. ಈ ವರ್ಷವೂ ರೈತರ ಬೇಡಿಕೆಗೆ ಅನುಗುಣವಾಗಿ ಸುಮಾರು 10 ಸಾವಿರಕ್ಕೂ ಅಧಿಕ ಸಸಿಗಳನ್ನು ಸಿದ್ದಪಡಿಸಿದ್ದೇವೆ ಎಂದು ಅವರು ಹೇಳಿದರು.

> ಅತ್ಯಂತ ಕಡಿಮೆ ದರ ಹಾಗೂ ಗುಣಮಟ್ಟದ ಸಸಿಗಳು ಬಾಸಗೋಡದ ಸಸ್ಯ ಪಾಲನಾ ಕೇಂದ್ರದಲ್ಲಿ ಲಭ್ಯವಿದ್ದು, ರೈತರು ಅವುಗಳನ್ನು ಪಡೆದುಕೊಳ್ಳಬಹುದು.
>
> **ಪ್ರಕಾಶ ಡಾವಳೆ,**
> **ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕ ಅಂಕೋಲಾ**

ಭೌಗೋಳಿಕ ಸೂಚಿ (ಜಿಐ ಟ್ಯಾಗ್) ಮಾನ್ಯತೆ ಪಡೆದಿರುವ ಕರಿ ಇಶಾಡ ಸಸಿಗಳನ್ನು ತಯಾರಿಸಿದ್ದೇವೆ. ಮಲ್ಲಿಕಾ, ಕೇಸರ, ರತ್ನಗಿರಿ ಅಲ್ಫೋನ್ಸೆ ತಳಿ ಸೇರಿ ಸುಮಾರು 6 ಸಾವಿರ ಮಾವಿನ ಸಸಿಗಳನ್ನು ತಯಾರಿಸಿದ್ದು, ಅಲ್ಲದೇ ವಿಶೇಷವಾಗಿ ತಾಲೂಕಿನ ರೈತರಿಗೆ ಸಾಗರ ತಳಿಯ ಅಡಕೆ ಸಸಿಗಳನ್ನು ಕಡಿಮೆ ದರದಲ್ಲಿ ವಿತರಿಸಲು 14 ಸಾವಿರ ಸಸಿಗಳನ್ನು ಸಿದ್ದಪಡಿಸಿದ್ದೇವೆ ಎಂದು ಸಹಾಯಕ ತೋಟಗಾರಿಕೆ ಅಧಿಕಾರಿ ಪ್ರಸನ್ನ ಕುಮಾರ ಹಣಸಿ ಮಾಹಿತಿ ನೀಡಿದರು.

# ಪತ್ರಕರ್ತ ನಾಗರಾಜ ನ್ಯಾಮತಿ ವಿರುದ್ಧದ ಪ್ರಕರಣ ಹಿಂಪಡೆಯಲು ಮನವಿ

- ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಜೂ. 12: ಸುರಪುರ ತಾಲೂಕಿನ ಹಿರಿಯ ಪತ್ರಕರ್ತ ನಾಗರಾಜ ನ್ಯಾಮತಿ ಅವರ ವಿರುದ್ಧ ಸುರಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣವನ್ನು ಹಿಂಪಡೆಯುವಂತೆ ಒತ್ತಾಯಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಗುರುಮಠಕಲ್ ತಾಲೂಕು ಪದಾಧಿಕಾರಿಗಳು ಶುಕ್ರವಾರ ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ ಯವರ ಮೂಲಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ತಾಲೂಕಾಧ್ಯಕ್ಷ ರವಿ ಬುರನೋಳ ಹಾಗೂ ಪದಾಧಿಕಾರಿಗಳು ಮನವಿ ಸಲ್ಲಿಸಿದರು.ಮನವಿಯಲ್ಲಿ, ಪ್ರಕರಣ ದಾಖಲಿಸುವ ಮೊದಲು ಸಮಗ್ರ ತನಿಖೆ ನಡೆಸಬೇಕಾಗಿದ್ದು, ಘಟನಾ ಸ್ಥಳಕ್ಕೆ ಭೇಟಿ ನೀಡಿ ಸತ್ಯಾಂಶ ಪರಿಶೀಲಿಸಬೇಕಿತ್ತು. ಆದರೆ ಸೂಕ್ತ ಪರಿಶೀಲನೆ ಇಲ್ಲದೆ ಎಫ್ಐಆರ್ ದಾಖಲಿಸಿರುವುದು ಖಂಡನೀಯ ಎಂದು ತಿಳಿಸಲಾಗಿದೆ.

ಪ್ರಕರಣ ದಾಖಲಿಸುವ ಮೊದಲು ಸಿಸಿ ಕ್ಯಾಮೆರಾ ದೃಶ್ಯಗಳು ಹಾಗೂ ಮೊಬೈಲ್ ಲೊಕೇಶನ್ ಪರಿಶೀಲನೆ ಮಾಡಿದರೆ ಪ್ರಕರಣದ ನೈಜ ಸತ್ಯಾಂಶ ಹೊರಬರಲಿದೆ. ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಪತ್ರಿಕಾ ಮಾಧ್ಯಮದ ಸ್ವಾತಂತ್ರ್ಯಕ್ಕೆ ಧಕ್ಕೆ ತರುವ ಪ್ರಯತ್ನಗಳು ನಡೆಯಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ನಿರಪರಾಧಿ ಪತ್ರಕರ್ತರ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ರದ್ದುಗೊಳಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಜಗದೀಶ್ ಕುಮಾರ್ ಭೂಮಾ, ಲಕ್ಷ್ಮಣ್ ಕುಂಬಾರ, ಫಹದ್, ಮೋಗುಲಪ್ಪ ನಾಯ್ಕಿನ್, ಅಹ್ಮದ್ ನಾದಿ ಉಪಸ್ಥಿತರಿದ್ದರು.

# ವಿಕಲಚೇತನರ ಸ್ವಾವಲಂಬಿ ಜೀವನಕ್ಕಾಗಿ ಎಲ್ಲರೂ ಸಹಕರಿಸೋಣ: ಡಾ. ಸಜ್ಜನ್

- ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಜೂ. 12: ತಾಲೂಕಿನ ವಿಕಲಚೇತನರಿಗಾಗಿ ಎಸ್‌ಬಿಐ ಆರ್‌ಸೆಟಿ ಯಾದಗಿರಿ ಹಾಗೂ ಎಪಿಡಿ ಸಂಸ್ಥೆಯ ಸಹಯೋಗದಲ್ಲಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ 12 ದಿನಗಳ ಕಾಲ ಹಮ್ಮಿಕೊಂಡಿದ್ದ ಪೇಪರ್ ಬ್ಯಾಗ್, ಎನ್‌ವೆಲಪ್ ಕವರ್ ಹಾಗೂ ಫೈಲ್ ತಯಾರಿಕೆ ತರಬೇತಿಯ ಸಮಾರೋಪ ಕಾರ್ಯಕ್ರಮ ಶುಕ್ರವಾರ ನಡೆಯಿತು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಸಮುದಾಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ್ ಕುಮಾರ್ ಸಜ್ಜನ್ ಮಾತನಾಡಿ, ವಿಕಲಚೇತನರು ಸ್ವಾವಲಂಬಿ ಜೀವನ ನಡೆಸಲು ಸಮಾಜದ ಎಲ್ಲರ ಸಹಕಾರ ಅಗತ್ಯವಾಗಿದ್ದು, ಅವರ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಎಪಿಡಿ ಸಂಸ್ಥೆಯ ಜೀವನಚಕ್ರ ಯೋಜನೆಯ ಮುಖ್ಯಸ್ಥ ಮಧುಕೇಶ್ವರ ಮಾತನಾಡಿ, ಮಾರುಕಟ್ಟೆಯ ಅಗತ್ಯತೆಗಳನ್ನು ಅರಿತು ಉದ್ಯಮ ಆರಂಭಿಸುವ ಮೂಲಕ ವಿಕಲಚೇತನರು ಆರ್ಥಿಕವಾಗಿ ಸಬಲರಾಗಲು ಸಂಸ್ಥೆಯು ಅಗತ್ಯ ಸಹಕಾರ ನೀಡಲಿದೆ ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ್ದ 29 ಮಂದಿ ವಿಕಲಚೇತನರಿಗೆ ತರಬೇತಿ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶರಣಪ್ಪ, ಆರ್‌ಸೆಟಿ ಸಂಪನ್ಮೂಲ ವ್ಯಕ್ತಿ ಶಫೀಕ್, ಎಪಿಡಿ ಸಂಸ್ಥೆಯ ತಾಲೂಕು ಸಂಯೋಜಕ ವಿರುಪಾಕ್ಷಿ ಮಾಲಿಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಜಿಲ್ಲಾ ಸಂಯೋಜಕ ಶಿವಯೋಗಪ್ಪ, ಸುರೇಶ್ ಶಿಲ್ಪ ಎಂ., ಶಿಲ್ಪ ಎಸ್., ಅಂಬಿಕಾ, ನಾಗಮಣಿ, ಅತೀಸ್ ಹಾಗೂ ಇತರ ಸಿಬ್ಬಂದಿ ಸಮಾರೋಪ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಾಲಕಾರ್ಮಿಕ ಪದ್ಧತಿ ಸಮಾಜದ ಸ್ವಾಸ್ಥ್ಯಕ್ಕೆ ಮಾರಕ

- ಮಲ್ಲಮ್ಮ ನುಡಿ ವಾರ್ತೆಕಂಪ್ಲಿ



ನಗರದ ವಿಜಯನಗರ ಆಂಗ್ಲ ಮಾಧ್ಯಮ ಪ್ರೌಢಶಾಲೆ ಆವರಣದಲ್ಲಿ ಇಂದು ಏರ್ಪಡಿಸಿದ ಬಾಲಕಾರ್ಮಿಕ ವಿರುದ್ಧ ವಿರೋಧ ದಿನಾಚರಣೆಯನ್ನು ಕಂಪ್ಲಿ ತಾಲೂಕು ದಂಡಾಧಿಕಾರಿಗಳು ಮಂಜು ನಾಯಕ್ ಅವರು ಉದ್ಘಾಟಿಸಿದರು ದೇಶ ಹಾಗೂ ರಾಜ್ಯದ ಹಿಂದುಳಿದ ಜಿಲ್ಲೆಗಳಲ್ಲಿ ಇಂದಿಗೂ ಬಾಲಕಾರ್ಮಿಕ ಪದ್ಧತಿ ಆಚರಣೆಯಲ್ಲಿರುವುದು ಸಮಾಜದ ಸ್ವಾಸ್ಥ ಕ್ಕೆ ಮಾರಕವಾಗಿದೆ ಎಂದು ಕಂಪ್ಲಿ ತಾಲೂಕು ದಂಡಾಧಿಕಾರಿಗಳಾದ ಮಂಜು ನಾಯಕ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ತಾಲೂಕು ಆಡಳಿತ , ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ– ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 'ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ, ಮಕ್ಕಳಿಗೆ ನ್ಯಾಯಯುತ ರಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ' ಎಂಬ ಘೋಷವಾಕ್ಯದೊಂದಿಗೆ ನಗರದ ವಿಜಯನಗರ ಆಂಗ್ಲ ಮಾಧ್ಯಮ ಪ್ರೌಢಶಾಲೆ ಅವರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಮಾನವ ಸಂಪನ್ಮೂಲದ ಅಗತ್ಯ ಹೆಚ್ಚಿರುವ ಕಡೆಗಳಲ್ಲಿ ಸಣ್ಣ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ತೊಡಗಿಸಿಕೊಳ್ಳುವ ಪ್ರವೃತ್ತಿ ವ್ಯಾಪಕವಾಗಿ ಕಂಡುಬರುತ್ತಿದೆ. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳಲು ಸಮಾಜದಲ್ಲಿರುವ ತಪ್ಪು ಕಲ್ಪನೆಗಳು ಮತ್ತು ಆಲೋಚನೆಗಳೇ ಮುಖ್ಯ ಕಾರಣವಾಗಿದೆ. ಬಾಲಕಾರ್ಮಿಕರಿಗೆ ಹೆಚ್ಚಿನ ಸಂಬಳ ನೀಡುವ ಅಗತ್ಯವಿರುವುದಿಲ್ಲ ಮತ್ತು ಅತ್ಯಂತ ಕಡಿಮೆ ವೇತನದಲ್ಲಿ ಅವರಿಂದ ಹೆಚ್ಚಿನ ಕೆಲಸ ಮಾಡಿಸಿಕೊಳ್ಳಬಹುದು ಎನ್ನುವ ಶೋಷಣೆಯ ಮನೋಭಾವನೆ ಇಂದಿಗೂ ಜೀವಂತವಾಗಿದೆ. ಇಂತಹ ಆಲೋಚನೆಗಳು ಮಕ್ಕಳ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು, ಅವರ ವಿದ್ಯಾಭ್ಯಾಸದ ಪ್ರಗತಿಯನ್ನು ಕುಂಠಿತಗೊಳಿಸುತ್ತಿವೆ ಎಂದು ತಿಳಿಸಿದರು.

ಮಕ್ಕಳು ತಮ್ಮ ಬೆಳವಣಿಗೆಯ ಹಂತದಲ್ಲಿ ವಿದ್ಯಾಭ್ಯಾಸದ ಕಡೆಗೆ ಎಷ್ಟು ಗಮನ ಹರಿಸುತ್ತಾರೋ, ಅಷ್ಟೇ ಉತ್ತಮವಾಗಿ ಅವರು ದೊಡ್ಡವರಾದ ಮೇಲೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಆದರೆ, ಅವರು ಸಾಧನೆ ಮಾಡುವಂತಹ ಆರಂಭಿಕ ಹಂತದಲ್ಲೇ ಅವರ ಕೈಗೆ ಪುಸ್ತಕ ನೀಡುವ ಬದಲು ಕೆಲಸಕ್ಕೆ ದೂಡಿ, ಅವರ ಭವಿಷ್ಯವನ್ನು ಮೊಟಕುಗೊಳಿಸುವುದು ಅಕ್ಷಮ್ಯ ಅಪರಾಧವಾಗಿದೆ ಎಂದರು.

ಬಾಲಕಾರ್ಮಿಕ ಪದ್ಧತಿಯು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಹಿರಿಯರು ಮತ್ತು ಸಮಾಜದ ಪ್ರಮುಖರು ಬಾಲಕಾರ್ಮಿಕ ಪದ್ಧತಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಮಕ್ಕಳ ಬೆಳವಣಿಗೆಗೆ ಪೂರಕವಾದ ಮತ್ತು ಅನುಕೂಲಕರವಾದ ವಾತಾವರಣವನ್ನು ಸೃಷ್ಟಿಸುವ ಮೂಲಕ ಒಂದು 'ಸ್ವಸ್ಥ ಸಮಾಜ'ವನ್ನು ನಿರ್ಮಿಸಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಮಕ್ಕಳು ಬೇರೆ ಯಾವುದೇ ಕಡೆಗೆ ಗಮನ ಹರಿಸದೆ ಕೇವಲ ಶಿಕ್ಷಣ, ಕ್ರೀಡೆ ಹಾಗೂ ಸೃಜನಶೀಲ ಚಟುವಟಿಕೆಗಳ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಕೆಲವೊಮ್ಮೆ ನಿರಂತರ ಓದು ಬೇಸರ ತರಿಸಬಹುದು, ಆದರೆ ಶಿಕ್ಷಣವೇ ನಮ್ಮ ಭವಿಷ್ಯವನ್ನು ರೂಪಿಸುವ ಏಕೈಕ ಶಕ್ತಿ. ಓದು ಎಂದರೆ ಕೇವಲ ಪುಸ್ತಕ ಹಿಡಿದು ಕುಳಿತುಕೊಳ್ಳುವುದಲ್ಲ, ಅದು ವ್ಯಕ್ತಿತ್ವದ ಒಟ್ಟಾರೆ ಬೆಳವಣಿಗೆಗೆ ಕಾರಣವಾಗಬೇಕು. ಶಿಕ್ಷಣವು ಮನುಷ್ಯನ ವ್ಯಕ್ತಿತ್ವವನ್ನು ಸುಂದರವಾಗಿ ರೂಪಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ತಮ್ಮ ಗಮನ ಬೇ–ರೆಡೆಗೆ ಹರಿಯದಂತೆ ಜಾಗ್ರತೆ ವಹಿಸಿ, ಶಿಕ್ಷಣದ ಮಹತ್ವವನ್ನು ಅರಿತು ಮುನ್ನಡೆಯಬೇಕು ಎಂದು ಕರೆ ನೀಡಿದರು.

ಬಾಲಕಾರ್ಮಿಕ ಪದ್ಧತಿಯು ಕೇವಲ ಒಂದು ಮಗುವಿನ ಭವಿಷ್ಯವನ್ನು ಹಾಳು ಮಾಡುವುದಷ್ಟೇ ಅಲ್ಲ, ಇಡೀ ದೇಶದ ಪ್ರಗತಿಗೆ ದೊಡ್ಡ ಮಾರಕವಾಗಿದೆ. ಬಾಲಕಾರ್ಮಿಕರನ್ನು ಹೊಂದಿರುವ ದೇಶವು ಎಂದಿಗೂ ಮುನ್ನಡೆಯಲು ಸಾಧ್ಯವಿಲ್ಲ. 130 ಕೋಟಿಗೂ ಅಧಿಕ ಜನಸಂಖ್ಯೆ, ವೈವಿಧ್ಯಮಯ ಆಚಾರ–ವಿಚಾರಗಳು ಹಾಗೂ ಸುಮಾರು 2300 ಕ್ಕೂ ಹೆಚ್ಚು ಭಾಷೆಗಳನ್ನು ಹೊಂದಿರುವ ನಮ್ಮ ದೇಶದಲ್ಲಿ, ಎಲ್ಲೆಡೆ ತಲುಪಿ ಬದಲಾವಣೆ ತರುವುದು ಸರ್ಕಾರ ಮಾತ್ರವೇ ಆಗಿದೇ ನಾಗರಿಕರ ಕರ್ತವ್ಯವೂ ಪ್ರಮುಖವಾಗಿದೆ ಎಂದರು.ನಮ್ಮ ಸಂವಿಧಾನವು 14 ವರ್ಷದೊಳಗಿನ ಮಕ್ಕಳಿಗೆ ಉಚಿತ ಶಿಕ್ಷಣದ ಹಕ್ಕನ್ನು ನೀಡಿದೆ. ಅಂತಹ ಮಕ್ಕಳಿಗೆ ವಸತಿ ಶಾಲೆಗಳ ಸೌಕರ್ಯವೂ ಇದೆ. ಆದಾಗ್ಯೂ, ಪೋಷಕರಲ್ಲಿ ಅರಿವಿನ ಕೊರತೆಯಿಂದಾಗಿ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಪೋಷಕರಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಅರಿವು ಮೂಡಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದರು. ಈ ಸಂದರ್ಭದಲ್ಲಿ ಕಂಪ್ಲಿ ತಾಲೂಕು ಮಡದ ಎಲ್ಲಾ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಜೂ 14 ರಂದು ಆನ್‌ಲೈನ್ ಯೋಗಾ ಸೆಷನ್: ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗಿನ್ನಿಸ್ ರಿಕಾರ್ಡ್‌ಗೆ ಸಹಕರಿಸಿ

- ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.12–12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಪೂರ್ವಭಾವಿಯಾಗಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯ ವತಿಯಿಂದ ಇದೇ ಜೂನ್ 14ರಂದು Guinness World Record Attempt for the Largest Online Yoga Session ಅನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಿನಿಯಸ್ ವರ್ಡ್ ರಿಕಾರ್ಡ್‌ಗೆ ಸಹಕರಿಸಬೇಕೆಂದು ಕಲಬುರಗಿ ಜಿಲ್ಲಾ ಆಯುಷ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಆನ್‌ಲೈನ್ ಯೋಗಾ ಸೆಷನ್ (Online Yoga Session)ನಲ್ಲಿ ಭಾಗವಹಿಸಲು 18003157008 ಸಂಖ್ಯೆಗೆ ತಮ್ಮ ಮೊಬೈಲ್‌ದಿಂದ ಮಿಸ್ ಕಾಲ್ (miscall) ನೀಡಿ, ನಂತರ ತಮಗೆ ವ್ಯಾಟ್ಸ್‌ಆಫ್ (WhatsApp)ದಲ್ಲಿ ಸ್ವೀಕೃತಗೊಂಡ ಲಿಂಕ್‌ನ್ನು ಬಳಸಿಕೊಂಡು ಆ ಲಿಂಕ್‌ನ್ನು ಕ್ಲಿಕ್ ಮಾಡುವುದರ ಮೂಲಕ ಜೂನ್ 14 ರಂದು ಬೆಳಿಗ್ಗೆ 6.15 ರಿಂದ 7.45 ಗಂಟೆಯವರೆಗೆ ಜರುಗುವ ಯೋಗಾ ಸೆಷನ್ (yoga session) ಗೆ ಜಾಯಿನ್ (join) ಆಗಿ ಗಿನ್ನಿಸ್ ರಿಕಾರ್ಡ್‌ಗೆ ಸಹಕರಿಸಬೇಕು. ಅದೇ ರೀತಿ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಇದೇ ಜೂನ್ 21 ರಂದು ಬೆಳಿಗ್ಗೆ 6.45 ಗಂಟೆಗೆ ಕಲಬುರಗಿಯ ಡಾ. ಚಂದ್ರಶೇಖರ ಪಾಟೀಲ್ ಕ್ರೀಡಾಂಗಣದಲ್ಲಿ ಜರುಗುವ ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಅವರು ತಿಳಿಸಿದ್ದಾರೆ.

# ಎಸ ಎಸ್ ಎಲ್ ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ



ಅಖಿಲ ಕರ್ನಾಟಕ ಹೂಗಾರ ಮಹಾಸಭಾ ಜಿಲ್ಲಾ ಘಟಕ ಹಾಗೂ ತಾಲೂಕಾ ಹೂಗಾರ ಸಮಾಜದ ವತಿಯಿಂದ 2026 ನೇ ಸಾಲಿನ ಎಸ್. ಎಸ್. ಎಲ್. ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಇಲ್ಲಿನ ಅನುಭವ ಮಂಟಪ ಆವರಣದಲ್ಲಿ ದಿನಾಂಕ 14 ರಂದು ಬೆಳಿಗ್ಗೆ 10. 30 ಗಂಟೆಗೆ ನಡೆಯಲಿದೆ. ಕಾರ್ಯಕ್ರಮದ ದಿವ್ಯ ಸಾನಿಧ್ಯ ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ ಬಸವಲಿಂಗ ಪಟ್ಟದೇವರು. ವಹಿಸಲಿದ್ದಾರೆ. ನೇತ್ರತ್ವ ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಶಾಸಕರಾದ ಶರಣು ಸಲಗರ್ ಉದ್ಘಾಟಿಸುವರು. ಅಧ್ಯಕ್ಷತೆ ಹೂಗಾರ ಸಮಾಜದ ಜಿಲ್ಲಾಧ್ಯಕ್ಷರಾದ ರಾಜಕುಮಾರ ಹೂಗಾರ್. ಮುಖ್ಯ ಅತಿಥಿಗಳಾಗಿ ಬೆಂಗಳೂರು ಅಖಿಲ ಕರ್ನಾಟಕ ಹೂಗಾರ ಸಮಾಜದ ರಾಜ್ಯಾಧ್ಯಕ್ಷರಾದ ಶಂಕರ ಹೂಗಾರ. ಅತಿಥಿಗಳಾಗಿ ಜಿಲ್ಲಾ ಹೂಗಾರ ಸಮಾಜದ ಗೌರವ ಅಧ್ಯಕ್ಷರಾದ ರೇವಣಪ್ಪ ಹೂಗಾರ. ಅಫಜಲ್ ಪೂರ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹೂಗಾರ. ತಾಲೂಕ ಅಧ್ಯಕ್ಷರಾದ ವಿಠ್ಠಲ ಹೂಗಾರ ಗದಲೇಗಾಂವ. ರಾಜ್ಯ ಸದಸ್ಯರಾದ ಕಾಶಿನಾಥ ಹೂಗಾರ. ಹುಮನಾಬಾದ ತಾಲೂಕ ಅಧ್ಯಕ್ಷರಾದ ಪ್ರವೀಣ ಹೂಗಾರ. ಕಮಲನಗರ ಅಧ್ಯಕ್ಷರಾದ ಪ್ರಭಾಕರ ಹೂಗಾರ. ಚಿಟಗುಪ್ಪಾ ಅಧ್ಯಕ್ಷರಾದ ಸೂರ್ಯಕಾಂತ ಹೂಗಾರ ಸೇರಿದಂತೆ ಅನೇಕರು ಪಾಲ್ಗೊಳ್ಳಲಿದ್ದಾರೆ. ಈ ಸಂದರ್ಭದಲ್ಲಿ ವಿಶೇಷ ಸನ್ಮಾನಿತರು ಶಿವಕುಮಾರ ಪೂಲಾರಿ. ಸವಿತಾ ಹೂಗಾರ. ದುರ್ಯೋಧನ ಹೂಗಾರ. ಹಾಗೂ ಪ್ರಧಾನ ಕಾರ್ಯದರ್ಶಿ ಹಣಮಂತ ಹೂಗಾರ. ಸಂಘಟನಾ ಕಾರ್ಯದರ್ಶಿ ರವಿ ಹೂಗಾರ. ಸಂತೋಷ ಹೂಗಾರ ಸಂಚಾಲನೆ. ರಾಜೇಂದ್ರ ಹೂಗಾರ ವಂದನಾರ್ಪಣೆ. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸ ಬೇಕು ಎಂದು ಹೂಗಾರ ಸಮಾಜದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು. 12ರಂದು ವಿಶ್ವಕರ್ಮರ ಜನ ಜಾಗೃತಿ ಜಿಲ್ಲಾ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಅಖಿಲ ಕರ್ನಾಟಕ ವಿಶ್ವ ಕರ್ಮ ಮಹಾಸಭಾ ಜಿಲ್ಲಾ ವಿಶ್ವ ಕರ್ಮರ ಜನ ಜಾಗೃತಿ ಬೃಹತ್ ಸಮಾವೇಶ ಹಾಗೂ ಸಮಾಜದ ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರ ಪ್ರತಿಭಾ ಪುರಸ್ಕಾರ ಸಮಾರಂಭ ಬರುವ ತಿಂಗಳ ಜುಲೈ 12ರ ರವಿವಾರ ಬೆಳಿಗ್ಗೆ 9.30 ಗಂಟೆಗೆ ನಗರದ ಶ್ರೀ ಶಿವಶಾಂತ ವೀರ ಮಂಗಲ ಭವನ ದಲ್ಲಿ ಜರುಗಲಿದೆ ಎಂದು ಮಹಾಸಭಾ ರಾಜ್ಯ ಉಪಾಧ್ಯಕ್ಷ ನಾಗಲಿಂಗಪ್ಪ ಪತ್ತಾರ್ ತಿಳಿಸಿದರು,ಅವರು ಶುಕ್ರವಾರ ಇಲ್ಲಿನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿ ಕಾರ್ಯಕರ್ಮದ ಸಂಪೂರ್ಣ ವಿವರಣೆ ನೀಡಿದ ಅವರು ಕಾರ್ಯಕ್ರಮ ದಲ್ಲಿ ನಮ್ಮ ಸಮಾಜದ ಹಿರಿಯ ಮುಖಂಡ ಮಹಾಸಭಾ ರಾಜ್ಯ ಅಧ್ಯಕ್ಷ ಮಾಜಿ ಶಾಸಕ ಕೆಪಿ ನಂಜುಂಡಿ ವಿಶ್ವಕರ್ಮ ಇವರು ಆಗಮಿಸಲಿದ್ದು ಅವರ ಸಾರಥ್ಯದಲ್ಲಿ ಕೊಪ್ಪಳದಲ್ಲಿ ಜಿಲ್ಲಾ ಮಟ್ಟದ ನಮ್ಮ ಸಮಾಜದ ಬೃಹತ್ ಸಮಾವೇಶ ಆಯೋಜನೆಗೊಂಡಿದೆ ಎಂದು ತಿಳಿಸಿದರು,

ಮುಂದುವರೆದು ಮಾತನಾಡಿ ಇದೇ ವೇಳೆ ಪ್ರಸಕ್ತ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಗಣನೀಯ ಸಾಧನೆ ಮಾಡಿದ ನಮ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಕೂಡ ನಡೆಯಲಿದೆ, ಪ್ರಸಕ್ತ ಸಾಲಿನಲ್ಲಿ ಶೇಕಡ 75ರಷ್ಟು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು ಇದೇ ತಿಂಗಳ 30ನೇ ತಾರೀಕಿನ ಒಳಗಾಗಿ ತಮ್ಮ ಸಂಪೂರ್ಣ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು, ಕಾರ್ಯಕ್ರಮದಲ್ಲಿ ಸಮಾಜದ ಶ್ರೀ ಗಳು ,ಜನಪ್ರತಿನಿಧಿಗಳು ಸಮಾಜ ಸಂಘಟನೆಯ ಪದಾಧಿಕಾರಿಗಳು ಪಾಲ್ಗೊಳ್ಳುವವರು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯ ಘಟಕದ ಉಪಾಧ್ಯಕ್ಷರಾದ ನಾಗಲಿಂಗಪ್ಪ ಪತ್ತಾರ್ ಅವರು ಮಾಹಿತಿ ನೀಡಿದರು ಹಾಗೂ ಸಮಾಜ ಬಾಂಧವರು ತಮ್ಮ ತಮ್ಮ ಮಕ್ಕಳ ಮತ್ತು ಕುಟುಂಬದೊಂದಿಗೆ ಬೃಹತ್ ಸಮಾವೇಶದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪ್ರಕಟಣೆ ಮೂಲಕ ತಿಳಿಸಿ ಸರ್ವರನ್ನು ಸ್ವಾಗತಿಸಿದ್ದಾರೆ,

ಪತ್ರಿಕಾಗೋಷ್ಠಿಯಲ್ಲಿ ಸಂಘದ ಜಿಲ್ಲಾಧ್ಯಕ್ಷ ವೀರೇಶ್ ಶರಣಪ್ಪ ಪತ್ತಾರ್, ಕೊಪ್ಪಳ ತಾಲೂಕ ಅಧ್ಯಕ್ಷ ಶ್ರೀನಿವಾಸ್ ಪಂಡಿತ್ ,ಕುಷ್ಟಗಿ ತಾಲೂಕ ಅಧ್ಯಕ್ಷ ವೀರೇಶ್ ಕಮ್ಮಾರ್ ,ಕಾರಟಗಿ ತಾಲೂಕ ಅಧ್ಯಕ್ಷ ಹನುಮೇಶ್ ಆಚಾರ್, ಹಾಗೂ ಮುಖಂಡರಾದ ಪ್ರಭಾಕರ್ ಬಡಿಗೇರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕರ್ತವ್ಯಕ್ಕೆ ಹಾಜರಾಗಲು ಸೂಚನೆ

ಕಲಬುರಗಿ,ಜೂ.12–ಅಫಜಲಪೂರ ಪುರಸಭೆ ಕಚೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ಮಲ್ಲಪ್ಪಾ ಜೋರಾಪೂರ ಅವರು ಕಳೆದ ದಿನಾಂಕ: 16–08–2023 ರಿಂದ ಈವರೆಗೂ ಕಚೇರಿಯ ಕರ್ತವ್ಯಕ್ಕೆ ಗೈರು ಹಾಜರಾಗಿರುತ್ತಾರೆ ಎಂದು ಅಫಜಲಪುರ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಸದರಿ ನೌಕರರು ಕರ್ತವ್ಯಕ್ಕೆ ಹಾಜರಾಗುವಂತೆ ದಿನಾಂಕ:03–01–2026 ರಂದು ಈ ಸಿಬ್ಬಂದಿಯ ಖಾಯಂ ವಿಳಾಸವಾದ ಸಾ// ತಾಂಬಾ ತಾ// ಇಂಡಿ ಜಿ// ವಿಜಯಪೂರ ವಿಳಾಸಕ್ಕೆ ನೋಟೀಸ್ ಮೂಲಕ ತಿಳಿಸಲಾಗಿತ್ತು. ಸದರಿ ನೌಕರರಿಗೆ ನೋಟೀಸು ಮುಟ್ಟಿದರೂ ಈವರೆಗೂ ತಾವು ಅಫಜಲಪೂರ ಪುರಸಭೆಯ ದ್ವಿತೀಯ ದರ್ಜೆ ಸಹಾಯಕ ಹುದ್ದೆಯ ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ. ತಮ್ಮ ಈ ವರ್ತನೆಯು ಸೇವಾ ನಿಯಮಗಳ ವಿರುದ್ಧವಾಗಿರುತ್ತದೆ.

ಈ ಪ್ರಕಟಣೆಯು ದಿನಪತ್ರಿಕೆಯಲ್ಲಿ ಪ್ರಕಟಣೆಯಾದ ದಿನಾಂಕದಿಂದ 07 ದಿನದೊಳಗಾಗಿ ಕರ್ತವ್ಯಕ್ಕೆ ಹಾಜರಾಗಬೇಕು. ಒಂದು ವೇಳೆ ಕರ್ತವ್ಯಕ್ಕೆ ಹಾಜರಾಗದೇ ಇದ್ದ ಪಕ್ಷದಲ್ಲಿ ಕರ್ನಾಟಕ ನಾಗರೀಕ ಸೇವಾ ವರ್ಗಿಕರಣ ನಿಯಂತ್ರಣ ಮತ್ತು ಮೇಲ್ಮನವಿ ನಿಯಮ 1968ರ ನಿಯಮ 108 ರಂತೆ ಶಿಸ್ತುಕ್ರಮ ಜರುಗಿಸಲು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗುವುದೆಂದು ಅವರು ತಿಳಿಸಿದ್ದಾರೆ.

# ವಿಶ್ವ ಪರಿಸರ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ತಾಲೂಕಿನ ಅಲಗುಡ ಸರಕಾರಿ ಪ್ರೌಢ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಯನ್ನು ಸಸಿಗಳ ನ್ನು ನೆ ಡಿಸುವುದರ ಮೂಲಕ ಆಚರಿಸಲಾಯಿತ್ತು. ವಿಜ್ಞಾನ ಶಿಕ್ಷಕರಾದ ಬೊಮ್ಮಲಿಂಗಪ್ಪ.ಕೆ.ಸುಲ್ಟಾ ಪೋದ್ದಾರ.ಪರಿಸರ ಕುರಿತು ಮಾತನಾಡಿ ಅದರಿಂದಾಗುವ ಉಪಯೋಗ ಕುರಿತು ತಿಳಿಸಿದ್ದರು.ಅಧ್ಯಕ್ಷತೆ ಮುಖ್ಯ ಗುರುಗಳಾದ ರಮೇಶ ರಾಜೋಳೆ ವಹಿಸಿ ಶಾಲೆಯಲ್ಲಿ ಇನ್ನು ಹೆಚ್ಚಿನ ಗಿಡ ಮರಗಳನ್ನು ಹಚ್ಚಿ ಹಸಿರು ವಾತಾವರಣ ಮೂಡಿಸಲಾಗುವುದು ಎಂದರು. ಶಾಲಾ ಎಸ್.ಡಿ.ಎಂ. ಸಿ.ಸದ್ಯಸರು.ಶಿಕ್ಷಕ ಸಿಬ್ಬಂದಿ ವರ್ಗ ವಿಧ್ಯಾರ್ಥಿಗಳು ಸೇರಿದಂತೆ ಅನೇಕರು ಭಾಗವಹಿಸಿದ್ದರು.ಸ್ವಾಗತಹಾಗೂ ಸಂಚಲನೆ ಶಿಕ್ಷಕರಾದ ಹರ್ಷವರ್ಧನ ಕಾಂಬಳೆ ನಿರ್ವಹಿಸಿದ್ದರು.

# ಬೀದರ್ ಪಿ.ಎಚ್.ಡಿ ವಿದ್ಯಾರ್ಥಿಗಳ ಅಂತಾರಾಷ್ಟ್ರೀಯ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ




ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜೂನ್ 5ರಂದು ಥಾಯ್ಲೆಂಡ್‌ನ ಬ್ಯಾಂಕಾಕ್‌ನಲ್ಲಿರುವ ಏಷ್ಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (AIT)ಯಲ್ಲಿ ನಡೆದ ಪ್ರತಿಷ್ಠಿತ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿ ವಿಶ್ವವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ಈ ಸಮ್ಮೇಳನದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರನ್ನು ಪ್ರತಿನಿಧಿಸಿದ್ದ, ಬೀದರ್ ಜಿಲ್ಲೆಯ ಬೀದರ್ ತಾಲೂಕಿನ ಗುಮ್ಮ ಗ್ರಾಮದ ಪಿ.ಎಚ್.ಡಿ. ಸಂಶೋಧನಾ ವಿದ್ಯಾರ್ಥಿ ಅಂಕೇಶ ತಂದೆ ಶಂಕರ ಅವರು ತಮ್ಮ ಸಂಶೋಧನಾ ಕಾರ್ಯಕ್ಕಾಗಿ "ಅತ್ಯುತ್ತಮ ಸಂಶೋಧನಾ ವಿದ್ವಾಂಸ ಪ್ರಶಸ್ತಿ–2026" ಪ್ರಶಸ್ತಿಯನ್ನು ಪಡೆದಿದ್ದಾರೆ. ಅದೇ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ಕಮಲನಗರ್ ತಾಲೂಕಿನ ಬಳತ್ ಕೆ. ಗ್ರಾಮದ ಮತ್ತೋರ್ವ ಪಿ.ಎಚ್.ಡಿ ಸಂಶೋಧನಾ ವಿದ್ಯಾರ್ಥಿ ಸತೀಶ ತಂದೆ ವೈಜಿನಾಥ ಅವರು "ಯುವ ಸಂಶೋಧನಾ ಫೆಲೋ ಪ್ರಶಸ್ತಿ–2026" ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಅಂತರಾಷ್ಟ್ರೀಯ ಮಟ್ಟದ ವೇದಿಕೆಯಲ್ಲಿ ಈ ಇಬ್ಬರು ಯುವ ಸಂಶೋಧಕರು ಪಡೆದಿರುವ ಗೌರವವು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರಿನ ಶೈಕ್ಷಣಿಕ ಮತ್ತು ಸಂಶೋಧನಾ ಗುಣಮಟ್ಟವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಇವರ ಸಾಧನೆಯು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರೇರಣೆ–ಯಾಗಿದ್ದು, ಬೀದರ್ ಜಿಲ್ಲೆ ಹಾಗೂ ಕರ್ನಾಟಕ ರಾಜ್ಯಕ್ಕೆ ಹೆಮ್ಮೆ ತರುವಂತದ್ದಾಗಿದೆ.

ವಿದ್ಯಾರ್ಥಿಗಳ ಈ ಅಪೂರ್ವ ಸಾಧನೆಗೆ ವಿಶ್ವವಿದ್ಯಾಲಯದ ಕುಲಪತಿ, ಅಧ್ಯಾಪಕರು, ಸಂಶೋಧಕರು ಹಾಗೂ ವಿದ್ಯಾರ್ಥಿ ಸಮುದಾಯ ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಡೆಸ್ಕ್ ದೇಣಿಗೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣದ ಗೋಸಲರಾಯನ ಪೇಟೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳ ಅತ್ಯುತ್ತಮ ಕಲಿಕೆಗಾಗಿ ಬೆಂಗಳೂರು ಸೀನಿಯರ್ ಲೇಬರ್ ಇನ್ಸ್‌ಪೆಕ್ಟರ್ ಹೊನ್ನಪ್ಪ ದಫೆದಾರ್ ಡೆಸ್ಕಗಳನ್ನು ದೇಣಿಗೆ ರೂಪದಲ್ಲಿ ನೀಡಿದರು.

ಶಾಲೆಯಲ್ಲಿ ಕಲಿತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ನೆರವಿಗಾಗಿ ಹಾಗೂ ಶಿಸ್ತುಭದ್ಧವಾಗಿ ಡೆಸ್ಕಲ್ಲಿ ಕುಳಿತುಕೊಳ್ಳಲು ಡೆಸ್ಕ್‌ಗಳನ್ನು ನೀಡುವ ಮಾನವಿ?ಯ ಕಾರ್ಯ ನಡೆದಿದ್ದು, ಡೆಸ್ಕ್ ಪಡೆದ ಶಾಲೆಯ ವಿದ್ಯಾರ್ಥಿಗಳು ಖುಷಿಯಿಂದ ಡೆಸ್ಕ್ ಮೇಲೆ ಕುಳಿತು ಪಾಠ ಕೇಳುವಂತಾಗಿದೆ. ಇದ–ರಿಂದ ಮಕ್ಕಳಿಗೆ ಬರೆಯಲು ಅನುಕೂಲವಾಗಿದೆ. ಜತೆಗೆ, ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದಲೂ ಡೆಸ್ಕ್ ವಿತರಣೆ ಮಾಡಿರುವ ಕಾರ್ಯಕ್ಕೆ ಎಲ್ಲೆಡೆ ಶ್ಲಾಘನೆಯೂ ವ್ಯಕ್ತವಾಗಿದೆ.ಸರಕಾರಿ ಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ ಮಕ್ಕಳಲ್ಲಿ ಬಹುತೇಕರು ಬಡ ಕುಟುಂಬಗಳಿಂದ ಬಂದವರೇ ಆಗಿರುತ್ತಾರೆ. ಅವರಿಗೆ ಕುಳಿತುಕೊಳ್ಳಲು ಹಾಗೂ ಬರವಣಿಗೆಗೆ ನೆರವಾಗಲು ಡೆಸ್ಕ್‌ಗಳು ಇಲ್ಲವಾಗಿದೆ. ಹೀಗಾಗಿ, ಮಕ್ಕಳ ಓದುವಿಕೆಗೆ ನೆರವಾಗಲಿ ಎನ್ನುವ ಏಕೈಕ ಕಾರಣಕ್ಕೆ ಡೆಸ್ಕ್‌ಗಳನ್ನು ವಿತರಣೆ ಮಾಡಲಾಗಿದೆ ಎನ್ನುವ ಮಾತು ದೇಣಿಗೆ ನೀಡಿರುವ ಹೊನ್ನಪ್ಪ ದಪೇದರ್ ಅವರ ಮನದಾಳದ ಮಾತಾಗಿದೆ.

ಈ ವೇಳೆ ಶಾಲಾ ವಿದ್ಯಾರ್ಥಿಗಳು, ಪಾಲಕರು, ಶಿಕ್ಷಕರು ಹಾಗೂ ಶಿಕ್ಷಕಿಯರು ಸೇರಿದಂತೆ ವಾರ್ಡ್ ಮುಖಂಡರು ಗಂಗಾಧರ, ಗೋಸ್ಲಪ್ಪ ಸೇರಿದಂತೆ ಇತರರಿದ್ದರು.

# ಜೂನ್ ತಿಂಗಳಲ್ಲಿಯೇ ಎರಡು ತಿಂಗಳ ಪಡಿತರ ಹಂಚಿಕೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.12–ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಕಲಬುರಗಿ ಜಿಲ್ಲೆಯ ಪಡಿತರ ಚೀಟಿದಾರರಿಗೆ 2026ರ ಮೇ ಮತ್ತು ಜೂನ್ ಮಾಹೆಗಳ ಪಡಿತರ ಹಂಚಿಕೆಯನ್ನು ಜೂನ್ ಮಾಹೆಯಲ್ಲಿಯೇ ವಿತರಣೆ ಮಾಡಲು ಸೂಚಿಸಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ತಿಳಿಸಿದ್ದಾರೆ. ಸರ್ಕಾರದ ಮಾರ್ಗಸೂಚಿಯಂತೆ ಏಕ–ಸದಸ್ಯ,ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಫಲಾನುಭವಿಗಳಿರುವ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಪ್ರತಿ ಫಲಾನುಭವಿಗೆ ಮತ್ತು ಪಿಹೆಚ್‌ಹೆಚ್ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ. ಅಕ್ಕಿಯನ್ನು ವಿತರಣೆ ಮಾಡಬೇಕಾಗಿದೆ.

# ಬಾಲ್ಯದ ಬದುಕಿಗೆ ಕತ್ತಲು ಬೇಡ, ಬಾಲಕಾರ್ಮಿಕ ಮುಕ್ತ ಸಮಾಜ ರೂಪಿಸಲು ಇ.ಬಾಲಕೃಷ್ಣ ಕರೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಸಮಾಜದಲ್ಲಿ ಬಡತನವಿದ್ದರೂ ಅದನ್ನು ಹೋಗಲಾಡಿಸಲು ಸರ್ಕಾರ ಪಂಚ ಗ್ಯಾರಂಟಿ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೆ ತಂದಿದೆ. ಹೀಗಿದ್ದೂ ಬಡತನದ ನೆಪವೊಡ್ಡಿ ಮಕ್ಕಳನ್ನು ಶಾಲೆಗೆ ಕಳುಹಿಸದೆ ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ. ಪ್ರತಿಯೊಬ್ಬರೂ ಕೈಜೋಡಿಸಿದರೆ ಮಾತ್ರ ಬಾಲಕಾರ್ಮಿಕ ಮುಕ್ತ ಸಮಾಜ ರೂಪಿಸಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಅವರು ಹೇಳಿದರು.



ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ವಕೀಲರ ಸಂಘ, ವಿವಿಧ ಇಲಾಖೆ ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ದೇಶದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 1986 ರಲ್ಲೇ ಬಾಲಕಾರ್ಮಿಕ ವಿರೋಧಿ ಕಾಯ್ದೆ ತರಲಾಗಿದ್ದು, ಕಾಲಕಾಲಕ್ಕೆ ತಿದ್ದುಪಡಿಗಳ ಮೂಲಕ ಇದನ್ನು ಮತ್ತಷ್ಟು ಬಲಪಡಿಸಲಾಗಿದೆ. ಕಾಯ್ದೆಯನ್ವಯ ಮಕ್ಕಳನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ. ಮೊದಲ ಬಾರಿಗೆ ಅಪರಾಧ ಎಸಗಿದರೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ವಾಸ. ಅದೇ ತಪ್ಪನ್ನು ಪುನರಾವರ್ತಿಸಿದರೆ 2 ವರ್ಷದಿಂದ 3 ವರ್ಷಗಳವರೆಗೆ ಕಠಿಣ ಜೈಲು ಶಿಕ್ಷೆ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದರು.ಈ ವರ್ಷದ ಘೋಷವಾಕ್ಯವಾದ "ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ, ಮಕ್ಕಳಿಗೆ ನ್ಯಾಯಯುತ ಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ" ಎಂಬುದನ್ನು ಕೇವಲ ಮಾತಿಗೆ ಸೀಮಿತಗೊಳಿಸದೆ, ಪ್ರಾಯೋಗಿಕವಾಗಿ ಜಾರಿಗೆ ತರಬೇಕಿದೆ. ಯಾವುದೇ ಅಪಾಯಕಾರಿ ಉದ್ಯಮ, ಹೋಟೆಲ್ ಅಥವಾ ಸಂಸ್ಥೆಗಳು ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳಬಾರದು. ಮಕ್ಕಳ ಭವಿಷ್ಯ ರೂಪಿಸಲು ಶಿಕ್ಷಣವೇ ಏಕೈಕ ಅಸ್ತ್ರ. ನಾವೆಲ್ಲರೂ ಬಾಲ್ಯದಲ್ಲಿದ್ದಾಗ ನಮ್ಮೊಂದಿಗೆ ಓದಬೇಕಿದ್ದ ಎಷ್ಟೋ ಗೆಳೆಯರು ಶಿಕ್ಷಣದಿಂದ ವಂಚಿತರಾಗಿ ಬಾಲಕಾರ್ಮಿಕರಾಗಿರುವುದು ಕಂಡಿದ್ದೇವೆ. ಅಂತಹ ಪರಿಸ್ಥಿತಿ ಇಂದಿನ ಮಕ್ಕಳಿಗೆ ಬರಬಾರದು ಎಂದು ಆಶಯ ವ್ಯಕ್ತಪಡಿಸಿದ ಅವರು, ಮಕ್ಕಳ ಹಕ್ಕುಗಳ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸುವುದು ಮತ್ತು ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಹೇಳಿದರು.

ತಮ್ಮ ವ್ಯಾಪ್ತಿಯಲ್ಲಿನ ಹೋಟೆಲ್, ಗ್ಯಾರೇಜ್ ಅಥವಾ ಇನ್ಯಾವುದೇ ಕಡೆಗಳಲ್ಲಿ ಮಕ್ಕಳು ಕಾರ್ಮಿಕರಾಗಿ ಕೆಲಸ ಮಾಡುತ್ತಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡುವವರ ಹೆಸರನ್ನು ಗೌಪ್ಯವಾಗಿಡಲಾಗುವುದು ಮತ್ತು ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಧಾವಿಸಿ ಮಕ್ಕಳಿಗೆ ಸೂಕ್ತ ಪುನರ್ವಸತಿ ಕಲ್ಪಿಸಲಿದ್ದಾರೆ ಎಂದು ಅವರು ಹೇಳಿದರು.ಬಾಲ ಕಾರ್ಮಿಕ ಮುಕ್ತ ಸಮಾಜ ಕೇವಲ ಸರ್ಕಾರದ ವ್ಯವಸ್ಥೆಯಿಂದ ಮಾತ್ರ ತಡೆಯಲು ಸಾಧ್ಯವಿಲ್ಲ. ಮಕ್ಕಳ ಭವಿಷ್ಯವನ್ನು ಕತ್ತಲೆಗೆ ತಳ್ಳುತ್ತಿರುವ ಬಾಲಕಾರ್ಮಿಕ ಪದ್ಧತಿಯನ್ನು ಹೋಗಲಾಡಿಸಲು ಪಾಲಕರು, ಅಧಿಕಾರಿಗಳು, ನ್ಯಾಯಾಂಗ ವ್ಯವಸ್ಥೆ, ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು. ಜಾಗೃತಿ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಇಡೀ ಸಮಾಜ ಒಟ್ಟಾಗಿ ನಿಂತು ಬಾಲಕಾರ್ಮಿಕ ಪದ್ಧತಿಗೆ ರೆಡ್ ಕಾರ್ಡ್ ತೋರಿಸುವ ಮೂಲಕ ಆ ಮುಗ್ಧ ಮಕ್ಕಳ ಉಜ್ವಲ ಭವಿಷ್ಯಕ್ಕೆ ಮುನ್ನುಡಿ ಬರೆಯಬೇಕಿದೆ ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಡೊಂಬರಮತ್ತೂರ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ, ಕ್ಷೇತ್ರ ಶಿಕ್ಷಣಾಧಿಕಾರಿ ಉಮಾಪತಿ, ಕಾರ್ಮಿಕ ನಿರೀಕ್ಷಕರಾದ ಜಿ.ಬಿ.ದೂಪದ್, ಶಿವಶಂಕರ್ ಬಿ ತಳವಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಬಾಲಕಾರ್ಮಿಕ ಪದ್ಧತಿ ವಿರೋಧಿಸಿ ಜಾಗೃತಿ ಜಾಥ

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಂ.ರಾಜಶೇಖರ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎನ್.ಸುಬ್ರಮಣ್ಯ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಶಾಂತ್ ನಾಗಲಾಪುರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್ ನಗರದ ಅಂಬೇಡ್ಕರ್ ವೃತ್ತದಲ್ಲಿ ಬಾಲಕಾರ್ಮಿಕ ಪದ್ಧತಿ ವಿರೋಧಿಸಿ ಜಾಗೃತಿ ಜಾಥಕ್ಕೆ ಚಾಲನೆ ನೀಡಿದರು.

ಜಾಗೃತಿ ಜಾಥವು ಅಂಬೇಡ್ಕರ್ ವೃತ್ತದಿಂದ ಆರಂಭವಾಗಿ ಪುನೀತ್ ರಾಜ್‌ಕುಮಾರ್ ವೃತ್ತ, ಮೂರಂಗಡಿ ಸರ್ಕಲ್, ಜಿಲ್ಲಾ ಆಸ್ಪತ್ರೆ, ನಗರಸಭೆ, ಸಾವಿಗಿ ಮಾರುಕಟ್ಟೆ ಮುಖಾಂತರ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಸಮಾಪ್ತಿಗೊಂಡಿತು.

ಈ ವೇಳೆ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತರ್, ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಐ. ಡೊಂಬರಮತ್ತೂರ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ವೆಂಕಟೇಶ್ ರಾಮಚಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ ಸೇರಿದಂತೆ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## CITATION

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2277/2026.**

**Petitioners:**

1. Ameer Patel S/o Miya Patel, Age : 39-yrs. Occu : Agriculture. R/o Village Kappargaon. Tq. Humnabad.
2. Syed Nijamuddin S/o Syed Ahmed, Age: 56-yrs. Occu: Agriculture.
3. Rihana Begum D/o Mohammed Razag, Age: 50-yrs. Occu :House hold. Petitioner No.2 and 3 R/o Village Kappargaon. Now at Hyderabad.
4. Muneera Begum W/o Miya Patel, Age: 67-yrs. Occu : House hold.
5. Mastan Miyan S/o Miyan Patel, Age: 56-yrs. Occu : Agriculture.
6. Alimoddin S/o Miyan Patel, Age : 36-yrs. Occu : Agriculture. Petitioner No.4 to 6 R/o Village Kappargaon. Tq. Humnabad.
7. Tahera Begum D/o Shamsheer, Age: 64-yrs. Occu: Agriculture. R/o Village Rajeshwar. Tq. Basavakayan.
8. Sabeera Bee W/o Khasim Shaikh, Age: 45-yrs. Occu: House hold. R/o Gulbarga.
9. Mohammed Zakir S/o Maheboob Sab, Age: 40-yrs. Occu: Agriculture R/o Village Kappargaon. Now at Hyderabad.
10. Jarina W/o Valikhan Pathan, Age: 40-yrs. Occu : House hold. R/o Village Kappargaon. Now at Mumbai.
11. Farheen Begum D/o Syed Basith, Age: 42-yrs. Occu: House hold. R/o Village Kappargaon. Now at Hyderabad.
12. Heena Banu W/o Shafique Sayyed, Age: 46-yrs. Occu: House hold. R/o Village Kappargaon. Now at Mumbai.
13. Nousheen W/o Yasin Shaikh, Age: 36-yrs. Occu: House hold. R/o Village Kappargaon. Now at Mumbai.

**Respondent:**

The Registrar of Birth and Death through The Tahasildar Humnabad.

**Sub:**

**Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Brother of petitioner No.1 and Father of the petitioner No. 2 to 13 by namely LATE. SYED AHMED S/O SYED AMEER PATEL, who was died on 01.05.1980 at VillageKappargaon.

Tq. Humnabad. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 07.07.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 03-06-2026

**/ /By order of the court//**
**Chief Ministerial Officer, Prl. Civil Judge & JMFC Court, Humnabad.**

# ಬಾಲ ಕಾರ್ಮಿಕ ಪದ್ಧತಿ ನಿವಾರಣೆಗೆ ಜಾಗೃತಿ ಅಗತ್ಯ: ನ್ಯಾ. ಸಿದ್ದರಾಮಪ್ಪ ಕಲ್ಯಾಣರಾವ್

- ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 12: ಸಮಾಜದಲ್ಲಿ ಬೇರು ಬಿಟ್ಟಿರುವ ಹಲವು ಸಾಮಾಜಿಕ ಪಿಡುಗುಗಳಿಗೆ ಶಿಕ್ಷಣವೇ ಅಸ್ತ್ರ. ಅದರಂತೆ ಬಾಲಕಾರ್ಮಿಕ ಪದ್ಧತಿ ನಿವಾರಣೆಯಾಗಬೇಕಾದರೆ ಎಲ್ಲರಿಗೂ ಶಿಕ್ಷಣ ಸಿಗುವಂತಾಗಬೇಕು. ಅರಿವಿನ ಕೊರತೆಯಿಂದಾಗಿಯೇ ಇಂತಹ ಪದ್ಧತಿಗಳು ಇಂದಿಗೂ ಜೀವಂತವಾಗಿವೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು.ಜೂನ್ 12ರ ಶುಕ್ರವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೋಲಿಸ್ ಇಲಾಖೆ, ಮಹಾನಗರ ಪಾಲಿಕೆ, ಶಿಕ್ಷಣ ಇಲಾಖೆ,ಕಾರ್ಮಿಕ ಇಲಾಖೆ,ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಘಟಕ, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಜಿಲ್ಲಾ ಬಾಲಕಾರ್ಮಿಕ ಯೊಜನೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕುರಿತು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯ ನಿರ್ವಹಣೆ ಮಾಡಬೇಕು. ವಿವಿಧ ಕಾರಣಗಳಿಗೆ ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ ಶಿಕ್ಷಣ ನೀಡಿದಾಗ ಮಾತ್ರ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯಾಗುತ್ತದೆ ಎಂದರು.

ಹದಿನಾಲ್ಕು ವರ್ಷದೊಳಗಿನ ಮಕ್ಕಳನ್ನು ಅವರ ಶಿಕ್ಷಣ ಹಕ್ಕಿನಿಂದ ವಂಚಿಸಿ, ದುಡಿಮೆಗೆ ಬಳಸುವುದು ಕಾನೂನು ಪ್ರಕಾರ ಅಪರಾಧ. ಇದಕ್ಕಾಗಿ, ಮಕ್ಕಳಿಂದ ದುಡಿಸಿಕೊಳ್ಳುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಕಾನೂನಿನಡಿ ಶಿಕ್ಷೆ ವಿಧಿಸಲು ಅವಕಾಶವಿದೆ. ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರುದ್ಧ ನಿಗಾ ಇಡಬೇಕು ಎಂದು ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿಯನ್ನ ಬೇರು ಸಮೇತ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಸರ್ಕಾರದ ಈ ಪ್ರಯತ್ನಕ್ಕೆ ಸಂಘ–ಸಂಸ್ಥೆ, ಸಂಘಟನೆಗಳು ಹಾಗೂ ಸಮುದಾಯಗಳು ಸಹ ಕೈ ಜೋಡಿಸಿದರೆ ಈ ಪದ್ಧತಿಗೆ ಸಂಪೂರ್ಣ ಕಡಿವಾಣ ಬೀಳಲಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ ಅವರು ಮಾತನಾಡಿ, ಬಾಲ ಕಾರ್ಮಿಕರನ್ನು ಪತ್ತೆಗೆ ಸಾರ್ವಜನಿಕರು ಸಹ ನೆರವಾಗಬೇಕು. ತಮ್ಮ ಸುತ್ತಮುತ್ತಲಿನ ಅಂಗಡಿ, ಹೋಟೆಲ್, ಕಾರ್ಖಾನೆ, ತೋಟ ಸೇರಿದಂತೆ ಎಲ್ಲಿಯಾದರೂ ಬಾಲ ಕಾರ್ಮಿಕರು ಕಂಡುಬಂದಲ್ಲಿ ಕಾರ್ಮಿಕ ಇಲಾಖೆಯ 1098 ಸಹಾಯವಾಣಿಗೆ ಮಾಹಿತಿ ನೀಡಬೇಕು. ಆಗ ಅಧಿಕಾರಿಗಳು ಬಂದು ಮಕ್ಕಳನ್ನು ರಕ್ಷಿಸುತ್ತಾರೆ ಎಂದರು.

14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016ರಡಿ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು.

ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡುವುದರ ಮೂಲಕ ಸಮಾಜದಲ್ಲಿರುವ ಬಾಲಕಾರ್ಮಿಕ ಪದ್ಧತಿ ಎಂಬ ಪಿಡುಗನ್ನು ಹೋಗಲಾಡಿಸಲು ಎಲ್ಲಾರು ಸಹಕಾರ ನೀಡಬೇಕೆಂದರು.

ಪ್ರಮಾಣ ವಚನ: ನಾನು ಸತ್ಯವಾಗಿ, ಪ್ರಾಮಾಣಿಕವಾಗಿ ಹಾಗೂ ಆತ್ಮಸಾಕ್ಷಿಯಾಗಿ ಪ್ರಮಾಣ ಮಾಡುವುದೇನೆಂದರೆ, ನಾನು ವಾಸಿಸುವ ಸುತ್ತ ಮುತ್ತಲಿನ ಪ್ರದೇಶ ಹಾಗೂ ನಾನು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ಬಾಲಕಾರ್ಮಿಕರು ಕಂಡುಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುತ್ತೇನೆ. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ತೊಡಗಿಸಿಕೊಂಡು ತಯಾರಿಸಲ್ಪಟ್ಟ ಯಾವುದೇ ವಸ್ತುವನ್ನು ಉಪಯೋಗಿಸುವುದಿಲ್ಲ ಮತ್ತು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಸೇವೆಯನ್ನು ಪಡೆಯುವುದಿಲ್ಲವೆಂದು ವಿಶ್ವಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವಾದ ಇಂದು ಪ್ರಮಾಣ ಮಾಡುತ್ತೇನೆ ಎಂದು ರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–2026ರ ಕಾರ್ಯಕ್ರಮದ ಅಂಗವಾಗಿ ಪ್ರಮಾಣ ವಚನ ಭೋದಿಸಿದರು.

ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ: ಬೆಳಿಗ್ಗೆ 09.20ರ ನಂತರ ನಗರದ ತಹಶಿಲ್ದಾರ್ ಕಾರ್ಯಾಲಯದಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–2026ರ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.

ಜಾಥಾದಲ್ಲಿ ಪ್ರತಿಯೊಬ್ಬ ಮಗುವಿನ ಹಕ್ಕು ಶಿಕ್ಷಣ, ದುಡಿಮೆಯಲ್ಲ. ಕೈಯಲ್ಲಿ ಕೆಲಸದ ಆಯುಧ ಬೇಡ, ಜ್ಞಾನದ ಪುಸ್ತಕವಿರಲಿ. ಬಾಲಕಾರ್ಮಿಕ ಪದ್ಧತಿ ದೇಶಕ್ಕೆ ಕಳಂಕ.! ಬಾಲ್ಯದಲ್ಲಿ ದುಡಿಮೆ ಮಕ್ಕಳ ಹಕ್ಕುಗಳ ಕಸಿತ, ಶಿಕ್ಷಣವೇ ಅವರ ನಿಜವಾದ ಭವಿಷ್ಯ ಎಂಬ ಘೋಷಣೆಗಳ ಸಾರ್ವಜನಿಕರ ಗಮನ ಸೆಳೆಯಿತು.

ಜಾಥಾದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸೇರಿದಂತೆ ಇತರರು ವಿದ್ಯಾರ್ಥಿಗಳಿಗೆ ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸುದರ್ಶನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ರಾಯಚೂರು ವೃತ್ತ ಕಾರ್ಮಿಕ ನಿರೀಕ್ಷಕಿ ಕುಮಾರಿ ಪ್ರಿಯಾಂಕ ಸೇರಿದಂತೆ ಕಾರ್ಮಿಕ ಇಲಾಖೆಯ ವಿವಿಧ ಅಧಿಕಾರಿಗಳು, ವಿವಿಧ ಶಾಲಾ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

# ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಡಾ.ಹಂಪಣ್ಣ



- ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 12: ನಗರದ ಜಿಲ್ಲಾ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜೂನ್ 21 ರಂದು ಬೆಳಿಗ್ಗೆ 6.45ಗಂಟೆಗೆ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಯೋಜಿಸಲಾಗುವುದು.ಸಾವಿರಾರು ಯೋಗಾಪಟುಗಳು ಭಾಗವಹಿಸುವರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ನಡೆಸಲಾಗುವುದು. ಇದಕ್ಕೆ ಬೇಕಾದ ಸಿದ್ಧತೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕೈಗೊಳ್ಳಬೇಕೆಂದು ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್ ಅವರು ಸೂಚಿಸಿದರು.ಜೂನ್ 12ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಯೋಗವನ್ನು ಕೇವಲ ಒಂದೇ ದಿನಕ್ಕೆ ಸೀಮಿತಗೊಳಿಸದೇ ಪ್ರತಿದಿನ ಯೋಗಾಸನಗಳನ್ನು ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಆರೋಗ್ಯ ರಕ್ಷಣೆಗೆ ಯೋಗ ಅತ್ಯುತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದರು. ಅಂದು ಬೆಳಿಗ್ಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ,ಕಾಲೇಜು ವಿದ್ಯಾರ್ಥಿಗಳು ಹಾಗೂ ವಿವಿಧ ಸಂಸ್ಥೆಗಳ ಯೋಗ ಆಸಕ್ತರು ಭಾಗವಹಿಸಲಿದ್ದು, ಜೂನ್ 18 ಮತ್ತು 19ರಂದು ಯೋಗ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಬೇಕು. ಕಾರ್ಯಕ್ರಮದ ಯಶಸ್ವಿಗಾಗಿ ವಿವಿಧ ಇಲಾಖೆಗಳಿಗೆ ವಿವಿಧ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದ್ದು, ಅವುಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸಹಾಯಕ ಆಯುಕ್ತರು ಸೂಚಿಸಿದರು.

ಯೋಗ ನಡೆಯುವ ಸ್ಥಳದಲ್ಲಿ ಆಂಬುಲೆನ್ಸ್, ಕುಡಿಯುವ ನೀರು ಹಾಗೂ ಇನ್ನಿತರ ಮೂಲ ಸೌಕರ್ಯಗಳನ್ನು ಒದಗಿಸಬೇಕು. ಮಹಾನಗರ ಪಾಲಿಕೆಯಿಂದ ಸ್ವಚ್ಚತೆ ಹಾಗೂ ನೀರಿನ ವ್ಯವಸ್ಥೆ ಹಾಗೂ ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಯವರು, ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ತಮಗೆ ಅನುಕೂಲಕರವಾದ ಸಮಯದಲ್ಲಿ ಆನ್‌ಲೈನ್ ಮೂಲಕ ಯೋಗ ತರಬೇತಿಯನ್ನು ಪಡೆಯಬಹುದು. ಆನ್‌ಲೈನ್ ಮೂಲಕ ಯೋಗ ತರಬೇತಿಗೆ ನೋಂದಾಯಿಸಿಕೊಂಡು ಯೋಗಾಭ್ಯಾಸ ಮಾಡಬಹುದು ಎಂದು ಅವರು ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪ್ರವೀಣ ಕುಮಾರ್, ಪದವಿ ಪೂರ್ವ ಕಾಲೇಜಿನ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುನೀತಾ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ಆಹಾರ ಇಲಾಖೆ ವ್ಯವಸ್ಥಾಪಕ ಹರೀಶ್ ಡಿ., ರಾಯಚೂರು ಮಹಾನಗರ ಪಾಲಿಕೆಯ ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ವಿವಿಧ ಸಂಘ, ಸಂಸ್ಥೆಯ ಮುಖಂಡರು ಸಭೆಯಲ್ಲಿ ಇದ್ದರು.

# ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಿ: ಶಾಸಕ ಬಸನಗೌಡ ದದ್ದಲ್

- ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 12 : ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಮುಂಗಾರು ಬಿತ್ತನೆ ಪ್ರಾರಂಭವಾಗಲಿದ್ದು, ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ಸಕಾಲದಲ್ಲಿ ನಿಗದಿತ ಬೆಲೆಯಲ್ಲಿ ಒದಗಿಸಬೇಕು. ರೈತರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜೂನ್ 12ರ ಶುಕ್ರವಾರ ದಂದು ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕ್ಷೇತ್ರದಲ್ಲಿ ಅಗತ್ಯ ಪ್ರಮಾಣದ ರಸಗೊಬ್ಬರವನ್ನು ಕಾಯ್ದಿರಿಸಲು ಮತ್ತು ಅದರ ಸಕಾಲಿಕ ವಿತರಣೆಗೆ ಕ್ರಮ ಕೈಗೊಳ್ಳಬೇಕು. ರೈತರಿಗೆ ಸಕಾಲದಲ್ಲಿ ಗೊಬ್ಬರ ಸಿಗುವಂತೆ ವ್ಯವಸ್ಥೆ ಮಾಡಬೇಕು. ರಸಗೊಬ್ಬರ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸುವುದನ್ನು ತಡೆಗಟ್ಟಲು ಕೃಷಿ ಇಲಾಖೆ ಅಧಿಕಾರಿಗಳು ನಿರಂತರ ನಿಗಾವಹಿಸಬೇಕು ಎಂದು ಹೇಳಿದರು.

ರಾಯಚೂರು ತಾಲೂಕಿನ ಬಹುತೇಕ ಗ್ರಾಮಗಳು ನೆರೆ ರಾಜ್ಯಗಳಿಗೆ ಸಂಪರ್ಕಿಸುವುದರಿಂದ ಇಲ್ಲಿನ ರಸಗೊಬ್ಬರ ಬೇರೆ ರಾಜ್ಯಗಳಿಗೆ ಹೋಗುತ್ತದೆ. ಇದರಿಂದ ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಹೆಚ್ಚುತ್ತದೆ. ಆದ್ದರಿಂದ ಚೆಕ್ ಪೋಸ್ಟ್ ಗಳಲ್ಲಿ ಸರಿಯಾಗಿ ತಪಾಸಣೆ ನಡೆಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಯೋಜನೆಗಳನ್ನು ಬಡವರಿಗೆ ತಲುಪಿಸಲು ಪ್ರಯತ್ನಿಸಬೇಕು. ಸಾರ್ವಜನಿಕರಿಗೆ ಸ್ಪಂಧಿಸಬೇಕು. ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಯೋಜನೆಗಳನ್ನು ಸಮರ್ಪಕವಾಗಿ ಸಾರ್ವಜನಿಕರೊಗೆ ಮುಟ್ಟಿಸಬೇಕು. ಸಭೆಯಲ್ಲಿ ಚರ್ಚಿಸಲಾದ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಮಾದಕ ವಸ್ತುಗಳ ಚಟುವಟಿಕೆ ಆಗದಂತೆ ಗಮನಹರಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಸಂಬಂಧಿಸಿದಂತೆ ಮಟಮಾರಿ ಗ್ರಾಮ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕುರಿತು ಕಳೆದ ಕೆಡಿಪಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಈ ವರೆಗೂ ಸ್ಥಳಿಯರೊಂದಿಗೆ ಚರ್ಚಿಸಲಾಗುತ್ತಿದೆ ಎಂದು ಈ ಸಭೆಯಲ್ಲಿ ವರದಿ ನೀಡಿದ್ದೀರಿ. ಮೂರೂವರೆ ತಿಂಗಳಾದರೂ ಇನ್ನೂ ಚರ್ಚಿಸಲಾಗುತ್ತದೆ ಎಂದು ಉತ್ತರ ಕೊಡುವುದು ಸರಿಯಲ್ಲ. ಕೂಡಲೇ ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಶಾಸಕರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಲಮಲಾ ಗ್ರಾಮದ ಕುಡಿಯುವ ನೀರಿನ ಕೆರೆ ಉದ್ಘಾಟನೆಯಾಗಿ ಹಲವು ದಿನಗಳಾದರೂ ಕೆರೆಯಿಂದ ಸುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಮಾಡಲಾಗುತ್ತಿಲ್ಲ. ಕೂಡಲೇ ಎಲ್ಲಾ ಕಾರ್ಯಗಳನ್ನು ಮುಗಿಸಿ ಜನರಿಗೆ ಅನುಕೂಲ ಮಾಡಬೇಕು ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಆರ್‌ಎಪಿಎಂಸಿ ಅಧ್ಯಕ್ಷ ಜಯಂತರಾವ್ ಪತಂಗೆ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ್ ಕಿಶೋರ ಪಾಟೀಲ್, ನಾಮ ನಿರ್ದೇಶಿತ ಸದಸ್ಯರಾದ ಈರೇಶ, ತಿಮ್ಮಪ್ಪ ನಾಯಕ, ಜಿಂದಪ್ಪ, ಶರಣಬಸವ, ರಾಯಚೂರು ವಿವಿ ಸಿಂಡಿಕೇಟ್ ಸದಸ್ಯ ಚನ್ನಬಸವ, ಎಪಿಎಂಸಿ ಉಪಾಧ್ಯಕ್ಷ ಬಸೀರ್ ಅಹ್ಮದ್, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ತಾಲೂಕು ಪಂಚಾಯತ್ ಆಡಳಿತಾಧಿಕಾರಿ ವನಿತಾ, ಡಿವೈಎಸ್‌ಪಿ ಶಾಂತವೀರ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ಇತರರು ಇದ್ದರು.

# ಡಾ.ಅಂಬೇಡ್ಕರ ಭವನ ಉದ್ಘಾಟನೆ




- ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಡಾ. ಬಿಆರ್ ಅಂಬೇಡ್ಕರ್ ನೀಡಿದ ಸಂವಿಧಾನದ ಅಡಿಯಲ್ಲಿ ದೇಶದಲ್ಲಿನ ರಾಜಕೀಯ ಪಾಲನೆ ಆಗುತ್ತಿರುವುದರಿಂದ ಅದು ಎಷ್ಟೊಂದು ಗಟ್ಟಿಯಾಗಿದೆ ಎಂಬುದನ್ನು ಎಲ್ಲರೂ ಅರಿಯ ಬೇಕಾಗಿದೆ ಎಂದು ಮಾಜಿ ಸಚಿವ ಕೆ ವೆಂಕಟೇಶ್ ತಿಳಿಸಿದರು. ತಾಲೂಕಿನ ಚಿಕ್ಕ ಬ್ಯಾಲಾಳು ಗ್ರಾಮದಲ್ಲಿ ನೂತನವಾಗಿ 20 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣವಾದ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಭವನವನ್ನು ಉದ್ಘಾಟಿಸಿ ಶುಕ್ರವಾರ ಮಾತನಾಡಿದರು. ಸಾಮೂಹಿಕವಾದ ಕಾರ್ಯಕ್ರಮಗಳ ಅನುಕೂಲಕ್ಕಾಗಿ ಸರ್ಕಾರವು ಅಂಬೇಡ್ಕರ್ ಅವರ ನೆನಪಿನಲ್ಲಿ ನಿರ್ಮಾಣವಾಗುತ್ತಿರುವ ಸಮುದಾಯ ಭವನಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು. ತಾಲೂಕಿನಲ್ಲಿ ಹಿಂದಿನ ವರ್ಷಗಳಲ್ಲಿ ಮಂಜೂರಾದ ಭವನಗಳ ಪೈಕಿ ಒಂದನ್ನು ಹೊರತುಪಡಿಸಿ ಎಲ್ಲವೂ ನಿರ್ಮಾಣವಾಗಿದ್ದು ಉಳಿದಿದ್ದನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ಪ್ರಸ್ತುತವಾಗಿ ಸರ್ಕಾರವನ್ನು 22 ಸಮುದಾಯ ಬವನಗಳನ್ನು ಮಂಜೂರು ಮಾಡುವಂತೆ ಕೋರಲಾಗಿತ್ತು. ಆದರೆ ಕೇವಲ 9 ಸಮುದಾಯಗಳನ್ನು ಮಾತ್ರ ಸರ್ಕಾರ ಮಂಜೂರು ಮಾಡಲಾಗಿದ್ದು ಇವುಗಳನ್ನು ಆದಷ್ಟುಬೇಗ ಕಾಮಗಾರಿಗಳ ಮುಗಿಸಿ ಜನರಿಗೆ ಅರ್ಪಣೆ ಮಾಡಬೇಕೆಂದು ತಿಳಿಸಿದರು. ಗ್ರಾಮದಲ್ಲಿ ಹಲವಾರು ಬೇಡಿಕೆಗಳನ್ನು ಕೋರಿದ್ದು ಅವುಗಳನ್ನು ಕೂಡಲೇ ಈಡೇರಿಸುವುದಾಗಿ ಕೆ ವೆಂಕಟೇಶ್ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸರ್ಕಾರದ 5 ಗ್ಯಾರಂಟಿಗಳ ಅನುಷ್ಠಾನ ಸಮಿತಿಯ ತಾ ಅಧ್ಯಕ್ಷ ಕೆವಿ ನಿತಿನ್ ವೆಂಕಟೇಶ್. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮತ್ ಜಾನ್ ಬಾಬು. ಮಾಜಿ ತಾ ಪಂ ಸಾಮಾಜಿಕ ನ್ಯಾಯ ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷ ಟಿ ಈರಯ್ಯ. ಗ್ರಾಮದ ಮುಖಂಡರಾದ ಕರಿಯಯ್ಯ ಮತ್ತು ಈರಯ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಡಾ. ಬಿಆರ್ ಅಂಬೇಡ್ಕರ್ ಸಂಘದ ಪದಾಧಿಕಾರಿಗಳು ಮತ್ತಿತರರು ಹಾಜರಿದ್ದರು.

# ಜಿಮ್ಸ್ ಆಸ್ಪತ್ರೆಯಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ

- ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜೂ.12–"ನಿಕೋಟಿನ್‌ಮತ್ತುತಂಬಾಕುವ್ಯಸನವನ್ನುಎದುರಿಸುವ ಮನವಿಯನ್ನು ಮರೆಮಾಚುವುದು"ಎಂಬ ಈ ವರ್ಷದಘೋಷವಾಕ್ಯದೊಂದಿಗೆ ಕಲಬುರಗಿಯ ಜಿಮ್ಸ್ ಆಸ್ಪತ್ರೆಯ ಹತ್ತನೆಯ ಮಹಡಿಯ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಳ್ಳಲಾದ ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ಕಲಬುರಗಿ ಜಿಮ್ಸ್‌ನ್ ಪ್ರಾಂಶುಪಾಲರಾದ ಡಾ॥ ಅಜಯ್ ಕುಮಾರ ಜಿ. ಅವರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಕಲಬುರಗಿ ಜಿಮ್ಸ್‌ನ ಜಿಲ್ಲಾ ಸಶ್ತ್ರಜ್ಞರು ಹಾಗೂ ಅಧೀಕ್ಷಕರಾದ ಡಾ॥ ರುಖೀಯ ಅಸ್ನಾ ರಬಾ ಅವರು ಮಾತನಾಡಿ, ತಂಬಾಕು ಹಾಗೂ ಅದರ ಉತ್ಪನ್ನಗಳ ವ್ಯಸನದಿಂದ ಆಗುವ ದುಷ್ಪರಿಣಾಮಗಳ ಕುರಿತು ಮಾತನಾಡಿದರು. ಅಲ್‌ಬದರ್ ಡೆಂಟಲ್ ಕಾಲೇಜಿನ ಪ್ರಾಂಶುಪಾಲ ಡಾ॥ ಸೈಯ್ಯದ್ ಝುಕಾಉಲ್ಲಾಹ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದ ದಂತ ವಿಭಾಗದ ಮುಖ್ಯಸ್ಥೆ ಡಾ॥ ಅರ್ಚನಾ ಎಸ್. ಅವರು, ದಂತ ವಿಭಾಗದಲ್ಲಿ ಮಾಡುವ Nicotine Replacement Therapy ಹಾಗೂ ತಂಬಾಕು ವ್ಯಸನಿಗಳಿಗೆ, ವ್ಯಸನ ಮುಕ್ತಗೊಳಿಸಲು ತಿಂಗಳಿಗೆ ಸುಮಾರು 200–300 ವ್ಯಕ್ತಿಗಳಿಗೆ ಸಮಾಲೋಚನೆ ಮಾಡಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಮನೋಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ॥ ಪ್ರಭುಕಿರಣ ಗೋಗಿ ಅವರು, "ನಿಕೋಟೀನ್ ಮಾನವ ಮೆದುಳನ್ನು ದುರ್ಬಳಕೆ ಮಾಡಿಕೊಂಡು ಹೇಗೆ ವ್ಯಸನಿಯನ್ನಾಗಿ ಮಾಡಬಹುದು" ಕುರಿತು ಉಪನ್ಯಾಸ ನೀಡಿದರು. ಕಲಬುರಗಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಸುಜಾತಾ ಪಾಟೀಲ್ ಅವರು "ಜಿಲ್ಲಾ ತಂಬಾಕು ನಿಯಂತ್ರಣ ಕಾರ್ಯಕ್ರಮ ಹಾಗೂ ಕೋಟ್ಪಾ (COTPA) ಕಾಯ್ದೆ" ಕುರಿತು ಮಾತನಾಡಿದರು. ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಜಿಲ್ಲಾ ಪಂಚಾಯತ, ಜಿಲ್ಲಾ ಆಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ತಂಬಾಕು ನಿಷೇಧ ಕುರಿತು ಜನಜಾಗೃತಿ ಮೂಡಿಸಲು ಜಿಲ್ಲಾ ಆಸ್ಪತ್ರೆಯ ಆವರಣದಿಂದ ಜಗತ್ ವೃತ್ತದವರೆಗೆ ವೈದ್ಯ ಮತ್ತು ಅರೆವೈದ್ಯಕೀಯ ವಿದ್ಯಾರ್ಥಿಗಳಿಂದ ಪ್ರಭಾತ್ ಪೇರಿ ಹಮ್ಮಿಕೊಳ್ಳಲಾಯಿತು. ದಿನಾಚರಣೆ ಅಂಗವಾಗಿ ಜಿಮ್ಸ್, ಇ.ಎಸ್.ಐ.ಸಿ, ಎಚ್.ಕೆ.ಇ.ಎಸ್ ಹಾಗೂ ಅಲಬದರ್ ದಂತ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಬಿತ್ತಿ ಚಿತ್ರ (Poster) ಪ್ರದರ್ಶನ ಸ್ಪರ್ಧೆಯನ್ನು ಆಯೋಜಿಸಿ ವಿಜೇತರಾಗಿದವರಿಗೆ ಬಹುಮಾನ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಯದೇವ ಆಸ್ಪತ್ರೆ ಲೈಸೆನ್ ಅಧಿಕಾರಿ ಡಾ॥ ಆರ್.ಎಸ್. ಗುಗವಾಡ, ಅಲ್ ಬದರ್ ಡೆಂಟಲ್ ಕಾಲೇಜಿನ ಉಪ ಪ್ರಾಂಶುಪಾಲ ಡಾ॥ ಅರ್ಷದ್ ಹುಸೇನ್, ನಿಜಲಿಂಗಪ್ಪ ಡೆಂಟಲ್ ಕಾಲೇಜಿನ ಉಪಪ್ರಾಂಶುಪಾಲ ಡಾ॥ ವೀರೇಂದ್ರ ಪಾಟೀಲ್, ಕೆ.ಎಮ್.ಸಿ. ಸದಸ್ಯರು, ನಿಜಲಿಂಗಪ್ಪ ಡೆಂಟಲ್ ಕಾಲೇಜಿನ ವೈದ್ಯಕೀಯ ಅಧೀಕ್ಷಕ ಡಾ॥ ಉಮೇಶ ಅಲ್ಲದ್, ಸ್ಥಾನಿಕ ವೈದ್ಯಾಧಿಕಾರಿ ಡಾ॥ ನಾಗರಾಜ ಬಿ. ಪಾಟೀಲ್, ಎನ್.ಓ.ಹೆಚ್.ಪಿ. ನೋಡಲ್ ಆಫೀಸರ್ ಡಾ॥ ರಾಜು ಬಿ. ರಾಂಪುರೆ, ದಂತ ವಿಭಾಗದ ಸಹ ಪ್ರಾಧ್ಯಾಪಕ ಡಾ॥ ಅಶೋಕ ಸತ್ಯನಾರಾಯಣ, ಡಾ॥ ಮೋಹನ ಬೀದಿಮನಿ, ಸಹಾಯಕ ಪ್ರಾಧ್ಯಾಪಕ ವೀರಭದ್ರ ಕಲ್ಯಾಣಿ, ಜಿಮ್ಸ್ ವೈದ್ಯಕೀಯ ಉಪ ಅಧೀಕ್ಷಕರು, ಆಡಳಿತ ಅಧಿಕಾರಿಗಳು, ಎಲ್ಲಾ ವಿಭಾಗದ ಮುಖ್ಯಸ್ಥರು, ವೈದ್ಯಾಧಿಕಾರಿಗಳು, ಜಿಮ್ಸ್ ಹಾಗೂ ದಂತ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು ಪಾಲ್ಗೊಂಡಿದರು. ಕಾರ್ಯಕ್ರಮದಲ್ಲಿ ಉಪಸ್ಥಿತ ಎಲ್ಲರಿಗೂ ತಂಬಾಕು ಮುಕ್ತ ಸಮಾಜ ಕಟ್ಟಲು ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ವಿಶ್ವ ತಂಬಾಕು ರಹಿತ ದಿನದ ಬಿತ್ತಿ ಚಿತ್ರ ಬಿಡುಗಡೆ ಮಾಡಲಾಯಿತು. ಮುಖ್ಯ ದಂತ ವೈದ್ಯಾಧಿಕಾರಿ ಡಾ॥ ಸಂಗಮ್ಮ ಕೆ. ತಿಪ್ಪಶೆಟ್ಟಿ ಸ್ವಾಗತಿಸಿದರು. ಡಾ॥ ಅಮೃತಾ ದೇಶಪಾಂಡೆ ಕಾರ್ಯಕ್ರಮದ ನಿರೂಪಿಸಿದರು. ಕೊನೆಯಲ್ಲಿ ಡಾ॥ ರಾಜು ಬಿ. ರಾಂಪುರೆ ವಂದಿಸಿದರು.

# ಜೆಡಿಎಸ್ ಅಲ್ಪಸಂಖ್ಯಾತ ವಿಭಾಗಗಳಿಗೆ ನೇಮಕಾತಿ

- ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜೆಡಿಎಸ್ ಪಕ್ಷದ ಕೊಪ್ಪಳ ನಗರ ಅಲ್ಪಸಂಖ್ಯಾತ ವಿಭಾಗದ ಘಟಕದ ಉಪಾಧ್ಯಕ್ಷರಾಗಿ ಮರ್ದಾನಲಿದಾದುಸಾಬ್ ಗೂದಿ ಹಾಗೂ ತಾಲೂಕು ಅಲ್ಪಸಂಖ್ಯಾತ ವಿಭಾಗದ ಉಪಾಧ್ಯಕ್ಷರಾಗಿ ಮೌಲಾ ಹುಸೇನ್ ಶ್ಯಾಮಿದ ಅಲಿ ಅವರನ್ನು ನೇಮಕ ಮಾಡಲಾಗಿದೆ

ಎಂದು ಪಕ್ಷದ ಪತ್ರಿಕಾ ಪ್ರಕಟಣೆ ತಿಳಿಸಿದೆ.

ಇತ್ತೀಚೆಗೆ ನಡೆದ ಪಕ್ಷದ ಸಭೆಯಲ್ಲಿ ಪಕ್ಷದ ಜಿಲ್ಲಾ ಅಧ್ಯಕ್ಷ ಸುರೇಶ್ ಬೂಮರಡ್ಡಿ ಇಬ್ಬರಿಗೂ ನೇಮಕಾತಿ ಆದೇಶ ಪತ್ರವನ್ನು ರಾಜ್ಯ ಕೋರ್ ಕಮಿಟಿ ಸದಸ್ಯರಾದ ಸಿ ವಿ ಚಂದ್ರಶೇಖರ ನಿರ್ದೇಶನ ಪ್ರಕಾರ ನೀಡಿದರು ಎಂದು ಪ್ರಕಟಣೆ ತಿಳಿಸಿದೆ.

ಕೊಪ್ಪಳ ನಗರ ಮತ್ತು ತಾಲೂಕಿನಲ್ಲಿ ಹಲವು ವರ್ಷಗಳಿಂದ ಜೆಡಿಎಸ್ ಪಕ್ಷದ ಪರವಾಗಿ ನಿಷ್ಠೆಯಿಂದ ದುಡಿದ ಕಾರ್ಯಕರ್ತರನ್ನು ಗುರುತಿಸಿ ಅವರಿಗೆ ಪಕ್ಷದ ಜವಾಬ್ದಾರಿಗಳನ್ನು ನೀಡಲಾಗಿದೆ.

ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಜೆಡಿಎಸ್ ಪಕ್ಷವನ್ನು ಸೇರುವ ನಿರೀಕ್ಷೆಯಿದ್ದು, ಅಲ್ಪಸಂಖ್ಯಾತ ವಿಭಾಗಗಳನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಭೂಮರಡ್ಡಿ ತಿಳಿಸಿದ್ದಾರೆ.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಹಿನ್ನೆಲೆಯಲ್ಲಿ ರಾಜ್ಯ ಮಟ್ಟದ ನಾಯಕರು ಕೊಪ್ಪಳಕ್ಕೆ ಸರಣಿ ಭೇಟಿಗಳನ್ನು ನೀಡಲಿದ್ದಾರೆ. ಚುನಾವಣೆಗಳಲ್ಲಿ ಪಕ್ಷ ಹೆಚ್ಚಿನ ಸ್ಥಾನಗಳಲ್ಲಿ ಜಯಿಸಲು ಬೇಕಾಗುವ ಕ್ರಮಗಳನ್ನು ಕೈಗೊಳ್ಳಲಾಗಿದೆ. ಶೀಘ್ರದಲ್ಲಿಯೇ ವಿವಿಧ ಹುದ್ದೆಗಳಿಗೆ ಅರ್ಹರನ್ನು ನೇಮಕ ಮಾಡಲಾಗುವುದು. ಸದಸ್ಯತ್ವ ನೋಂದಣಿ ಅಭಿಯಾನವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಸಭೆಯಲ್ಲಿ ಹಾಜರಿದ್ದ ಪದಾಧಿಕಾರಿಗಳಿಗೆ ಭೂಮರಡ್ಡಿ ಸೂಚಿಸಿದರು ಎಂದು ಪ್ರಕಟಣೆ ಹೇಳಿದೆ.

ಜಿಲ್ಲಾ ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷರಾದ ಸಿರಾಜ್ ಹಮದ್ ಬಿಜಾಪುರ, ನಗರ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾದ ಸಿರಾಜ್ ಕೋಲ್ಕಾರ, ಜಿಲ್ಲಾ ಕ್ರೀಡಾ ವಿಭಾಗದ ಅಧ್ಯಕ್ಷರಾದ ಸೈಯದ್ ಮಹೇಮೂದ್ ಹುಸೇನಿ ಹಾಗೂ ನಗರ ಘಟಕದ ಅಧ್ಯಕ್ಷರಾದ ಸೋಮನಗೌಡ ಹೊಗರನಾಳ ಸಭೆಯಲ್ಲಿ ಹಾಜರಿದ್ದರು.

# ಮಹಾನಗರ ಪಾಲಿಕೆ: ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿವೇಶನ ರಹಿತ ಮತ್ತು ವಸತಿ ರಹಿತರಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ) 2.0 ಅಡಿ ವಸತಿ ಸೌಲಭ್ಯ ಒದಗಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.ಆಸಕ್ತರು ಆನ್ ಲೈನ್ ವೆಬ್‌ಸೈಟ್ https://pmay-urban.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಜೂ.30 ಅರ್ಜಿ ಸಲ್ಲಿಸಲು ಕೊನೆಯ ದಿನ.ಬೇಕಾದ ದಾಖಲೆಗಳು:ಅರ್ಜಿದಾರರ ಆಧಾರ್ ಕಾರ್ಡ್ ಮತ್ತು ಕುಟುಂಬದ ಎಲ್ಲಾ ಸದಸ್ಯರ ಆಧಾರ್ ಕಾರ್ಡ್, ವಸತಿ ರಹಿತರಾಗಿದ್ದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು(ಹಕ್ಕುಪತ್ರ, ಕ್ರಯಪತ್ರ, ದಾನಪತ್ರ, ಉಡುಗೊರೆ, ಖಾತಾ), ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಖಾತೆಯ ವಿವರ, ಆಧಾರ್ ಕಾರ್ಡ್ ಗೆ ಲಿಂಕ್ ಇರುವ ಮೊಬೈಲ್ ಸಂಖ್ಯೆ, ಪಾನ್ ಕಾರ್ಡ್(ಲಭ್ಯವಿದ್ದಲ್ಲಿ), ನಿಗಧಿತ ನಮೂನೆ (ಅನೆಕ್ಸರ್-2ಎ, 2ಬಿ, 2ಸಿ) ಯಲ್ಲಿ ಸೆಲ್ಫ್ ಅಂಡರ್-ಟೆಕಿಂಗ್ ಹೊಂದಿರಬೇಕು. ಈ ಮೇಲಿನ ದಾಖಲೆಗಳ ಜೊತೆಗೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಪ್ರತಿಯನ್ನೂ ಸಲ್ಲಿಸಬೇಕು.ಈ ಹಿಂದೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದವರು ಕಡ್ಡಾಯವಾಗಿ ಮಹಾನಗರ ಪಾಲಿಕೆಯ ವಲಯ ಕಚೇರಿ-2 ರ ಆಶ್ರಯ ಶಾಖೆಗೆ ಜೂ.30 ರೊಳಗಾಗಿ ಮೇಲೆ ತಿಳಿಸಿದ ಎಲ್ಲಾ ದಾಖಲೆಗಳನ್ನು ಸಲ್ಲಿಸಬೇಕು. ಹೊಸದಾಗಿ ಅರ್ಜಿ ಸಲ್ಲಿಸಲು ಸಾಮಾನ್ಯ ಸೇವಾ ಕೇಂದ್ರ ಸೆಂಟರ್ ಗೆ ಭೇಟಿ ನೀಡಬಹುದು.ಹೆಚ್ಚಿನ ಮಾಹಿತಿಗಾಗಿ ನಗರದ ಗಡಗಿ ಚೆನ್ನಪ್ಪ ವೃತ್ತ (ರಾಯಲ್ ಸರ್ಕಲ್) ಹತ್ತಿರದ ಮಹಾನಗರ ಪಾಲಿಕೆಯ ಆಯುಕ್ತರ ಕಚೇರಿ ಅಥವಾ ದೂ.08392-273479/278168 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಜಾಗೃತಿ ,ಉಸ್ತುವಾರಿ ಸಮಿತಿ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮ್ಯಾನ್ಯುಯಲ್ ಸ್ಕಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013 ರ ಸೆಕ್ಷನ್ 24 ರನ್ವಯ ಬಳ್ಳಾರಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ’ ರಚಿಸಲಾಗುತ್ತಿದೆ. ಈ ಸಮಿತಿಗೆ ನಾಮನಿರ್ದೇಶನ ಮಾಡಲು ಅರ್ಹ ವ್ಯಕ್ತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಮ್ಯಾನ್ಯುಯಲ್ ಸ್ಕಾವೆಂಜರ್‌ಗಳ ಪುನರ್ವಸತಿಗಾಗಿ ಶ್ರಮಿಸುತ್ತಿರುವ ಸಮಾಜ ಸೇವಕರು ಮತ್ತು ಮ್ಯಾನ್ಯುಯಲ್ ಸ್ಕಾವೆಂಜರ್ ಸಮುದಾಯವನ್ನು ಪ್ರತಿನಿಧಿಸುವ ಅಥವಾ ಆ ಸಂಘಟನೆಗಳಿಗೆ ಸೇರಿದ ಆಸಕ್ತಿಯುಳ್ಳ ವ್ಯಕ್ತಿಗಳು ಅರ್ಜಿ ಸಲ್ಲಿಸಬಹುದಾಗಿದೆ.ಸಮಿತಿಗೆ ಒಟ್ಟು 04 ಸದಸ್ಯರನ್ನು (02 ಪುರುಷರು ಮತ್ತು 02 ಮಹಿಳೆಯರು) ನಾಮನಿರ್ದೇಶನ ಮಾಡಲಾಗುತ್ತದೆ.*ಸಲ್ಲಿಸಬೇಕಾದ ಅಗತ್ಯ ದಾಖಲೆಗಳು:*ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸಿದ ಬಗ್ಗೆ ದಾಖಲಾತಿ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಇತ್ತೀಚಿನ ಭಾವಚಿತ್ರ (2).ಜೂನ್ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತರು ಹೆಚ್ಚಿನ ವಿವರ ಹಾಗೂ ಅರ್ಜಿ ಸಲ್ಲಿಕೆಗಾಗಿ ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಕೋಟೆ ಪ್ರದೇಶ, ಬಳ್ಳಾರಿ ಅಥವಾ ಮೊ.9480843023, ದೂ.08392-267932 ಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ಎಸ್‌ಐಆರ್ ವಿರುದ್ಧ ಜಾಗೃತಿ ಜಾಥಾ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

12- ಎಸ್‌ಐಆರ್ ವಿರುದ್ಧ ಜನ ಜಾಗೃತಿ ಮೂಡಿಸಲು ಎದ್ದೇಳು ಕರ್ನಾಟಕ (ಸಂವಿಧಾನ ರಕ್ಷಣಾ ವೇದಿಕೆ), ಅಹಿಂದ ಜಿಲ್ಲಾ ಘಟಕ ವತಿಯಿಂದ ವಿಜಯಪುರದಿಂದ ಹೊರಟಿರುವ ಜನಜಾಗೃತಿ ಜಾಥಾ ಜೂನ್ 14 ರಂದು ಬಾಗಲಕೋಟೆ ನಗರಕ್ಕೆ ಆಗಮಿಸಲಿದೆ ಎಂದು ನಗರಸಭೆ ಮಾಜಿ ಸದಸ್ಯ ಹಾಜಿಸಾಬ ದಂಡಿನ ಹೇಳಿದರು. ಶುಕ್ರವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಜಾಥಾ ಆಗಮಿಸಲಿದ್ದು, ವಿದ್ಯಾಗಿರಿಯ ನಂದಿಶ್ವರ ಕಾಲೋನಿಯಿಂದ ಆರಂಭವಾಗಿ ಕಾಲೇಜ ಸರ್ಕಲ್, ಕಾಳಿದಾಸ ಸರ್ಕಲ್, ನಗರಸಭೆ ರಸ್ತೆ, ಎಲ್‌ಐಸಿ ಸರ್ಕಲ್, ಆಶ್ರಯ ಕಾಲೋನಿ, ವಾಂಬೆ ಕಾಲೋನಿಗಳಲ್ಲಿ ಸಂಚರಿಸಲಿದ್ದು, ನಂತರ ಹಳೇ ನಗರದ ಬಸವೇಶ್ವರ ವೃತ್ತ, ವಲ್ಲಭಬಾಯಿ ಚೌಕ, ಬಿಲ್ಲಾಲ ಚೌಕ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ ಎಂದರು. ಎಸ್‌ಐಆರ್ ದಿಂದ ಆಗುವ ಲೋಪಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುವುದು. ಚುನಾವಣಾ ಆಯೋಗ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಿದ್ದು ಇದರಲ್ಲಿ ಅರ್ಹ ಮತದಾರರನ್ನು ಆಯೋಗ ಕೈ ಬಿಡುವ ಹುನ್ನಾರ ನಡೆಸುವ ಸಂಭವವಿದ್ದು ಅದಕ್ಕೆ ಮತದಾರರಲ್ಲಿ ಜಾಗೃತಿ ಮೂಡಿಸಲು ರಾಜ್ಯದಿಂದ ಐದು ಕಡೆಗಳಲ್ಲಿ ಜಾಥಾ ಹೊರಟಿದ್ದು 13 ರಿಂದ 18 ರವರೆಗೆ ನಡೆಯಲಿದ್ದು , ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸಭೆಯನ್ನು ಏರ್ಪಡಿಸಲಾಗಿದೆ ಎಂದು ತಿಳಿಸಿದರು. ಅಲ್ಪಸಂಖ್ಯಾತರು, ಅಹಿಂದ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಬಡವರನ್ನು ಮತದಾರರ ಪಟ್ಟಿಯಿಂದ ಕೈ ಬಿಡುವ ಸಾಧ್ಯತೆಗಳು ಇವೆ. ಆ ದಿಸೆಯಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿವಿಧ ಪ್ರಗತಿ ಪರ ಸಂಘಟನೆಗಳು ಹೋರಾಟಕ್ಕೆ ಇಳಿದಿವೆ ಎಂದರು. ಸುದ್ದಿಗೋಷ್ಠಿಯಲ್ಲಿ ಜಿ.ಎಂ.ತರಫದಾರ್, ಎಚ್.ಎಲ್.ನೀಲನಾಯಕ, ಪವಿತ್ರಾ ಜಕ್ಕಪ್ಪನವರ, ಬಸೀರಅಹಮ್ಮದ ಬಾವಾಖಾನ, ಭೀಮಶಿ ಕಟ್ಟಿಮನಿ, ಗಂಗೂರ ಮತ್ತಿತರರು ಇದ್ದರು.

## ಜೂ.18 ರಂದು ಪರಿಶಿಷ್ಟ ಜಾತಿ ಜನಾಂಗದವರ
# ಕುಂದು-ಕೊರತೆ ಆಲಿಕೆ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ಪರಿಶಿಷ್ಟ ಜಾತಿ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಜೂ.18 ರಂದು ಬೆಳಿಗ್ಗೆ 11 ಗಂಟೆಗೆ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಕುಂದು-ಕೊರತೆ ಆಲಿಕೆ ಸಭೆ ಆಯೋಜಿಸಲಾಗಿದೆ.

ಸಮಸ್ಯೆಗಳಿರುವ ಪರಿಶಿಷ್ಟ ಜಾತಿಯ ವಿವಿಧ ಸಂಘ- ಸಂಸ್ಥೆಗಳ ಮುಖ್ಯಸ್ಥರು, ಪದಾಧಿಕಾರಿಗಳು, ಸದಸ್ಯರು, ದಲಿತ ಮುಖಂಡರು ಹಾಗೂ ಸಮುದಾಯದ ಜನರು ಅಂದು ನಡೆಯುವ ಕುಂದು-ಕೊರತೆ ಆಲಿಕೆ ಸಭೆಯಲ್ಲಿ ಭಾಗವಹಿಸಿ, ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಕಲ್ಯಾಣದಲ್ಲಿ ಬಸವ ತತ್ವಕ್ಕೆ ವಿರುದ್ಧವಾದ ಕಾರ್ಯಕ್ರಮ ಬೇಡ: ಜಿಲ್ಲಾಡಳಿತಕ್ಕೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಬಸವಕಲ್ಯಾಣವು ಜಗತ್ತಿಗೆ ಸಮಾನತೆ, ಕಾಯಕ ಮತ್ತು ದಾಸೋಹದ ಸಂದೇಶ ನೀಡಿದ ಬಸವಣ್ಣನವರ ನೆಲ. ಇಂತಹ ಪವಿತ್ರ ನೆಲದಲ್ಲಿ ಬಸವಾದಿ ಶರಣರ ಮೂಲ ತತ್ವಗಳಿಗೆ ವಿರುದ್ಧವಾದ ಯಾವುದೇ ಕಾರ್ಯಕ್ರಮಗಳು ನಡೆಯಬಾರದು ಎಂದು ಬಸವ ತತ್ವ ಪ್ರಚಾರಕಿ ಇಂದುಮತಿ ಗಾರಂಪಳ್ಳಿ ಶುಕ್ರವಾರ ತಹಶೀಲ್ದಾರ್ ಅವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಮಾತನಾಡಿದ ಅವರು, ಬಸವಾದಿ ಶರಣರ ಮೌಲ್ಯಗಳು ಎಂದರೆ ಮಾನವೀಯತೆ, ಸಹಬಾಳ್ವೆ, ಸಮಾನತೆ ಮತ್ತು ಶಾಂತಿ. ಈ ಮೌಲ್ಯಗಳಿಗೆ ಧಕ್ಕೆ ತರುವ ಯಾವುದೇ ಪ್ರಯತ್ನವನ್ನು ಮಾಡುವುದು ತಾಲೂಕಿನ ಬಸವಪರ ಸಂಘಟನೆಗಳು ಖಂಡಿಸುತ್ತೇವೆ. ಕಾರಣ ಬಸವಕಲ್ಯಾಣದಲ್ಲಿ ಇದೆ ತಿಂಗಳು 28 ರಂದು ನಡೆಯಲಿರುವ ಬಸವಾದಿ ಶರಣರ ಹಿಂದೂ ಸಮಾವೇಶವನ್ನು ರದ್ದುಗೊಳಿಸುವಂತೆ ಜಿಲ್ಲಾಡಳಿತಕ್ಕೆ ಮನವಿ ಮಾಡಲಾಗಿದೆ ಎಂದರು. ಸಂಗಮೇಶ ಎನ್ ಜವಾದಿ ಮಾತನಾಡಿ, ನಮ್ಮ ಹೋರಾಟ ಯಾವುದೇ ವ್ಯಕ್ತಿ ಅಥವಾ ಸಮುದಾಯದ ವಿರುದ್ಧವಲ್ಲ, ಬಸವಣ್ಣನವರ ತತ್ವಗಳ ರಕ್ಷಣೆ ಮತ್ತು ಸಾಮಾಜಿಕ ಸೌಹಾರ್ದತೆಯ ಪರವಾಗಿದೆ. ಹಿಂದೂ ಧರ್ಮದ ಸಮಾವೇಶಕ್ಕೆ ನಮ್ಮ ವಿರೋಧವಿಲ್ಲ. ಆದರೆ ಬಸವಾದಿ ಶರಣರ ಹಿಂದೂ ಸಮಾವೇಶಕ್ಕೇ ನಮ್ಮ ಸಂಪೂರ್ಣ ವಿರೋಧ ಇದೆ, ಬಸವಣ್ಣನವರ ತತ್ವ ಸಿದ್ಧಾಂತವನ್ನು ಅವಮಾನ ಮಾಡುವುದನ್ನು ಖಂಡಿತವಾಗಿಯೂ ನಾವ್ಯಾರು ಸಹಿಸುವುದಿಲ್ಲ ಎಂದರು. ಚಂದ್ರಶೇಖರ ತಂಗಾ ಮಾತನಾಡಿ, ಬಸವಕಲ್ಯಾಣವು ಕೇವಲ ಒಂದು ಊರಲ್ಲ. ಇದು 12ನೇ ಶತಮಾನದಲ್ಲಿ ಜಗತ್ತಿಗೆ "ವಿಶ್ವಮಾನವ ಸಂದೇಶ" ನೀಡಿದ ಅನುಭವ ಮಂಟಪದ ನೆಲ.

ಜಾತಿ ಇಲ್ಲ, ಧರ್ಮ ಇಲ್ಲ, ಮೇಲು-ಕೀಳಿಲ್ಲ. ಆದ್ದರಿಂದ ಇಂತಹ ಪವಿತ್ರ ನೆಲದಲ್ಲಿ ಬಸವಾದಿ ಶರಣರ ಮೂಲ ತತ್ವಗಳಿಗೆ ವಿರುದ್ಧವಾದ, ವಿಭಜನೆ ಮಾಡುವ, ದ್ವೇಷ ಹರಡುವ ಯಾವುದೇ ಕಾರ್ಯಕ್ರಮಗಳು ನಡೆಯಬಾರದು ಎಂದರು.

# ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿಗೆ ಆನ್‌ಲೈನ್ ಕಲಿಕೆ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಉನ್ನತ ಶಿಕ್ಷಣದ ಆಶಯಗಳನ್ನು ಸಾಕಾರಗೊಳಿಸಲು ಭಾರತ ಸರ್ಕಾರವು ಸ್ವಯಂ, ಮೂಕ್ಸ್ ಮಾದರಿಯ ಆನ್‌ಲೈನ್ ಕಲಿಕಾ ಕೋರ್ಸ್‌ಗಳನ್ನು ಪರಿಚಯಿಸಿದ್ದು, ವಿದ್ಯಾರ್ಥಿಗಳು ತಮ್ಮ ಜ್ಞಾನಾಭಿವೃದ್ಧಿಗೆ ಆನ್‌ಲೈನ್ ಕಲಿಕಾ ಪ್ರಕ್ರಿಯೆಗೆ ಹೊಂದಿಕೊಳ್ಳಬೇಕು ಎಂದು ನವದೆಹಲಿಯ ನ್ಯಾಕ್ ಸಮಿತಿಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಪ್ರೊ.ನಾಗೇಶ್ವರ ರಾವ್ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಬಯಲು ಸಭಾಂಗಣದಲ್ಲಿ ಶುಕ್ರವಾರದಿಂದ ಆರಂಭವಾಗಿರುವ ವಾಣಿಜ್ಯ ಹಾಗೂ ನಿರ್ವಹಣಾಶಾಸ್ತ್ರ ಅಧ್ಯಾಪಕರ ರಾಜ್ಯ ಸಂಘ ಹಾಗೂ ವಿಶ್ರೀಕೃವಿವಿ ಸಹಭಾಗಿತ್ವದಲ್ಲಿ ಆಯೋಜಿಸಿರುವ ಎರಡು ದಿನಗಳ 'ತಂತ್ರಜ್ಞಾನ ಆಧಾರಿತ ವ್ಯವಹಾರ ಪದ್ಧತಿಗಳು ಮತ್ತು ಕಾರ್ಯತಂತ್ರದ ಜಾಗತಿಕ ಸಮಾಗಮ' ಎಂಬ ವಿಚಾರ ಸಂಕಿರಣ ಗಣ್ಯರೊಂದಿಗೆ ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಕ್ ಸಮಿತಿಯು ಶಿಕ್ಷಣ ಸಂಸ್ಥೆಗಳಲ್ಲಿನ ಶೈಕ್ಷಣಿಕ ಪ್ರಗತಿಗೆ ಆದ್ಯತೆ ನೀಡುತ್ತದೆ. ಗುಣಮಟ್ಟದ ಶಿಕ್ಷಣ ಒದಗಿಸುವ ಸಂಸ್ಥೆಗಳಿಗೆ ಅರ್ಹತೆಗೆ ಅನುಗುಣವಾಗಿ ಗ್ರೇಡ್‌ಗಳನ್ನು ನೀಡುತ್ತದೆ. ನ್ಯಾಕ್ ಮಾನ್ಯತೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಮೌಲ್ಯಮಾಪನ ವ್ಯವಸ್ಥೆಗಳಿದ್ದು, ಆಯಾ ಮಾನದಂಡಗಳಿಗೆ ಅನುಸಾರವಾಗಿ ಗ್ರೇಡಿಂಗ್‌ಗಳನ್ನು ನೀಡಲಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಕಾಲೇಜು ಶಿಕ್ಷಣ ಮತ್ತು ಉನ್ನತ ಶಿಕ್ಷಣವು ಸದೃಢವಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್ ಕೋರ್ಸ್‌ಗಳಿಗೆ ನೋಂದಣಿ ಮಾಡಿಕೊಂಡು ವರ್ಷಕ್ಕೆ ಒಂದಾದರೂ ಕೋರ್ಸ್ ಪೂರ್ಣಗೊಳಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಬೆಂಗಳೂರಿನ ಥಾಮ್ಸನ್ ರಾಯ್ಸ್ ಎಐ ಕೇಂದ್ರದ ಹಿರಿಯ ನಿರ್ದೇಶಕ ಡಾ.ರಮೇಶ್ ಬಾಬು ಚಲ್ಲಪ್ಪನ್ ಅವರು ಮಾತನಾಡಿ, ಎಐ ಎಂದಿಗೂ ಮಾನವನ ಕೆಲಸ ಕಸಿಯಲು ಸಾಧ್ಯವಿಲ್ಲ. ವರ್ತಮಾನಕ್ಕೆ ತಕ್ಕಂತೆ ತಂತ್ರಜ್ಞಾನಗಳ ಜ್ಞಾನ ಪಡೆದುಕೊಂಡು ಸಾಗಿದರೆ ಯಾವ ಕೆಲಸವೂ ಕಷ್ಟವಲ್ಲ ಎಂದರು.

ಕಾರ್ಯಕ್ರಮದ ದಿಕ್ಸೂಚಿ ಭಾಷಣಕಾರರಾರು ಮೂಲತಃ ಬಳ್ಳಾರಿಯವರಾದ, ಪ್ರಸ್ತುತ ಬೆಂಗಳೂರಿನಲ್ಲಿ ನೆಲೆಸಿರುವ ಖ್ಯಾತ ಲೆಕ್ಕ ಪರಿಶೋಧಕ ಸಿ ಎ ಕೆ ಗುರುರಾಜ್ ಅವರು ಮಾತನಾಡಿ, 20 ವರ್ಷಗಳ ಹಿಂದಿನ ಶಿಕ್ಷಣ ಪದ್ಧತಿಗೂ ಹಾಗೂ ಇಂದಿನ ಡಿಜಿಟಲ್ ವಿದ್ಯಮಾನಗಳಿಗೂ ಸಾಕಷ್ಟು ಬದಲಾವಣೆಗಳಾಗಿವೆ. ಎಲ್ಲ ಕ್ಷೇತ್ರಗಳಲ್ಲಿಯೂ ಡಿಜಿಟಲ್ ಪದ್ಧತಿ ಅಳವಡಿಕೆಗೊಂಡಿದೆ. ಶಿಕ್ಷಣ ಕ್ಷೇತ್ರವೂ ಇದಕ್ಕೆ ಹೊರತಾಗಿಲ್ಲ. ಸಾಂಪ್ರದಾಯಿಕ ಅಕೌಂಟಿಂಗ್ ಮತ್ತು ಆದಾಯ ತೆರಿಗೆ ಪದ್ಧತಿಯೂ ರೂಪಾಂತರಗೊಂಡಿವೆ ಎಂದರು.

ಸ್ವಯಂ ಅಧ್ಯಯನ, ವಿದ್ಯಾರ್ಥಿಗಳಲ್ಲಿ ವಿಶ್ವಾಸಾರ್ಹತೆ ಹೆಚ್ಚಿಸುವುದು, ಆಲೋಚನಾ ಶಕ್ತಿ, ತಾಂತ್ರಿಕ ಕಲಿಕೆಗೆ ಉತ್ತೇಜನ, ನೈತಿಕ ಜವಾಬ್ದಾರಿಗಳನ್ನು ತಿಳಿಸಿಕೊಡುವುದರಿಂದ ಒಬ್ಬ ಉತ್ತಮ ಪ್ರಜೆಯನ್ನು ರೂಪಿಸಬಹುದು ಎಂದು ಹೇಳಿದರು.

ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ವಿವಿಧ ಹೊಸ ಕೋರ್ಸ್‌ಗಳನ್ನು ಸ್ಥಾಪಿಸುವುದು. ಕ್ಯಾಂಪಸ್‌ನಲ್ಲಿ ಐಟಿ ಮತ್ತು ಬಯೋ ಇನ್ನೋವೇಷನ್ ಸೆಂಟರ್, ಸ್ಪೋರ್ಟ್ಸ್ ಅಕ್ಯಾಡೆಮಿ ತೆರೆಯಲಾಗುವುದು ಮತ್ತು ಮುಂದಿನ ಘಟಿಕೋತ್ಸವಕ್ಕೆ ದೇಶದ ರಾಷ್ಟ್ರಪತಿಗಳನ್ನು ಆಹ್ವಾನಿಸಿ ಈ ಭಾಗಕ್ಕೆ ಬಲ ತುಂಬಲು ಪ್ರಯತ್ನಿಸುವುದಾಗಿ ತಿಳಿಸಿದರು.

ರಾಣಿ ಚನ್ನಮ್ಮ ವಿವಿಯ ನಿವೃತ್ತ ಕುಲಪತಿ ಪ್ರೊ. ಎಂ ರಾಮಚಂದ್ರರಾವ್ ಅವರು ಮಾತನಾಡಿ, ತಾಂತ್ರಿಕ ಆಧಾರಿತ ಹಾಗೂ ಔದ್ಯೋಗಿಕ ಆಧಾರಿತ ಶಿಕ್ಷಣವನ್ನು ಪಠ್ಯದಲ್ಲಿ ಅಳವಡಿಸಿದಲ್ಲಿ ವಿದ್ಯಾರ್ಥಿಗಳು ಕೆಲಸ ಪಡೆಯಬಹುದು. ನ್ಯಾಕ್ ಮಾನ್ಯತೆಯಿಂದ ಅನುದಾನಗಳು ಸಿಗುವಂತಾದರೆ ಎಲ್ಲ ಕಾಲೇಜುಗಳು ನ್ಯಾಕ್ ಮಾನ್ಯತೆಗೆ ಮುಂದಾಗುತ್ತಾರೆ. ಮುಂದಿನ 10 ವರ್ಷಗಳ ಬದಲಾವಣೆಯನ್ನು ಗಮನದಲ್ಲಿಟ್ಟುಕೊಂಡು ವಿವಿಗಳು ಪಠ್ಯಕ್ರಮ ರಚಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದ ವಾಣಿಜ್ಯ ಹಾಗೂ ನಿರ್ವಹಣಾಶಾಸ್ತ್ರ ಅಧ್ಯಾಪಕರ ರಾಜ್ಯ ಸಂಘದ ಅಧ್ಯಕ್ಷ ಪ್ರೊ.ಬಾಲಕೃಷ್ಣ ಪೈ ಅವರು ಮಾತನಾಡಿ, ಬದಲಾವಣೆ ಜಗತ್ತಿನ ನಿರಂತರ ನಿಯಮವಾಗಿದೆ. ಅವುಗಳಿಗೆ ತಕ್ಕಂತೆ ಸಾಗುವುದು ನಮ್ಮೆಲ್ಲರ ಕರ್ತವ್ಯ. ಕಲ್ಯಾಣ ಕರ್ನಾಟಕ ಭಾಗದ ವಾಣಿಜ್ಯ ಮತ್ತು ನಿರ್ವಹಣಾಶಾಸ್ತ್ರ ಪ್ರಾಧ್ಯಾಪಕರು ಹಾಗೂ ಪರಿಣಿತರನ್ನು ವಿಶ್ವವಿದ್ಯಾಲಯಗಳಿಗೆ ಆಹ್ವಾನಿಸಿ ಅವರ ಪ್ರಗತಿಪರ ಚಿಂತನೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಡುವ ಕೆಲಸ ಆಗಲಿ ಎಂದು ಆಶಿಸಿದರು.

ಕಾರ್ಯಕ್ರಮದ ಭಾಗವಾಗಿದ್ದ ವಾಣಿಜ್ಯ ಹಾಗೂ ನಿರ್ವಹಣಾಶಾಸ್ತ್ರ ವಿಷಯಗಳ ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳ ನಿವೃತ್ತ ಹಿರಿಯ ಪ್ರಾಧ್ಯಾಪಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಎರಡು ದಿನಗಳ ವಿಚಾರ ಸಂಕಿರಣದಲ್ಲಿ ರಾಜ್ಯದ ವಿವಿಧ ಭಾಗಗಳಿಂದ 500ಕ್ಕೂ ಹೆಚ್ಚು ಪ್ರಾಧ್ಯಾಪಕ ವರ್ಗ, ಸಂಶೋಧಕ ವರ್ಗ ಆಗಮಿಸಿದೆ.

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ವಿ ಲೋಕೇಶ್, ವಿತ್ತಾಧಿಕಾರಿ ಸ್ಫೂರ್ತಿ ಕೆ.ಜಿ., ವಿಶ್ವವಿದ್ಯಾಲಯದ ಡೀನರಾದ ಪ್ರೊ.ಸದ್ಯೋಜಾತಪ್ಪ ಎಸ್., ಪ್ರೊ.ಜಿ.ಪಿ ದಿನೇಶ್, ಎಫ್‌ಟಿಸಿಸಿಎಂಕೆಯ ಖಜಾಂಚಿ ಡಾ.ಎಂ ಜಯಪ್ಪ, ಕಾರ್ಯದರ್ಶಿ ಲೂಯಿಸ್ ಮನೋಜ್ ಅಂಬ್ರೋಸ್, ಡಾ.ಎಸ್.ರಮೇಶ್, ವಿವಿಯ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ರವಿ, ಸಂಘದ ಜಿಲ್ಲಾ ಅಧ್ಯಕ್ಷ ಡಾ.ರಾಮಚಂದ್ರ, ಸಂಕಿರಣದ ಸಂಚಾಲಕ ಅಧ್ಯಕ್ಷ ಡಾ.ಹೆಚ್ ರಾಮಕೃಷ್ಣ, ಸಂಕಿರಣದ ಕಾರ್ಯದರ್ಶಿ ಡಾ.ಪ್ರಹ್ಲಾದ್ ಚೌದ್ರಿ ವೇದಿಕೆಯಲ್ಲಿದ್ದರು.

ಕಾರ್ಯಕ್ರಮವನ್ನು ನಿರ್ವಹಣಾಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ.ನಿರ್ಮಲಾ ನಿರೂಪಿಸಿದರು. ಸಂಘದ ಪದಾಧಿಕಾರಿಗಳು, ಸರ್ವ ಸದಸ್ಯರು ಹಾಗೂ ವಿಶ್ವವಿದ್ಯಾಲಯದ ಎಲ್ಲ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ವರ್ಗ, ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

# ಪವರ್‌ಗ್ರಿಡ್‌ನ ಕಂಪನಿ ವಿರುದ್ಧ ರೈತರ ಆಕ್ರೋಶ
# ಇಟಗಿ-ಮಸಬಹಂಚಿನಾಳ ರಸ್ತೆಯಲ್ಲಿ ಅನಿರ್ದಿಷ್ಟಾವಧಿ ಸತ್ಯಾಗ್ರಹ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕುಕನೂರು-ಯಲಬುರ್ಗಾ ಅವಳಿ ತಾಲೂಕುಗಳ ವ್ಯಾಪ್ತಿಯಲ್ಲಿ ನಿರ್ಮಾಣವಾಗುತ್ತಿರುವ ಪವರ್‌ಗ್ರಿಡ್ ಯೋಜನೆಯಿಂದ ರೈತರಿಗೆ ನಿರಂತರವಾಗಿ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿ, ಗದಗದ ಕೊಪ್ಪಳ ಟ್ರಾನ್ಸ್‌ಮಿಷನ್ ಲಿಮಿಟೆಡ್ ಕಂಪನಿ ವಿರುದ್ಧ ರೈತರು ಇಂದಿನಿಂದ (ಶುಕ್ರವಾರ, ಜೂ.12) ಅನಿರ್ದಿಷ್ಟಾವಧಿ ಸತ್ಯಾಗ್ರಹವನ್ನು ಹಮ್ಮಿಕೊಂಡಿದ್ದಾರೆ. ಇಟಗಿ-ಮಸಬಹಂಚಿನಾಳ ರಸ್ತೆಯ ಸರ್ವೆ ನಂಬರ್ 87ರ ಜಮೀನಿನ ಪಕ್ಕದಲ್ಲಿ ಈ ಬೃಹತ್ ಶಾಂತಿಯುತ ಪ್ರತಿಭಟನೆ ಆರಂಭವಾಗಿದೆ.ರಾಜ್ಯ ರೈತ ಸಂಘದ ತಾಲೂಕು ಸದಸ್ಯರ ನೇತೃತ್ವದಲ್ಲಿ ಆಯೋಜಿತವಾಗಿರುವ ಈ ಹೋರಾಟಕ್ಕೆ ಇಟಗಿ-ಮಸಬಹಂಚಿನಾಳ, ಗಾವರಾಳ, ಮನ್ನಾಪುರ, ಮಾಳೇಕೊಪ್ಪ ಹಾಗೂ ಬನ್ನಿಕೊಪ್ಪ ಗ್ರಾಮಗಳ ರೈತಾಪಿ ವರ್ಗದವರು ಜೊತೆಗೆ ಭಾದಿತ ರೈತರು ಅನಿರ್ದಿಷ್ಟಾವಧಿ ಸತ್ಯಾಗ್ರಹವನ್ನು ಹಮ್ಮಿಕೊಂಡಿದ್ದಾರೆ.

ಜಿಲ್ಲಾಧಿಕಾರಿಗಳಿಗೆ ಮನವಿ : ರೈತರ ಪ್ರಮುಖ ಬೇಡಿಕೆಗಳು ಪವರ್‌ಗ್ರಿಡ್ ಯೋಜನೆಯಿಂದ ಬಾಧಿತರಾದ ರೈತರು ಕೊಪ್ಪಳದ ಜಿಲ್ಲಾಧಿಕಾರಿಗಳಿಗೆ ಲಿಖಿತ ಮನವಿಯೊಂದನ್ನು ಸಲ್ಲಿಸಿದ್ದು, ತಮ್ಮ ಮೇಲಾಗುತ್ತಿರುವ ಅನ್ಯಾಯವನ್ನು ಸರಿಪಡಿಸುವಂತೆ ಒತ್ತಾಯಿಸಿದ್ದಾರೆ. ರೈತರು ಮಂಡಿಸಿರುವ ಪ್ರಮುಖ ಬೇಡಿಕೆಗಳು ಈ ಕೆಳಗಿನಂತಿವೆ:

1) ಪರಿಹಾರ ವಿತರಣೆಯಲ್ಲಿ ತಾರತಮ್ಯ ನಿವಾರಣೆ: ಜಿಲ್ಲಾವಾರು ವಿದ್ಯುತ್ ಟವರ್ ನಿರ್ಮಾಣದ ಸಂದರ್ಭದಲ್ಲಿ ಹಣ ವಿತರಣೆ ಮಾಡುವಲ್ಲಿ ಆಗಿರುವ ತಾರತಮ್ಯಗಳನ್ನು ತಕ್ಷಣವೇ ಸರಿಪಡಿಸಬೇಕು.

2) ವೈಜ್ಞಾನಿಕ ಮೌಲ್ಯಮಾಪನ: ವಿದ್ಯುತ್ ಲೈನ್ ಹಾದುಹೋಗುವ ಕಾರಿಡಾರ್ ಕೆಳಗೆ ಬರುವ ನಿಡಮರಗಳು ಹಾಗೂ ತೋಟಗಾರಿಕೆ ಬೆಳೆಗಳ ಹಾನಿಗೆ ಸೂಕ್ತ ಪರಿಹಾರ ನಿಗದಿಪಡಿಸಲು ಸಂಬಂಧಪಟ್ಟ ಇಲಾಖೆಯು ನಿಖರ ಮೌಲ್ಯಮಾಪನ ಮಾಡಿಸಿ, ನ್ಯಾಯಯುತ ದರ ನಿಗದಿಪಡಿಸಬೇಕು.

3) ವಿವಿಧ ಬೆಳೆಗಳಿಗೆ ಪರಿಹಾರ: ತೋಟಗಾರಿಕೆ ಬೆಳೆಗಳಾದ ದಾಳಿಂಬೆ, ಶ್ರೀಗಂಧ, ತೆಂಗು, ಪೇರಲ, ಕರಿಬೇವು, ನುಗ್ಗೆ ಹಾಗೂ ಇತರೆ ಬಹುವಾರ್ಷಿಕ ಬೆಳೆಗಳಿಗೆ ಮತ್ತು ಬೀಜ ಉತ್ಪಾದನಾ ಬೆಳೆಗಳಾದ ಹತ್ತಿ, ಕಲ್ಲಂಗಡಿ, ಕುಂಬಳ, ಮೆಣಸಿನಕಾಯಿ ಮುಂತಾದ ಬೆಳೆಗಳಿಗೆ ಸೂಕ್ತ ಪರಿಹಾರ ನೀಡಬೇಕು.

4) ಆಸ್ತಿಪಾಸ್ತಿ ಹಾನಿಗೆ ಪರಿಹಾರ: ಯೋಜನೆಯಿಂದಾಗಿ ಹಾನಿಗೊಳಗಾಗುವ ರೈತರ ಬೋರ್‌ವೆಲ್, ಬಾವಿ, ದನದ ಕೊಟ್ಟಿಗೆ, ರೈತರ ಪರಿಕರ ಸಂಗ್ರಹ ರೂಮ್ ಹಾಗೂ ನೀರು ಸಂಗ್ರಹಣಾ ತೊಟ್ಟಿಗಳಿಗೆ ಸೂಕ್ತ ಪರಿಹಾರವನ್ನು ಒದಗಿಸಬೇಕು.5) ಜೀವವಿಮೆ ಸೌಲಭ್ಯ: ಪವರ್ ಗ್ರಿಡ್ ವಿದ್ಯುತ್ ಸರಬರಾಜು ಲೈನ್ ಕೆಳಗಿನ ರೈತರ ಜಮೀನುಗಳಲ್ಲಿ ಕೆಲಸ ಮಾಡುವಾಗ ಜೀವಕ್ಕೆ ಅಪಾಯ ಉಂಟಾಗುವ ಸಂಭವವಿರುವುದರಿಂದ, ಕಾರಿಡಾರ್ ಲೈನ್ ಕೆಳಗೆ ಬರುವ ರೈತರಿಗೆ ಕಡ್ಡಾಯವಾಗಿ 2 ಕೋಟಿ ರೂಪಾಯಿಗಳ ಜೀವವಿಮೆ ಸೌಲಭ್ಯವನ್ನು ಕಂಪನಿಯು ಒದಗಿಸಬೇಕು.ಈ ಸಂದರ್ಭದಲ್ಲಿ ಪ್ರಗತಿಪರ ರೈತ ಶರಣಪ್ಪ ಗುಂಗಾಡಿಯವರು ರೈತರ ಹೋರಾಟಕ್ಕೆ ಬೆಂಬಲ ನೀಡಿದರು. ಸಂಜೀವಪ್ಪ ಸಂಘಟಿ, ಉಮೇಶ್ ವೀರಾಪುರ, ವೀರೇಶ, ರೈತ ಮಹಿಳೆಯರಾದ ಹುಲಿಗೆಮ್ಮ, ದುರ್ಗಮ್ಮ, ದೇವಕ್ಕ ಪೂಜಾರಿ,

ಬಸವ ಸಿಂದೋಗಿ, ಲಕ್ಷ್ಮವ್ವ, ರುದ್ರಪ್ಪ ಬೆನ್ನಳ್ಳಿ, ಹೇಮಣ್ಣ ಯರಾಸಿ, ಪ್ರಭುಗೌಡ ಪಾಟೀಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ರೈತ ಮುಖಂಡರ ಅಧಿಕೃತ ಜಂಟಿ ಹೇಳಿಕೆ..!

"ಗದಗ್-ಕೊಪ್ಪಳ ಟ್ರಾನ್ಸ್‌ಮಿಷನ್ ಲಿಮಿಟೆಡ್ ಕಂಪನಿಯ ದೌರ್ಜನ್ಯ ಮತ್ತು ದ್ವಂದ್ವ ನೀತಿಯ ವಿರುದ್ಧ ನಮ್ಮ ಹೋರಾಟ ಇಂದಿನಿಂದ ಆರ್‌ಪಾರ್ ಹಂತಕ್ಕೆ ತಲುಪಿದೆ. ನಮ್ಮ ಜಮೀನುಗಳನ್ನು ಕಿತ್ತುಕೊಂಡು, ನಮ್ಮ ಬದುಕನ್ನು ಬೀದಿಗೆ ತಳ್ಳಲು ಹೊರಟಿರುವ ಕಂಪನಿಯ ನಡೆಗೆ ನಮ್ಮ ತೀವ್ರ ಧಿಕ್ಕಾರವಿದೆ. ಒಂದೇ ಯೋಜನೆ, ಒಂದೇ ರೀತಿಯ ಟವರ್‌ಗಳಿದ್ದರೂ ಬೇರೆ ಜಿಲ್ಲೆಗಳಿಗೆ ಒಂದು ದರ, ನಮ್ಮ ಕೊಪ್ಪಳದ ರೈತರಿಗೆ ಅತ್ಯಂತ ಕಡಿಮೆ ದರ ನೀಡಿ ತಾರತಮ್ಯ ಮಾಡಲಾಗುತ್ತಿದೆ. ಈ ಅನ್ಯಾಯ ನಿಲ್ಲಬೇಕು, ಎಲ್ಲರಿಗೂ ಸಮಾನ ಪರಿಹಾರ ಸಿಗಲೇಬೇಕು"

**ಶೇಖರಗೌಡ ಅಕ್ಕಂಡಿ, ಬಾಧಿತ ರೈತ. ಇಟಗಿ ಗ್ರಾಮ.**

---

"ನಮ್ಮ ಜಮೀನಿನಲ್ಲಿರುವ ಶ್ರೀಗಂಧ, ದಾಳಿಂಬೆ, ತೆಂಗು, ಕರಿಬೇವು ಮುಂತಾದ ತೋಟಗಾರಿಕಾ ಬೆಳೆಗಳು ಹಾಗೂ ಹತ್ತಿ, ಕಲ್ಲಂಗಡಿಯಂತಹ ಬೀಜೋತ್ಪಾದನಾ ಬೆಳೆಗಳಿಗೆ ಕಂಪನಿ ನಿಗದಿಪಡಿಸಿದ ಏಕಪಕ್ಷೀಯ ದರ ನಮಗೆ ಒಪ್ಪಿಗೆಯಿಲ್ಲ. ಸಂಬಂಧಪಟ್ಟ ಸರ್ಕಾರಿ ಇಲಾಖೆಗಳಿಂದ ವೈಜ್ಞಾನಿಕ ಮೌಲ್ಯಮಾಪನ ಮಾಡಿಸಿ, ಸೂಕ್ತ ಮಾರುಕಟ್ಟೆ ದರ ನೀಡಬೇಕು"

"ಕಾಮಗಾರಿಯಿಂದ ಧ್ವಂಸಗೊಳ್ಳುತ್ತಿರುವ ನಮ್ಮ ಬೋರ್‌ವೆಲ್, ತೆರೆದ ಬಾವಿ, ದನದ ಕೊಟ್ಟಿಗೆ ಹಾಗೂ ನೀರು ಸಂಗ್ರಹಣಾ ತೊಟ್ಟಿಗಳಿಗೆ ಸಂಪೂರ್ಣ ಪರಿಹಾರ ಒದಗಿಸಬೇಕು"

**ಪ್ರಭು ಆಚಾರ್, ರೈತ ಮುಖಂಡ ಮಸಬಹಂಚಿನಾಳ ಗ್ರಾಮ.**

---

"2 ಕೋಟಿ ಜೀವವಿಮೆ ಕಡ್ಡಾಯ: 400KV ಗಿಂತಲೂ ಹೆಚ್ಚಿನ ಸಾಮರ್ಥ್ಯದ ಲೈನ್‌ಗಳ ಕೆಳಗೆ ನಾವು ಜೀವದ ಹಂಗು ತೊರೆದು ಕೃಷಿ ಮಾಡಬೇಕಿದೆ. ಭವಿಷ್ಯದ ಸುರಕ್ಷತೆಗಾಗಿ ಕಾರಿಡಾರ್ ವ್ಯಾಪ್ತಿಯ ಪ್ರತಿ ರೈತ ಕುಟುಂಬಕ್ಕೆ ಕಂಪನಿಯೇ 2 ಕೋಟಿ ಮೊತ್ತದ ಜೀವವಿಮೆ ಮಾಡಿಸಿಕೊಡಬೇಕು"

**ಮೆಹಬೂಬ್ ಮಾಳೆಕೋಪ್ಪ, ಕುಕನೂರು .**

---

## ಕಂಪನಿ ಮತ್ತು ಸರ್ಕಾರಕ್ಕೆ ರೈತರಿಂದ ನೇರ ಎಚ್ಚರಿಕೆ..!

"ನಾವು ಈಗಾಗಲೇ ಜಿಲ್ಲಾಧಿಕಾರಿಗಳಿಗೆ, ಸಹಾಯಕ ಆಯುಕ್ತರಿಗೆ ಮತ್ತು ತಹಶೀಲ್ದಾರರಿಗೆ ಲಿಖಿತ ಮನವಿ ಸಲ್ಲಿಸಿದ್ದೇವೆ. ಎಲ್ಲಿಯವರೆಗೆ ಕಂಪನಿಯು ನಮ್ಮೊಂದಿಗೆ ನೇರ ಮಾತುಕತೆ ನಡೆಸಿ ಈ ಎಲ್ಲ ಬೇಡಿಕೆಗಳನ್ನು ಈಡೇರಿಸುವುದಿಲ್ಲವೋ, ಅಲ್ಲಿಯವರೆಗೆ ನಮ್ಮ ಈ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಿಲ್ಲುವುದಿಲ್ಲ. ಯಲಬುರ್ಗಾ-ಕುಕನೂರು ಅವಳಿ ತಾಲೂಕಿನ ಸಮಸ್ತ ರೈತ ಬಾಂಧವರು ಪಕ್ಷಾತೀತವಾಗಿ ಈ ಹೋರಾಟಕ್ಕೆ ಕೈಜೋಡಿಸಬೇಕು" ಎಂದು ರೈತ ಮುಖಂಡ ಅಂದಪ್ಪ ಹುರಳಿ ಹಾಗೂ ಬಾಧಿತ ರೈತರ ಒಕ್ಕೂಟದ ಮಾತುಗಳಾಗಿವೆ.

## ಬೀಳ್ಕೊಡುಗೆ, ಸನ್ಮಾನ ಸಮಾರಂಭ



**ಗಂಗಾವತಿ:** ವಿರುಪಾಪುರ ತಾಂಡದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುದೀರ್ಘ ಹಾಗೂ ಮಾದರಿ ಸೇವೆ ಸಲ್ಲಿಸಿ ಬಡ್ತಿ ಹೊಂದಿ ವರ್ಗಾವಣೆಗೊಂಡಿರುವ ಮುಖ್ಯೋಪಾಧ್ಯಾಯರಾದ ಶ್ರೀ ರಾಮಪ್ ಸರ್ ಅವರಿಗೆ ಆತ್ಮೀಯ ಬೀಳ್ಕೊಡುಗೆ ಹಾಗೂ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ವಿರುಪಾಪುರ ಬಂಜಾರ ಸಮಾಜ ಮತ್ತು ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ಪಂಚಾಯತ್ ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಈ ಗೌರವ ಸಮರ್ಪಣಾ ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಿ ಜರುಗಿತು.

**ಅರ್ಥಪೂರ್ಣ ಕಾರ್ಯಕ್ರಮಗಳು:** ಸಸಿ ನೆಡುವ ಮೂಲಕ ಪರಿಸರ ಜಾಗೃತಿ: ಕಾರ್ಯಕ್ರಮದ ನೆನಪಿಗಾಗಿ ಶಾಲಾ ಆವರಣದಲ್ಲಿ ಗಣ್ಯರು ಹಾಗೂ ಶಿಕ್ಷಕ ವೃಂದದ ಸಮ್ಮುಖದಲ್ಲಿ ಗಿಡ ನೆಡುವ ಮೂಲಕ ಅರ್ಥಪೂರ್ಣ ಚಾಲನೆ ನೀಡಲಾಯಿತು. ಇದೇ ಸಂದರ್ಭದಲ್ಲಿ ಬಂಜಾರ ಸಮಾಜ ವತಿಯಿಂದ ರಾಮಪ್ಪ ದಂಪತಿಗಳಿಗೆ ಸನ್ಮಾನಿಸಲಾಯಿತು

ವಿದ್ಯಾರ್ಥಿಗಳಿಂದ ಗೌರವಾರ್ಪಣೆ: ಶಾಲೆಯ ವಿದ್ಯಾರ್ಥಿಗಳು ತಮ್ಮ ಪ್ರೀತಿಯ ಮುಖ್ಯ ಗುರುಗಳಿಗೆ ಪುಷ್ಪಗುಚ್ಛ ನೀಡಿ, ಆಶೀರ್ವಾದ ಪಡೆದು ಭಾವುಕರಾಗಿ ಬೀಳ್ಕೊಟ್ಟರು.

**ಗಣ್ಯರ ಉಪಸ್ಥಿತಿ:** ವೇದಿಕೆಯಲ್ಲಿ ಶಿಕ್ಷಣ ಇಲಾಖೆಯ ಪ್ರಮುಖ ಅಧಿಕಾರಿಗಳು, ಶಿಕ್ಷಕರಾದ ಮಂಜುನಾಥ್ ಸರ್ ಶಿಕ್ಷಕಿಯರು ಸ್ಥಳೀಯ ಜನಪ್ರತಿನಿಧಿಗಳು, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷರು ದುರ್ಗಪ್ಪ ಪದಾಧಿಕಾರಿಗಳು ಹಾಗೂ ನಗರಸಭೆ ಮಾಜಿ ಸ್ಥಾಯಿ ಸಮಿತಿ ಸದಸ್ಯರ ಶ್ರೀ ರಾಮ ನಾಯ್ಕ, ಕೆಆರ್ ಫಕೀರಪ್ಪ,ಶಿವಪ್ಪ ಜಾಗೋ ಗೋರ್, ಹಾಗೂ ಶ್ರೀ ಸೇವಾಲಾಲ್ ಮಹಾರಾಜ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷರು ಪಾಂಡು ನಾಯ್ಕ್ ಮೇಸ್ತ್ರಿ, ,ಹನುಮಂತ ಮೇಸ್ತ್ರಿ, ಕೃಷ್ಣ ನಾಯ್ಕ್ ಮೇಸ್ತ್ರಿ, ವೆಂಕಟೇಶ್ ಜಾದವ್, ತಾಂಡ ನಿಗಮ ರವಿ ನಾಯ್ಕ್, ರವಿಚಂದ್ರ, ,ಅಂಬರೀಶ ಮಂಜುನಾಥ್ ಕ್ರಷ್ಣ ನಾಯ್ಕ್, ಕೆಆರ್ ಸಂತೋಷ್, ವೆಂಕಟೇಶ್ ಪರಶುರಾಮ್ ಹನುಮಂತ, ಇನ್ನಿತರರು ಉಪಸ್ಥಿತರಿದ್ದರು.

## ರಸಗೊಬ್ಬರ ವಿತರಣೆ: ಪಾರದರ್ಶಕಕ್ಕೆ ಸೂಚನೆ




**ಗಂಗಾವತಿ:** ಕೃಷಿ ತಾಲ್ಲೂಕಿನಲ್ಲಿ ಎಲ್ಲಾ ರಸಗೊಬ್ಬರ ಮಾರಾಟಗಾರರು ನಿಯಮಾನುಸಾರ ರಸಗೊಬ್ಬರ ವಿತರಣೆಯನ್ನು ಪಾರದರ್ಶಕವಾಗಿ ಹಾಗೂ ನಿಯಮಬದ್ಧವಾಗಿ ನಡೆಸುವಂತೆ ಸೂಚಿಸಲಾಗಿದೆ.

ರೈತರಿಗೆ ರಸಗೊಬ್ಬರ ವಿತರಿಸುವ ಸಂದರ್ಭದಲ್ಲಿ ಪಿಒಎಸ್ (ಪಿಒಎಸ್) ಯಂತ್ರದ ಮೂಲಕ ಹಾಗೂ ಕೆ–ಕಿಸಾನ್ ಆಪ್‌ನಲ್ಲಿ ಎಫ್‌ಐಡಿ ಬಳಸಿ ರೈತರ ವಿವರಗಳನ್ನು ಖಚಿತಪಡಿಸಿಕೊಂಡು,ವಿಸ್ತೀರ್ಣಕ್ಕೆ ಮಾತ್ರ ರಸಗೊಬ್ಬರ ವಿತರಣೆ ಮಾಡಬೇಕು.ವಿಶೇಷವಾಗಿ ಯೂರಿಯಾ ವಿತರಣೆಯನ್ನು ಕಡ್ಡಾಯವಾಗಿ **K-Kisan** ಅಪ್ಲಿಕೇಶನ್‌ನಲ್ಲಿ **FID** ಬಳಸಿ ವಿತರಣೆ ಮಾಡಬೇಕು.

ಎಲ್ಲಾ ಕೃಷಿ ಪರಿಕರಗಳ ಅಂಗಡಿಗಳಲ್ಲಿ ದರಪಟ್ಟಿ ಹಾಗೂ ದಾಸ್ತಾನು ವಿವರಗಳನ್ನು ಸ್ಪಷ್ಟವಾಗಿ ಪ್ರದರ್ಶಿಸಬೇಕು ಮತ್ತು ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡಬಾರದು ಹಾಗೂ ಪ್ರತಿಯೊಬ್ಬ ರೈತನಿಗೂ ಕಡ್ಡಾಯವಾಗಿ ಬಿಲ್ ಮಾಡಬೇಕು.

ಅಂತರ್ ಜಿಲ್ಲಾ ಮಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಮತ್ತು ರೈತರಿಗೆ ಯೂರಿಯಾ ರಸಗೊಬ್ಬರ ವಿತರಿಸುವ ಸಂದರ್ಭದಲ್ಲಿ ಬೇರೆ ಯಾವುದೂ ಇಲ್ಲ ಕಡ್ಡಾಯವಾಗಿ ಜೋಡಣೆ (ಲಿಂಕ್) ಮಾಡಬಾರದು. **POS** ಯಂತ್ರದಲ್ಲಿ ಅಂಗೀಕರಿಸಿದ ನಂತರವೇ ರೈತರಿಗೆ ರಸಗೊಬ್ಬರ ವಿತರಣೆ ಮತ್ತು ಜೊತೆಗೆ **POS** ದಾಸ್ತಾನು ಮತ್ತು ಭೌತಿಕ ದಾಸ್ತಾನು ಮಾಹಿತಿ ನೈಜ ಸಮಯದಲ್ಲಿ ಹೊಂದಾಣಿಕೆ ಮಾಡಿಕೊಂಡಿರಬೇಕು. ಈ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದ ವಿತರಕರ ವಿರುದ್ಧ ರಸಗೊಬ್ಬರ ನಿಯಂತ್ರಣ ಆದೇಶದಡಿ ಕ್ರಮ ಕೈಗೊಳ್ಳಲಾಗುವುದು ಎಂದು ಡಾ: ಶ್ರೀಮತಿ ಅಭಿಲಾಷ ಸಿ.ಆರ್. ಸಹಾಯಕ ಕೃಷಿ ನಿರ್ದೇಶಕರು ಕೃಷಿ ಇಲಾಖೆ ಗಂಗಾವತಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸುತ್ತಾರೆ.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಸಮಾಜದ ಅನಿಷ್ಠ ಪದ್ಧತಿಗಳಲ್ಲಿ ಒಂದಾದ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾಸ್ಟರ್ ಆರ್. ಕೆ.ಜಿ.ಎಂ.ಎಂ. ಮಹಾಸ್ವಾಮಿಜಿ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಜಿಲ್ಲಾ ಮಕ್ಕಳಿ ರಕ್ಷಣಾ ಘಟಕದ ಸಯೋಗದಲ್ಲಿ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳನ್ನು ಶಿಕ್ಷಣದಿಂದ ವಂಚಿಸಿ ದುಡಿಮೆಗೆ ತೊಡಗಿಸುವುದು ಕಾನೂನು ಬಾಹಿರವಾಗಿದ್ದು, ಬೇರೆ ಮಕ್ಕಳ ಹಾಗೆ ಆಟ, ಪಾಠಗಳಲ್ಲಿ ತೊಡಗಿಸುವ ಮೂಲಕ ಅವರು ಕೂಡಾ ಮುಖ್ಯವಾಹಿನಿಗೆ ಬರುವಂತೆ ಮಾಡಬೇಕಿದೆ ಎಂದರು.

ಬಾಲಕಾರ್ಮಿಕತೆಗೆ ಬಡತನ ಮುಖ್ಯ ಕಾರಣವಾಗಿದ್ದು, ಶಿಕ್ಷಣ ಪಡೆಯುವ ಮೂಲಕ ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಾಗುತ್ತದೆ. 14 ವರ್ಷದೊಳಗಿನ ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಕಡ್ಡಾಯವಾಗಿದ್ದು, ಆರೋಗ್ಯ ಹಾಗೂ ಸುರಕ್ಷಿತ ಬಾಲ್ಯ ಪಡೆಯುವ ಹಕ್ಕು ಇದೆ. ಬಾಲಕಾರ್ಮಿಕತೆಯನ್ನು ತಡೆಗಟ್ಟಲು ಸಮಾಜದ ಎಲ್ಲ ವರ್ಗದವರ ಸಹಕಾರ ಅಗತ್ಯವಾಗಿದೆ ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಪ್ರಮಾಣ ವಚನ ಬೋಧಿಸಿ ಮಾತನಾಡಿ, ಮಕ್ಕಳು ದೇಶದ ಅಮೂಲ್ಯ ಸಂಪತ್ತಾಗಿದ್ದು, ಅವರ ಕೈಯಲ್ಲಿ ಪುಸ್ತಕಗಳು ಇರಬೇಕು ಹೊರತು ಉಪಕರಣಗಳಲ್ಲಿ. ಮಕ್ಕಳ ದುಡಿಮೆಗೆ ಮುಖ್ಯವಾಗಿ ಬಡತನ, ಸಾಮಾಜಿಕ ಅಸಮಾನತೆ ಕಾರಣವಾಗಿದ್ದು, ಇದನ್ನು ಹೋಗಲಾಡಿಸಲು ಸರಕಾರ ಮಾತ್ರ ಪರಿಹರಿಸಲು ಸಾದ್ಯವಿಲ್ಲ. ಸಮಾಜದ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಆಗಿದೆ. ಬಾಲಕಾರ್ಮಿಕತೆ ನಿರ್ಮೂಲನೆ ಮಾಡಿ ಬಾಲ್ಯವನ್ನು ಸಂರಕ್ಷಿಸುವ ಕೆಲಸವಾಗಬೇಕು ಎಂದರು.

ಉಪನ್ಯಾಸಕರಾಗಿ ಆಗಮಿಸಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಕಾನೂನು ಅಭಿರಕ್ಷಕ ಪಿ.ಎಚ್.ಮಾಳೇದ, ಬಾಲ ಮತ್ತು ಕಿಶೋರ ಕಾರ್ಮಿಕರ ನಿಷೇಧ ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016 ಕುರಿತು ವಿವರವಾಗಿ ತಿಳಿಸಿಕೊಟ್ಟರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಗದ್ದಿ ಮಾತನಾಡಿದರು.

ಬಾಲಕಾರ್ಮಿಕನಾಗಿ ಕೆಲಸ ಮಾಡುತ್ತಿರುವಾಗ ಕೆಲಸದಿಂದ ಬಿಡುಗಡೆಗೊಳಿಸಿ ಶಾಲೆಗೆ ದಾಖಲು ಮಾಡಲಾಗಿದ್ದ ವಿದ್ಯಾರ್ಥಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.80.64 ರಷ್ಟು ಅಂಕ ಪಡೆಯುವ ಮೂಲಕ ಶಾಲೆಗೆ ಪ್ರಥಮ ಸ್ಥಾನ ಪಡೆದ ಗಣೇಶ ಕಾಂಬಳೆ ವಿದ್ಯಾರ್ಥಿಯನ್ನು ಸನ್ಮಾನಿಸಿ 2 ಸಾವಿರ ರೂ.ಗಳ ಚೆಕ್ ವಿತರಿಸಲಾಯಿತು.

**2025–26 ನೇ ಸಾಲಿನಲ್ಲಿ ಅತೀ ಹೆಚ್ಚು ಬಾಲ ಮತ್ತು ಕಿಶೋರಿ ಕಾರ್ಮಿಕರ ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾಖಲಿಸಿದ ಬಾಗಲಕೋಟೆ ತಾಲೂಕಿನ ಕಾರ್ಮಿಕ ನಿರೀಕ್ಷಕ ರಾಜಶೇಖರ ಕುರಡಿ–ಕೇರಿ ಅವರನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಸ್ಟರ್ ಆರ್.ಕೆ.ಜಿ.ಎಂ.ಎಂ ಮಹಾಸ್ವಾಮಿಜಿ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಸನ್ಮಾನಿಸಿದರು.**

ಅದೇ ರೀತಿ ರುಕ್ಮೀಣಿ ಖಾನಾಪೂರ, ಸುದೀಪ ಸಾಲಮಂಟಪಿ, ಸಮಸುದ್ದಿನ್ ಯೂಸುಫ್ ಬಾಲಕರನ್ನು ಕೆಲಸದಿಂದ ಬಿಡುಗಡೆಗೊಳಿಸಲಾಗಿದೆ. ಅವರಿಗೆ ಕೆಲಸಕ್ಕೆ ಇಟ್ಟುಕೊಂಡ ಮಾಲಿಕರಿಂದ 20 ಸಾವಿರ ರೂ. ಹಾಗೂ ಸರಕಾರದಿಂದ 18 ಸಾವಿರ ರೂ. ಸೇರಿ ಒಟ್ಟು 35 ಸಾವಿರ ರೂ.ಗಳ ಚೆಕ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಪ್ರಶಾಂತ ನಾರಾಯನಕರ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಸ್ಥೆಯ ಯೋಜನಾ ನಿರ್ದೇಶಕ ಸುಧಾರಕರ ಬಡಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರಧಾನಿ ನರೇಂದ್ರ ಮೋದಿ ಅವರ ಐತಿಹಾಸಿಕ ಸಾಧನೆ, ಅಂಜನಾದ್ರಿಯಲ್ಲಿ ವಿಶೇಷ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಜನರಿಂದ ಚುನಾಯಿತರಾಗಿ ಅತ್ಯಂತ ದೀರ್ಘಾವಧಿ ದೇಶವನ್ನು ಮುನ್ನಡೆಸುತ್ತಿರುವ ಪ್ರಧಾನಮಂತ್ರಿಯಾಗಿ ಹೊಸ ದಾಖಲೆಯನ್ನು ನಿರ್ಮಿಸಿರುವ ಸನ್ಮಾನ್ಯ ಪ್ರಧಾನಿ ಶ್ರೀ ನರೇಂದ್ರ ಮೋದಿ ಜೀ ಅವರು ಸತತ 4,399 ದಿನಗಳ ಕಾಲ ದೇಶದ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿರುವ ಐತಿಹಾಸಿಕ ಸಂದರ್ಭದಲ್ಲಿ, ಗಂಗಾವತಿ ಶಾಸಕ ಹಾಗೂ ಮಾಜಿ ಸಚಿವರಾದ ಶ್ರೀ ಗಾಲಿ ಜನಾರ್ಧನ ರೆಡ್ಡಿ ಅವರು ಇಂದು ಶ್ರೀ ಹನುಮಂತನ ಜನ್ಮಭೂಮಿಯಾದ ಪವಿತ್ರ ಅಂಜನಾದ್ರಿ ಬೆಟ್ಟದಲ್ಲಿ ವಿಶೇಷ ಪೂಜೆ ಹಾಗೂ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ಲಕ್ಷ್ಮಿ ಅರುಣ ಅವರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ಪ್ರಧಾನಿ ಮೋದಿ ಜೀ ಅವರ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಮತ್ತು ರಾಷ್ಟ್ರಸೇವೆಗೆ ಇನ್ನಷ್ಟು ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಿದರು.



ಕಳೆದ ಒಂದೂವರೆ ದಶಕಕ್ಕೂ ಹೆಚ್ಚು ಕಾಲ ರಾಷ್ಟ್ರದ ಸರ್ವಾಂಗೀಣ ಅಭಿವೃದ್ಧಿಯನ್ನು ಧ್ಯೇಯವನ್ನಾಗಿಸಿಕೊಂಡು, 140 ಕೋಟಿ ಭಾರತೀಯರ ಆಶೋತ್ತರಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಅವಿರತವಾಗಿ ಶ್ರಮಿಸುತ್ತಿರುವ ಪ್ರಧಾನಿ ಮೋದಿ ಜೀ ಅವರ ದೂರದರ್ಶಿತ್ವದ ನಾಯಕತ್ವದಲ್ಲಿ ಭಾರತವು ಜಾಗತಿಕ ಮಟ್ಟದಲ್ಲಿ ಹೊಸ ಎತ್ತರಗಳನ್ನು ತಲುಪಿದೆ. ವಿಕಸಿತ, ವೈಭವಶಾಲಿ, ಆತ್ಮನಿರ್ಭರ ಹಾಗೂ ಶಕ್ತಿಶಾಲಿ ಭಾರತದ ನಿರ್ಮಾಣಕ್ಕಾಗಿ ಅವರು ಕೈಗೊಂಡಿರುವ ಸಂಕಲ್ಪ ಯಶಸ್ವಿಯಾಗಲಿ ಎಂದು ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ಬಿಜೆಪಿ ಜಿಲ್ಲಾಧ್ಯಕ್ಷರಾದ ನವೀನ್ ಗುಳಗಣ್ಣವರ್, ಮಾಜಿ ಕಾಡಾ ಅಧ್ಯಕ್ಷರಾದ ತಿಪ್ಪೇರುದ್ರಸ್ವಾಮಿ, ಮಾಜಿ ಜಿಲ್ಲಾಧ್ಯಕ್ಷರಾದ ಗಿರೇಗೌಡ್ರು, ಗ್ರಾಮೀಣ ಮಂಡಲ ಅಧ್ಯಕ್ಷರಾದ ಡಿ.ಕೆ ಆಗೋಲಿ ಮುಖಂಡರಾದ ಮನೋಹರಗೌಡ ಹೇರೂರು, ಯಮನೂರು ಚೌಡ್ಕಿ, ವೀರೇಶ್ ಬಲಕುಂದಿ, ವೆಂಕಟೇಶ್ ಜಬ್ಬಲಗುಡ್ಡ, ಗಂಗಾಧರ ಸ್ವಾಮಿ, ಚೆನ್ನವೀರಗೌಡ, ಚನ್ನಪ್ಪ ಮಳಿಗಿ, ಸಂಗಮೇಶ್ ಬಾದವಾಡಿಗಿ, ಟಿ.ಜಿ ಬಾಬು, ಮಲ್ಲಿಕಾರ್ಜುನ ಸ್ವಾಮಿ, ಆನಂದ ಗೌಡ, ರಮೇಶ್ ಹೊಸಮಲಿ, ವಿರೂಪಾಕ್ಷಿನಾಯಕ್, ವಿಶ್ವನಾಥ್ ಕೆಸರಟ್ಟಿ, ಅನಿಲ್ ನಾಯ್ಕ್, ನಗರ ಮಹಿಳಾ ಮೋರ್ಚಾ ಅಧ್ಯಕ್ಷರಾದ ಭಾರತಿ ಹಗಲೂರು ಸೇರಿದಂತೆ ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಶಿಸ್ತು, ವ್ಯಕ್ತಿತ್ವ ವಿಕಸನಕ್ಕೆ ಸರಕಾರಿ ಕಾಲೇಜು ಮಾದರಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಶಿಕ್ಷಣದ ಜೊತೆಗೆ ಸಂಸ್ಕಾರ, ಶಿಸ್ತು ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಆದ್ಯತೆ ನೀಡುವುದಕ್ಕೆ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜು ಮಾದರಿಯಾಗಿದೆ ಎಂದು ಕಾಲೇಜಿನ ಹಳೆ ವಿದ್ಯಾರ್ಥಿ ವಿಠ್ಠಲ ಮಾದರ ಹೇಳಿದರು.

ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಗುರುವಂದನ ಕಾರ್ಯಕ್ರಮದಲ್ಲಿ ಗುರುಗಳಿಗೆ ವಂದನೆ ಸಲ್ಲಿಸಿ ಮಾತನಾಡಿದ ಅವರು, ಕಾಲೇಜಿನಲ್ಲಿ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಚಿಂತನೆಗಳೊಂದಿಗೆ ಎಲ್ಲಾ ವಿದ್ಯಾರ್ಥಿಗಳಿಗೆ ಜಾತ್ಯಾತೀತ, ಸಮಾನ ತತ್ವದ ಪರಿಕಲ್ಪನೆಯಲ್ಲಿ ಗುಣಮಟ್ಟದ ನೈತಿಕ ಶಿಕ್ಷಣ ನೀಡಲಾಗುತ್ತಿದೆ. ಉದ್ಯೋಗಕೋಶ ಅಡಿಯಲ್ಲಿ ಪದವಿ ಮುಗಿಸಿದ ನಂತರ ಉದ್ಯೋಗದ ಅವಕಾಶವನ್ನು ಕಲ್ಪಿಸುತ್ತಿದೆ. ಎಲ್ಲ ಉಪನ್ಯಾಸಕರ ಸೂಕ್ತವಾದ ಮಾರ್ಗದರ್ಶನ, ಬೋಧನೆ ಮತ್ತು ವಿದ್ಯಾರ್ಥಿ ಸ್ನೇಹಿ ವಾತಾವರಣದಿಂದ ಕಾಲೇಜು ವಿಶೇಷ ಸ್ಥಾನ ಪಡೆದುಕೊಂಡು ಮಾದರಿ ಕಾಲೇಜು ಎನಿಸಿದೆ ಎಂದರು.

ಶಿವರಾಮ ಪಿಂಡರಕಿ ಮಾತನಾಡಿ, ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ಉಪನ್ಯಾಸಕರ ಪಾತ್ರ ಮಹತ್ವವಿದ್ದು, ಅವರು ಪಠ್ಯ ಬೋಧನೆಯ ಜೊತೆಗೆ ವಿದ್ಯಾರ್ಥಿಗಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುವ ಶಿಲ್ಪಿಗಳು ಎಂದು ಹೇಳಿದರು.




ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಾಮಾಜಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಗುರುಗಳಿಗೆ ಗೌರವ ನೀಡುವುದು ಭಾರತೀಯ ಸಂಸ್ಕೃತಿಯ ಶ್ರೇಷ್ಠ ಪರಂಪರೆಯಾಗಿದೆ, ನಮ್ಮ ಕಾಲೇಜು ಮಾದರಿಯಾಗಲು ಸಮಸ್ತ ಬೋಧಕರ, ಬೋಧಕೇತರ ಸಿಬ್ಬಂದಿ ವರ್ಗದ ಮತ್ತು ಸಿಡಿಸಿ ಸಮಿತಿಯವರ ಪರಿಶ್ರಮವಿದೆ ಎಂದು ತಿಳಿಸಿದರು.

ಉಪನ್ಯಾಸಕ ಡಾ. ಚಂದ್ರಶೇಖರ ಕಾಳನ್ನವರ, ಡಾ.ಸುಮಂಗಲಾ ಮೇಟಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಅಂತಿಮ ವರ್ಷದ ವಿದ್ಯಾರ್ಥಿ ಸಮೂಹದವರು ಈ ಸಂದರ್ಭದಲ್ಲಿ ಉಪನ್ಯಾಸಕರಿಗೆ ಗೌರವಿಸಿ ಸನ್ಮಾನ ಮಾಡಿದರು. ಕಾರ್ಯಕ್ರಮದಲ್ಲಿ 2025–26 ನೇ ಸಾಲಿನ ಅಂತಿಮ ವರ್ಷದ ವಿದ್ಯಾರ್ಥಿಗಳಾದ ರಂಗನಾಥ ಪೂಜಾರ, ಕುಮಾರಸ್ವಾಮಿ ತೆಂಗಿನಮಠ, ಮುತ್ತಪ್ಪ ಭರಮಗೌಡರ, ಅನಿಲ್ ತೆಗ್ಗಿ, ರಾಘವೇಂದ್ರ ಜಲಂದರ, ಸುನೀಲ ಮತ್ತಿತರರು ಭಾಗವಹಿಸಿದ್ದರು.

# ವಿವಿಧ ಬಗೆಯ ತಿಂಡಿ–ತಿನಿಸುಗಳ ಸಮರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಹಿರೇಜಂತಕಲ್ ವಿರೂಪಾಪುರದ ಆರ್ಯವೈಶ್ಯ ಸಮಾಜದ ವಾಸವಿ ಮಹಿಳಾ ಮಂಡಳಿಯ ನೇತೃತ್ವದಲ್ಲಿ ಅಧಿಕಮಾಸದ ಅಂಗವಾಗಿ ಶುಕ್ರವಾರ ಶ್ರೀ ಕನ್ನಿಕಾಪರಮೇಶ್ವರಿ ದೇವಸ್ಥಾನದಲ್ಲಿ ಶ್ರೀ ಗೋವರ್ಧನ ಪೂಜೆಯನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಮಹಿಳೆಯರಿಗೆ ಉಡಿ ತುಂಬುವಿಕೆ, ಧೂಪ–ದೀಪ ಆರಾಧನೆ, 33 ವಿವಿಧ ಬಗೆಯ ತಿಂಡಿ–ತಿನಿಸುಗಳ ನೈವೇದ್ಯ ಸಮರ್ಪಣೆ ಹಾಗೂ 33 ಭಕ್ತಿಗೀತೆಗಳ ಗಾಯನದ ಮೂಲಕ ಭಕ್ತರು ತಮ್ಮ ಭಕ್ತಿಪರಾಕಾಷ್ಠೆಯನ್ನು ಮೆರೆದರು.

ಈ ಸಂದರ್ಭದಲ್ಲಿ ಮಾತನಾಡಿದ ವಾಸವಿ ಮಹಿಳಾ ಮಂಡಳಿಯ ಅಧ್ಯಕ್ಷೆ ರುಕ್ಮಿಣಿ ದಮ್ಮೂರು, ಅಧಿಕಮಾಸದ ಆರಂಭದಿಂದಲೇ ಪ್ರತಿದಿನ ವಿಶೇಷ ಧಾರ್ಮಿಕ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಅಮಾವಾಸ್ಯೆಯಂದು ಅಧಿಕಮಾಸದ ವಿಶೇಷ ಪೂಜಾ ಕಾರ್ಯಕ್ರಮಗಳು ಸಮಾರೋಪಗೊಳ್ಳಲಿವೆ ಎಂದು ತಿಳಿಸಿದರು.



ಆರ್ಯವೈಶ್ಯ ಸಮಾಜದ ಅಧ್ಯಕ್ಷ ನಾಗರಾಜ ದರೋಜಿ ಮಾತನಾಡಿ, ಧಾರ್ಮಿಕ ಆಚರಣೆಗಳ ಮೂಲಕ ಸಮಾಜದ ಸಂಘಟನೆಗೆ ಉತ್ತೇಜನ ನೀಡಲಾಗುತ್ತಿದೆ. ದೇವಸ್ಥಾನದ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಯಶಸ್ಸಿಗೆ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು.

ದೇವಸ್ಥಾನದ ಉತ್ತರಭಾಗದಲ್ಲಿ ರಾಜಗೋಪುರ ನಿರ್ಮಾಣ ಕಾಮಗಾರಿ ಭರದಿಂದ ಸಾಗುತ್ತಿದ್ದು, ದೇವಸ್ಥಾನದ ಪಕ್ಕದಲ್ಲಿ ಬೃಹತ್ ವೇದಿಕೆ ನಿರ್ಮಾಣ ಮಾಡುವ ಸಂಕಲ್ಪ ಹೊಂದಲಾಗಿದೆ ಎಂದು ತಿಳಿಸಿದರು. ಅಲ್ಲದೆ, ಶನಿವಾರ ವೆಂಕಟಗಿರಿಯ ಶ್ರೀ ವೆಂಕಟೇಶ್ವರ ದೇವಸ್ಥಾನಕ್ಕೆ ಐದನೇ ವರ್ಷದ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುವಂತೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮಂಡಳಿಯ ಕಾರ್ಯದರ್ಶಿ ರಾಧಿಕಾ, ಉಪಾಧ್ಯಕ್ಷೆ ರೇಖಾ, ಪದ್ಮಾವತಿ, ನಾಗರಾಜ, ಮಂಜುಳಾ ದಮ್ಮೂರು, ಉಷಾ ಸೇರಿದಂತೆ ಅಪಾರ ಸಂಖ್ಯೆಯ ಭಕ್ತಾದಿಗಳು ಪಾಲ್ಗೊಂಡಿದ್ದರು.

# ಗ್ಯಾರಂಟಿ ನಿಲ್ಲಿಸಲು ಸರ್ಕಾರದ ಹುನ್ನಾರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ಯಾರಂಟಿಗಳ ವಿಚಾರದಲ್ಲಿ ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈಗ ಅದೇ ಗ್ಯಾರಂಟಿಗಳನ್ನು ಪರಿಷ್ಕರಣೆ ನೆಪದಲ್ಲಿ ಬಂದ್ ಮಾಡಲು ಹುನ್ನಾರ ನಡೆಸಿದೆ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಆರೋಪಿಸಿದ್ದಾರೆ.



ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಕೊಡಿ ಎಂದು ರಾಜ್ಯದ ಜನರು ಸರ್ಕಾರಕ್ಕೆ ಕೇಳಿರಲಿಲ್ಲ. ಅವರೇ ಸ್ವಾರ್ಥಕ್ಕಾಗಿ ಘೋಷಣೆ ಮಾಡಿದರು. ಫ್ರೀ ಬಸ್ ಕೊಡಿ ಎಂದು ಹೆಣ್ಣು ಮಕ್ಕಳು ಕೇಳಿರಲಿಲ್ಲ. ಆದರೂ ಸರ್ಕಾರವೇ ಕೊಟ್ಟು ಈಗ ಗ್ಯಾರಂಟಿಗಳನ್ನು ಸ್ಥಗಿತಗೊಳಿಸಲು ಮುಂದಾಗಿದ್ದಾರೆ ಎಂದು ಹೇಳಿದರು.

ಗೃಹಲಕ್ಷ್ಮಿ ಹಣ ಮೃತ ಫಲಾನುಭವಿಗಳ ಖಾತೆಗೆ ಹೋಗುತ್ತಿದೆ ಎಂಬ ವರದಿಗಳಿವೆ. ಸರ್ಕಾರದಲ್ಲಿ ಗ್ಯಾರಂಟಿ ಸಂಬಂಧ ಗೊಂದಲ ಇದೆ. ಎಲ್ಲಾ ಕಡೆ ಲೋಪ ಆಗಿದೆ. ಗ್ಯಾರಂಟಿಗಳು ಕಾಕಾ ಪಾಟೀಲಗೆ ಫ್ರೀ, ಸಿದ್ದರಾಮಯ್ಯಗೆ ಫ್ರೀ ಎಂದು ಹೇಳಿದ್ದರು. ಈಗ ಸರಿಯಾಗಿ ಜಾರಿ ಮಾಡದೆ ನಿಲ್ಲಿಸಲು ಮುಂದಾಗಿದ್ದಾರೆ.

ಆದ್ದರಿಂದ ಸರ್ಕಾರ ರಾಜ್ಯದ ಜನರ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

ಚುನಾವಣೆ ಬಂತು. ಅದರಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿತು. ಎಲೆಕ್ಷನ್‌ಗೆ ಗ್ಯಾರಂಟಿ ಕೊಡಬೇಕಿತ್ತು, ಕೊಟ್ಟರು. ಈಗ ನಿಲ್ಲಿಸುವ ಷಡ್ಯಂತ್ರ ಮಾಡುತ್ತಿದ್ದಾರೆ. ಗೃಹ ಲಕ್ಷ್ಮಿ ಹಣದಲ್ಲಿ ಅಕ್ರಮ ನಡೆದಿದೆ ಎಂದು ಸದನದಲ್ಲೇ ಒಪ್ಪಿಕೊಂಡಿದ್ದರು. ಅಧಿಕಾರಕ್ಕಾಗಿ ಸಿದ್ದರಾಮಯ್ಯ ಹಾಗೂ ಶಿವಕುಮಾರ್ ಅವರ ನಡುವೆ ಶೀತಲ ಸಮರ ನಡೆಯುತ್ತಿತ್ತು. ಈಗ ಶಿವಕುಮಾರ್ ಅವರು ಸಿಎಂ ಆದ ನಂತರ ಸಚಿವ ಸಂಪುಟಕ್ಕಾಗಿ ಕಚ್ಚಾಟ ಆರಂಭವಾಯಿತು. ಬೆಂಗಳೂರು ಅಭಿವೃದ್ಧಿ ಖಾತೆಗೆ ಕೃಷ್ಣ ಭೈರೇಗೌಡ ಕ್ಯಾತೆ ತೆಗೆದಿದ್ದಾರೆ ಎಂದರು.

ರಾಮಲಿಂಗಾ ರೆಡ್ಡಿ ಅವರು ಖಾತೆ ಬೇಡ ಅಂತ ರಾಜೀನಾಮೆ ನೀಡಿದ್ದರು. ಕೆ.ಎಚ್.ಮುನಿಯಪ್ಪ ಅವರೂ ಖಾತೆಗೆ ಅಸಮಾಧಾನಗೊಂಡಿದ್ದರು. ಎಲ್ಲಕ್ಕೂ ರಾಹುಲ್ ಗಾಂಧಿ ಅವರ ಮೇಲೆಯೇ ಸರ್ಕಾರ ನಿಂತಿದೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳಾದ ಮೇಲೆ ಯಾವುದೂ ಸರಿ ಇಲ್ಲ ಎಂಬುದು ರಾಜ್ಯದ ಜನರಿಗೆ ತಿಳಿದಿದೆ ಎಂದು ಹೇಳಿದರು.

**ಧರ್ಮಸ್ಥಳದ ಷಡ್ಯಂತ್ರ...**

ಧರ್ಮಸ್ಥಳ ಪ್ರಕರಣದಲ್ಲಿ ಷಡ್ಯಂತ್ರ ನಡೆದಿದೆ ಎಂದು ಆಗ ಉಪ ಮುಖ್ಯಮಂತ್ರಿಗಳಾಗಿದ್ದ ಡಿ ಕೆ ಶಿವಕುಮಾರ್ ಅವರೇ ಹೇಳಿದ್ದರು. ಬಿಜೆಪಿ ನಾಯಕರು ಧರ್ಮಸ್ಥಳ ಚಲೋ ಮಾಡಿದ್ದೆವು. ಈಗ ಹೊಸದಾಗಿ ನಟ ಪ್ರಕಾಶ್ ರಾಜ್ ರೈ ಅವರ ಹೆಸರು ಕೇಳಿಬರುತ್ತಿದೆ. ಹಿಂದೂ ಧಾರ್ಮಿಕ ಸ್ಥಳಕ್ಕೆ ತೊಂದರೆ ಮಾಡುವ ಕೆಲಸ ನಡೆಯುತ್ತಿದೆ ಎಂದು ಪ್ರಶ್ನೆಯೊಂದಕ್ಕೆ ತಿಳಿಸಿದರು.

# ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಮೂರ್ತಿ ಸ್ಥಾಪನೆಗೆ ಗುದ್ದಲಿ ಪೂಜೆ



**ಚಿಟಗುಪ್ಪ:** ತಾಲೂಕಿನ ಬೇಳಕೇರಾ ಗ್ರಾಮದಲ್ಲಿ ವಿಶ್ವ ರತ್ನ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ನೂತನ ಮೂರ್ತಿ ಸ್ಥಾಪನೆಗೆ ಗುದ್ದಲಿ ಪೂಜೆಯನ್ನು ಪೂಜ್ಯ ಭಂತೋಜಿ ಸಂಘ ರಖ್ಖಿತ್ ಮತ್ತು ಬೀದರ ವಿಧಾನ ಪರಿಷತ ಸದಸ್ಯ ಭೀಮರಾವ ಬಿ. ಪಾಟೀಲ್ ಜೊತೆಗೂಡಿ ಗುದ್ದಲಿ ಪೂಜೆ ನೇರವೆರಿಸಿದರು. ನಂತರ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ ಮಾತನಾಡಿ, ಮಹಾ ಪುರಷರು ಕೇವಲ ಒಂದು ಜಾತಿ ಒಂದು ಧರ್ಮಕ್ಕೆ ಸಿಮಿತಗೊಳಿಸಬಾರದು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನಮಗೆ ಸಂವಿಧಾನ ನೀಡಿರುವುದ್ದರಿಂದ ನಾನು ವಿಧಾನ ಪರಿಷತ್ ಶಾಸಕನಾಗಿ ತಮ್ಮ ಎದುರು ಮಾತನಾಡುತ್ತಿದ್ದೇನೆ, ಮತ್ತು ನರೇಂದ್ರ ಮೋದಿ ಕೂಡ ಸಂವಿಧಾನದಿಂದಲೇ ಈ ದೇಶದ ಪ್ರಧಾನ ಮಂತ್ರಿಗಳಾಗಿದ್ದಾರೆ.

ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ನಿರ್ಮಾಣದ ಕೆಲಸಕ್ಕೆ ಯುವ ನಾಯಕ ಅಭಿಷೇಕ ಆರ್. ಪಾಟೀಲ ವೈಯಕ್ತಿಕವಾಗಿ ಹಣ ನೀಡುವುದಾಗಿ ಭರವಸೆ ನೀಡಿದ್ದಾರೆ. ಅದೇ ರೀತಿ ನನ್ನ ಅನುದಾನದಲ್ಲಿ ಅಂಬೇಡ್ಕರ್ ಮೂರ್ತಿ ಸ್ಥಾಪನೆ ಸೇರಿ ಬೇಳಕೇರಾ ಗ್ರಾಮದ ಎಲ್ಲಾ ಸಮಾಜದ ಅಭಿವೃದ್ಧಿ ಕಾಮಗಾರಿಗಾಗಿ ಸುಮಾರು 15 ಲಕ್ಷ ರೂಪಾಯಿ ಅನುದಾನ ನೀಡುತ್ತೇನೆ. ಸಾರ್ವಜನಿಕರ ಹಿತ ಕಾಪಾಡುವಲ್ಲಿ ನಮ್ಮ ಪಾಟೀಲ್ ಪರಿವಾರ ಸದಾ ನಿಮ್ಮ ಜೊತೆ ಇದೆ. ಮುಂದೆಯೂ ಇರುತ್ತದೆ ಎಂದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನಾ ಸಮಿತಿ ಅಧ್ಯಕ್ಷ ತುಕಾರಾಮ ತೆಳಕೇರಿ, ವಿದ್ಯಾಸಾಗರ ಕಟ್ಟಿಮನಿ, ಗ್ರಾಪಂ ಮಾಜಿ ಅಧ್ಯಕ್ಷರುಗಳಾದ ತುಕ್ಕಮ್ಮ ಮೇಲಕೇರಿ, ಮಾಣಿಕ ಹಿಪ್ಪರಗಿ, ಪುರಸಭೆ ಮಾಜಿ ಸದಸ್ಯ ರಾಜದೀಪ ಜಾಬಾ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೀರಣ್ಣಾ ಜಮಾದಾರ್, ಸಂಜುಕುಮಾರ ಮೇಲಕೇರಿ, ಸುಚಿತಕುಮಾರ್ ಕಟ್ಟಿಮನಿ, ರಾಹುಲ್ ನಡುವಿನಕೇರಿ, ಶ್ರೀಕಾಂತ ನಡುವಿನಕೇರಿ, ರಾಜು ಸಿಂಧೆ, ವಿಶ್ವನಾಥ ಕಟ್ಟಿಮನಿ, ಸಾಗರ ಬುಡ್ಡಿ, ಮಹೇಬೂಬ ಸಾಬ್ ಪಿಂಜಾರ, ಸಂಗ್ರಾಮ ಬುಡ್ಡಿ, ಸಂಜು ಗೌಡಪನೋರ, ಝುರೆಪ್ಪಾ ಬುಡ್ಡಿ,ಸುಧಾಕರ ಸಂಗಮ,ಹಾಜಿ ಪಟೇಲ್, ಸುರೇಶ್ ಘಾಂಗ್ರೆ, ಶಿವಾನಂದ ಕಟ್ಟಿಮನಿ, ರಾಹುಲ್ ಉದ್ದಾ, ರವಿಚಂದ್ರ ಸಂಗಮ, ಶಿವರಾಜ ಸಿಂಧನಕೇರಾ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಲೇಖನ ಸಾಮಗ್ರಿ ಕೊಡುಗೆ



**ಬಾಗಲಕೋಟೆ:** ತಾಲ್ಲೂಕಿನ ಬೆನಕಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ, ಕಿರಿಯ ಹಾಗೂ ತೋಟದ ಶಾಲೆಯ ಬಡ ಪ್ರತಿಭಾವಂತ ಮಕ್ಕಳಿಗೆ ನಿವೃತ್ತ ಶಿಕ್ಷಕ ಸಿ.ಎನ್.ಬಾಳಕ್ಕನವರ ನೋಟಬುಕ್, ಪೆನ್ ಇತ್ಯಾದಿ ಲೇಖನಿ ಸಾಮಗ್ರಿಗಳನ್ನು ಕೊಡುಗೆ ನೀಡಿದರು.

ಬುಧವಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೂರೂ ಶಾಲೆಗಳ 25 ಕ್ಕೂ ಹೆಚ್ಚು ಮಕ್ಕಳಿಗೆ ವಿತರಿಸಲಾಯಿತು. ಶಾಲೆಯ ಮುಖ್ಯ ಶಿಕ್ಷಕ ಎಸ್.ಎಸ್.ರಕರಡ್ಡಿ, ಸರ್ಕಾರಿ ಶಾಲಾ ಮಕ್ಕಳ ಪರಿಣಾಮಕಾರಿ ಕಲಿಕೆಗೆ ದಾನಿಗಳು ನೀಡುವ ಕಲಿಕಾ ಸಾಮಗ್ರಿಗಳು ಸಹಕಾರಿಯಾಗುತ್ತವೆ ಎಂದರು.

ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತಗೌಡ ಪಾಟೀಲ, ಕೃಷ್ಣಾ ಯಡಹಳ್ಳಿ, ಸಿ.ಎನ್.ಬಾಳಕ್ಕನವರ, ಶಿಕ್ಷಕರಾದ ಸುರೇಶ ಮನಗೂಳಿ, ಜಗನ್ನಾಥ ಪತ್ತಾರ, ಶರಣಬಸು ಅಮಾತಿಗೌಡರ, ಪಾಂಡುರಂಗ ಸನ್ನಪ್ಪನವರ, ರವಿ ಕೆಂಚನ್ನವರ ಹಾಗೂ ಆಶಾರಾಣಿ ಮೇಟಿ ಇದ್ದರು.

# ಅದ್ದೂರಿಯಾಗಿ ನಡೆದ ಡಾ. ಕೆ ಟಿ ರಾಜು ಹುಟ್ಟುಹಬ್ಬ



**ಪೀಣ್ಯ, ದಾಸರಹಳ್ಳಿ:** ಡಿ.ಪಿ ಬಿಲ್ಡರ್ಸ್ ಅಂಡ್ ಡೆವಲಪರ್ಸ್, ಡಿ.ಪಿ ಪ್ರೈವೇಟ್ ಲಿಮಿಟೆಡ್ ಮತ್ತು ಮಲೆ ಮಹದೇಶ್ವರ ಎಂಟರ್ ಪ್ರೈಸಸ್‌ನ ಮಾಲೀಕರು ಹಾಗೂ ಡಿ.ಪಿ ಕರುಣಾ ಆಸರೆ ಟ್ರಸ್ಟ್ ನ ಸಂಸ್ಥಾಪಕ ಅಧ್ಯಕ್ಷರು ಹಾಗೂ ಸಮಾಜ ಸೇವಕರಾದ ಡಿ.ಪಿ ವೆಂಕಟೇಶ್ ರವರ ನೇತೃತ್ವದಲ್ಲಿ ನಾಗರಬಾವಿಯ ಬೈಟು ಕಾಫಿ ಸರ್ಕಲ್ ನಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಮುಖಂಡರಾದ ಡಾ. ಕೆ.ಟಿ ರಾಜು ರವರ ಹುಟ್ಟುಹಬ್ಬಕ್ಕೆ ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಹನುಮಂತರಾಯಪ್ಪ ರವರು ಆಗಮಿಸಿ ಕೇಕ್ ಕತ್ತರಿಸಿ, ಶಾಲು ಹೊದಿಸಿ ಸನ್ಮಾನಿಸಿ ಗೌರವಿಸುವ ಮೂಲಕ ಹುಟ್ಟುಹಬ್ಬಕ್ಕೆ ಶುಭಕೋರಿದರು. ಹುಟ್ಟು ಹಬ್ಬದ ಪ್ರಯುಕ್ತ ಡಿಪಿ ವೆಂಕಟೇಶ್ ರವರ ನೇತೃತ್ವದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷರಾದ ಪುಟ್ಟಸ್ವಾಮಿಗೌಡ್ರು, ಒಬಿಸಿ ನಾಗರಾಜ್, ತೇಜು, ಮಂಜಣ್ಣ, ಕಾಂಗ್ರೆಸ್ ಮುಖಂಡರಾದ ಶೇಖರ್, ಬಿಬಿಎಂಪಿ ಮಾಜಿ ಸದಸ್ಯರಾದ ಮೋಹನ್ ಕುಮಾರ್, ರೂಪಾ ಲಿಂಗೇಶ್, ರಮೇಶ್ ಗೌಡ್ರು ಸೇರಿದಂತೆ ಹಲವಾರು ಮುಖಂಡರು, ಬೈಟು ಕಾಫಿ ಸ್ನೇಹಿತರ ಬಳಗದ ಪದಾಧಿಕಾರಿಗಳು ಉಪಸ್ಥಿತರಿದ್ದು ಹುಟ್ಟುಹಬ್ಬಕ್ಕೆ ಶುಭಕೋರಿದರು.

# ಬ್ರೇನ್ ಟಿಬಿಯಿಂದ ಬಳಲುತ್ತಿದ್ದ ತಾಯಿಗೆ ಯಶಸ್ವಿ ಚಿಕಿತ್ಸೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರ್ಗಿ



ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೇಯ ವೈದ್ಯರು ಅಪರೂಪದ ಮಿದುಳಿನ ಕ್ಷಯರೋಗ ( ಬ್ರೇನ್ ಟಿಬಿ) ಹೊಂದಿದ ಬಾಣಂತಿ ಮಹಿಳೆಗೆ ಯಶಸ್ವಿ ಚಿಕಿತ್ಸೆ ನೀಡಿ ಅವಳನ್ನು ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಯಾದಗಿರಿ ಜಿಲ್ಲೆಯ ಸುರಪುರದ 24 ವರ್ಷದ ಭಾಗ್ಯ ಎಂಬ ಯುವ ಮಹಿಳೆಯು ತನ್ನ ಹೆರಿಗೆಯ ನಂತರ ತೀವ್ರ ತಲೆನೋವು, ಕುತ್ತಿಗೆ ಬಿಗಿತ ದಿಂದಾಗಿ ನಗರದ ಹೈ ಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಆಸ್ಪತ್ರೆಗೆ ದಾಖಲಾಗುತ್ತಾಳೆ. ಆಸ್ಪತ್ರೆಗೆ ದಾಖಲಾದ ಮಹಿಳೆಯ ಪರೀಕ್ಷೆ ಆರಂಭಿಸಿದಾಗ ಅವಳಿಗೆ ವೈದ್ಯಕೀಯ ಕ್ಷೇತ್ರದಲ್ಲಿ ಅಪರೂಪವಾದ ಹಾಗೂ ಜೀವಕ್ಕೆ ಅಪಾಯಕಾರಿಯಾದ ಸುಪ್ರಾಸೆಲ್ಲರ್ ಪಿಟ್ಯುಟರಿ ಟ್ಯೂಬರ್ಕುಲರ್ ಭಾವು ಇರುವುದು ಪತ್ತೆಯಾಯಿತು. ಇದು ಮೆದುಳಿನ ನರಮಂಡಲಕ್ಕೆ ಹಬ್ಬುವ ಮಾರಣಾಂತಿಕ ನರ ರೋಗವಾಗಿದೆ.ಇದಕ್ಕೆ ತಕ್ಷಣ ಹಾಗೂ ಸರಿಯಾದ ಚಿಕಿತ್ಸೆ ನೀಡದಿದ್ದರೆ ನರಮಂಡಲ ಕ್ಷೀಣಿಸಿ ಜೀವಕ್ಕೆ ಅಪಾಯವನ್ನು ನೀಡುತ್ತದೆ.

ಇದನ್ನು ಪತ್ತೆ ಹಚ್ಚಿದ ನುರಿತ ವೈದ್ಯಕೀಯ ತಂಡ ನಿಖರವಾದ ಪೂರ್ವ ಶಸ್ತ್ರ ಚಿಕಿತ್ಸೆಗಾಗಿ ಆರ್ಗನೈಜ್ಡ್ ಮಲ್ಟಿಡಿಸಿಪನರಿ ಪ್ರೋಜೆಕ್ಟ್ ನಲ್ಲಿ ಪರಿಣಾಮಕಾರಿ ಚಿಕಿತ್ಸೆ ನೀಡಲಾಯಿತು ಇದರಿಂದಾಗಿ ಕ್ಷೀಣಿಸಿದ್ದ ನರಗಳ ಚೇತರಿಕೆಗೆ ಕಾರಣವಾಯಿತು.ಇದರಿಂದಾಗಿ ಬಾಣಂತಿ ಮಹಿಳೆ ತನ್ನ ನವಜಾತು ಶಿಶು ಮತ್ತು ಕುಟುಂಬಕ್ಕೆ ಸುರಕ್ಷಿತವಾಗಿ ಮರಳಿ ತನ್ನ ಕುಟುಂಬ ಸೇರುವಂತಾಯಿತು.ಶಸ್ತ್ರ ಚಿಕಿತ್ಸೆ ನಂತರ ಆ ಬಾಣಂತಿ ಮಹಿಳೆಯನ್ನು ಎರಡು ದಿನಗಳ ಕಾಲ

ವೆಂಟಿಲೇಟರ್ ಸಹಾಯದಿಂದ ಚಿಕಿತ್ಸೆ ನೀಡಲಾಯಿತು ಆರೋಗ್ಯದಲ್ಲಿ ಚೇತರಿಕೆ ಕಂಡ ಮೇಲೆ ವೆಂಟಿಲೇಟರ್ ನಿಂದ ಮುಕ್ತಗೊಳಿಸಿ ವಾರ್ಡ್ ನಲ್ಲಿ ಚಿಕಿತ್ಸೆ ಮುಂದುವರಿಸಿ ಅಪಾಯಕಾರಿ ಹಂತದಲ್ಲಿದ್ದ ಬಾಣಂತಿಯನ್ನು ರಕ್ಷಿಸಲಾಯಿತು.

ಇಂತಹ ಅಪರೂಪದ ಸವಾಲಿನ ಪ್ರಕರಣಗಳನ್ನು ಆರಂಭಿಕವಾಗಿ ಪತ್ತೆ ಹಚ್ಚಿದಾಗ ಮಾತ್ರ ಗುಣಪಡಿಸಬಹುದು. ಈ ರೋಗವನ್ನು ಖಚಿತವಾಗಿ ಪತ್ತೆಹಚ್ಚಿ ಯಶಸ್ವಿ ಚಿಕಿತ್ಸೆ ನೀಡಿ ಯುವ ಮಹಿಳೆಯನ್ನು ಅಪಾಯಕಾರಿ ಸ್ಥಿತಿಯಿಂದ ಆರೋಗ್ಯ ಸ್ಥಿತಿಗೆ ತಂದ ತಂಡದಲ್ಲಿ ನರರೋಗ ತಜ್ಞ ವೈದ್ಯರಾದ ಡಾ ಶಶಾಂಕ್ ಸಂಗೊಳ್ಳಿ, ಡಾ ತನುಜಾ ಪೋಲಿಸ್ ಪಾಟೀಲ್, ಅರಿವಳಿಕೆ ತಂಡದ ವೈದ್ಯರಾದ ಡಾ ಎಂ ಡಿ ಯಾಹ್ಯ, ಡಾ ಮುಕ್ತಾಬಾಯಿ, ಐಸಿಯು ವೈದ್ಯರಾದ ಡಾ ಸೊಹೈಲ್ ಶಾಲಿ,ಡಾ ನಿತಿನ್ ಕುನ್ನೂರ್ ಇದ್ದರು ಇಂತಹ ಅಪರೂಪದ ಯಶಸ್ವಿ ಚಿಕಿತ್ಸೆಗೆ ನೀಡಿದ ತಂಡಕ್ಕೆ ಸಂಸ್ಥೆಯ ಅಧ್ಯಕ್ಷರು ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ ಉಪಾಧ್ಯಾಕ್ಷರಾದ ರಾಜಾ ಭೀಮಳ್ಳಿ, ಕಾರ್ಯದರ್ಶಿಗಳಾದ ಉದಯಕುಮಾರ್ ಚಿಂಚೋಳ್ಳಿ, ಆಡಳಿಮ ಮಂಡಳಿ ಸದಸ್ಯರು ಸಂಚಾಲಕರಾದ ಡಾ ಕಿರಣ ದೇಶಮುಖ್, ವೈದ್ಯಕೀಯ ಅಧೀಕ್ಷಕರಾದ ಡಾ ಮಲ್ಲಿಕಾರ್ಜುನ್ ಟೇಂಗಳಿ,ಆಡಳಿತಾಧಿಕಾರಿ ಗಳಾದ ಡಾ ಎಂ ಆರ್ ಪೂಜಾರಿ ಅಭಿನಂದಿಸಿದ್ದಾರೆ. ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೇಯ ಈಗ ನಿರಂತರವಾಗಿ ಇಂತಹ ಜೀವಕ್ಕೆ ಅಪಾಯಕಾರಿಯಾಗಿರುವ ರೋಗಗಳನ್ನು ಸರಿಯಾಗಿ ಪತ್ತೆ ಹಚ್ಚಿ ಜೀವ ಕಾಪಾಡುತ್ತಿರುವ ಆರೋಗ್ಯ ಸಂಜೀವಿನಿಯಾಗಿದೆ ಎಂದು ಸಂಸ್ಥೆಯ ಮಾಧ್ಯಮ ಸಂಯೋಜಕ ಐ ಕೆ ಪಾಟೀಲ್ ತಿಳಿಸಿದ್ದಾರೆ

# ಶೌಚಗುಂಡಿ ಸ್ವಚ್ಛತೆಗೆ ಯಂತ್ರ ಬಳಸಲು ಈಶ್ವರ ಖಂಡ್ರೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಮತ್ತು ಪಂಚಾಯಿತಿ ಸೃಜಿಸಿರುವ ಎಲ್ಲ ಸರ್ಕಾರಿ ಆಸ್ತಿಗಳನ್ನು ಜಿಯೋಟ್ಯಾಗ್ ಮಾಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ದೇವನಹಳ್ಳಿಯ ಜಿಲ್ಲಾ ಪಂಚಾಯಿತಿ ಕಾರ್ಯಾಲಯದಲ್ಲಿಂದು ನಡೆದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿಗಳ ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಭೂಮಿಗೆ ಬಂಗಾರದ ಬೆಲೆ ಇದ್ದು, ಪಂಚಾಯಿತಿಯ ಯಾವುದೇ ಆಸ್ತಿ ಕಬಳಿಕೆ ಆಗದಂತೆ ಮತ್ತು ಗುಣಮಟ್ಟದ ಖಾತ್ರಿಗೆ ಜಿಯೋಟ್ಯಾಗ್ ಮಾಡಲು ಸೂಚಿಸಿರುವುದಾಗಿ ಹೇಳಿದರು.



ರಾಜ್ಯದಲ್ಲಿ ಇಂದಿಗೂ 7483 ಶೌಚಗುಂಡಿ ಕಾರ್ಮಿಕರು (ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್) ಇದ್ದಾರೆ ಎಂದು ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ನೀಡಿರುವ ಹೇಳಿಕೆ ಉಲ್ಲೇಖಿಸಿದ ಸಚಿವರು, ಯಾವುದೇ ಮಲಗುಂಡಿಯ ಸ್ವಚ್ಛತೆಯನ್ನು ಯಾವುದೇ ಕರ್ಮಚಾರಿಯ ಕೈಯಿಂದ ಮಾಡಿಸಿದರೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು, ಯಂತ್ರಗಳ ಮೂಲಕವೇ ಸ್ವಚ್ಛತೆ ಮಾಡಬೇಕೆಂದು ಸೂಚಿಸಲಾಗಿದ್ದು ಇದಕ್ಕಾಗಿ ಅಗತ್ಯವಿರುವ ಜೆಟ್ಟಿಂಗ್, ಸಕ್ಕಿಂಗ್ ಯಂತ್ರ ಖರೀದಿಸಲಾಗುವುದು ಎಂದರು.

ತಾವು ಈ ಹಿಂದೆ ಪೌರಾಡಳಿತ ಸಚಿವರಾಗಿದ್ದಾಗ ಮಲತ್ಯಾಜ್ಯ ಸಂಸ್ಕರಣಾ ಘಟಕ (ಎಫ್.ಎಸ್.ಟಿ.ಪಿ.) ನಿರ್ಮಿಸಲು ಯೋಜನೆ ರೂಪಿಸಿ, ದೇವನಹಳ್ಳಿಯಲ್ಲಿ ಕೂಡ ಒಂದು ಎಫ್.ಎಸ್.ಟಿ.ಪಿ. ಮಾಡಿದ್ದನ್ನು ಸ್ಮರಿಸಿದ ಈಶ್ವರ ಖಂಡ್ರೆ, ಈಗ ಪಂಚಾಯಿತಿ ಮಟ್ಟದಲ್ಲೂ ಎಫ್.ಎಸ್.ಟಿ.ಪಿ. ನಿರ್ಮಿಸುವುದಾಗಿ ತಿಳಿಸಿದರು.

ಯುಪಿಎ ಕಾರ್ಯಕಾಲದಲ್ಲಿ ಜಾರಿಗೆ ತಂದ ನರೇಗಾದ ಬದಲಾದ ರೂಪವಾದ ವಿಬಿ ಜೀ ರಾಮ್ ಜೀಯನ್ನು ಜುಲೈ 1ರಿಂದ ಜಾರಿ ಮಾಡಬೇಕಾಗಿದ್ದು, ಕೇಂದ್ರ ಸರ್ಕಾರ ಯೋಜನೆಯ ವೇತನಕ್ಕಾಗಿ ನೀಡುವ ಅನುದಾನವನ್ನು ಮನ್ರೇಗಾದಲ್ಲಿದ್ದ 90:10 ಅನುಪಾತದಲ್ಲಿಯೇ ನೀಡಬೇಕು, ಇಲ್ಲವೇ ಕನಿಷ್ಠ 80:20 ಅನುಪಾತಕ್ಕಾದರೂ ಹೆಚ್ಚಳ ಮಾಡಬೇಕು ಎಂದು ಆಗ್ರಹಿಸಿರುವುದಾಗಿ ತಿಳಿಸಿದರು.

ಇದೇ ತಿಂಗಳ 28 ಮತ್ತು 29ರಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರು ಕರೆದಿರುವ ಸಭೆಯಲ್ಲಿ ಭಾಗಿಯಾಗಿ ಯೋಜನೆಯಡಿ ಯಾವ ಕಾಮಗಾರಿ ನಡೆಸಬೇಕು ಎನ್ನುವ ಸ್ವಾತಂತ್ರ್ಯ ರಾಜ್ಯಗಳಿಗೆ ಇರಬೇಕು, 60 ದಿನಗಳ ಕೆಲಸಕ್ಕೆ ನೀಡಿರುವ ಬಿಡುವು ಕೈಬಿಡಬೇಕು ಹಾಗೂ ಕರ್ನಾಟಕ ಈಗಾಗಲೇ ಕನಿಷ್ಠ ವೇತನ ಹೆಚ್ಚಳಕ್ಕೆ ನಿರ್ಣಯ ಕೈಗೊಂಡಿರುವ ಹಿನ್ನೆಲೆಯಲ್ಲಿ ವಿಬಿಜೀ ರಾಮ್ ಜೀಯ ವೇತನವನ್ನು ಅದಕ್ಕೆ ಸರಿದೂಗಿಸುವ ರೀತಿಯಲ್ಲಿ ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಲಾಗುವುದು ಎಂದರು. ಇಸ್ವತ್ತು ಪಡೆಯುವಲ್ಲಿ ಇರುವ ಸರ್ವರ್ ಸಮಸ್ಯೆ ಪರಿಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇದರ ಜೊತೆಗೆ ಪೂರ್ವಜರಿಂದ ಬಂದ ಆಸ್ತಿಗೆ ಸಂಬಂಧಿಸಿದಂತೆ ಕೆಲವು ಗ್ರಾಮೀಣರ ಬಳಿ ಯಾವುದೇ ದಾಖಲೆ ಇಲ್ಲದ ಕಾರಣ ಅವರೆಲ್ಲರಿಗೂ ದಾಖಲೆಯ ವಿನಾಯಿತಿ ನೀಡಿ, ಸ್ವಾಧೀನಾನುಭವದ ಖಾತ್ರಿ ಪಡಿಸಿಕೊಂಡು ಆಸ್ತಿ ಹಕ್ಕು ನೀಡುವ ಕುರಿತಂತೆ ಪರಿಶೀಲಿಸಲಾಗುವುದು ಎಂದರು.

# ಯುವಜನರಲ್ಲಿ ಉದ್ಯೋಗಶೀಲತೆ ಹೆಚ್ಚಿಸಲು ನೆರವು: ಪ್ರಿಯಾಂಕ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ/ಬೆಂಗಳೂರು

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಶೀಲತೆ ಹೆಚ್ಚಿಸಲು ರಾಜ್ಯದ 2 ಮತ್ತು 3ನೆ ಶ್ರೇಣಿಯ ನಗರ–ಪಟ್ಟಣಗಳ 50 ಸರ್ಕಾರಿ ಕಾಲೇಜಗಳಲ್ಲಿ ₹ 10 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಕೃತಕ ಬುದ್ಧಿಮತ್ತೆ (ಎಐ) ಪ್ರಯೋಗಾಲಯಗಳನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಗೃಹ, ಐಟಿ/ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ರಾಜ್ಯ ಸರ್ಕಾರದ ಪ್ರಸಕ್ತ ಹಣಕಾಸು ವರ್ಷದ (2026–27) ಬಜೆಟ್‌ನಲ್ಲಿ ಘೋಷಿಸಿದಂತೆ, ಗ್ರಾಮೀಣ ಪ್ರದೇಶದ ಯುವ ಜನರನ್ನು ಅಗತ್ಯ ಕೌಶಲದ ಜೊತೆ ಉದ್ಯೋಗಶೀಲರನ್ನಾಗಿ ಮಾಡಲು ಕೇಂದ್ರ ಸರ್ಕಾರದ ಎಐ ಮಿಷನ್ ಸಹಭಾಗಿತ್ವದಲ್ಲಿ ಎಐ ಪ್ರಯೋಗಾಲಯಗಳನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದ್ದಾರೆ.



ಆಯ್ಕೆ ಮಾಡಲಾಗುವ ಶಿಕ್ಷಣ ಸಂಸ್ಥೆ / ಕಾಲೇಜ್‌ಗಳಲ್ಲಿ ಆಧುನಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಒಳಗೊಂಡ ಪ್ರಯೋಗಾಲಯಗಳನ್ನು ಸ್ಥಾಪಿಸಿ, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ, ಕೌಶಲ ಅಭಿವೃದ್ಧಿ ಮತ್ತು ಹೊಸ ಆವಿಷ್ಕಾರಗಳಿಗೆ ಅವಕಾಶ ಕಲ್ಪಿಸಿಕೊಡಲಾಗುವುದು. ಯುವಜನರು ಇತ್ತೀಚಿನ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಳ್ಳಲು ಮತ್ತು ಉದ್ಯೋಗಾರ್ಹತೆ ಹೆಚ್ಚಿಸಿಕೊಳ್ಳಲು ಇದು ನೆರವಾಗಲಿದೆ.

ಕೇಂದ್ರ ಸರ್ಕಾರವು ಎಐ ಮಿಷನ್–ಯೋಜನೆಯಡಿ ಪ್ರತಿಯೊಂದು ಪ್ರಯೋಗಾಲಯಕ್ಕೆ 3 ವರ್ಷಗಳ ಅವಧಿಗೆ ₹68.98 ಲಕ್ಷ ಮೊತ್ತದ ನೆರವು ನೀಡಲಿದೆ. ಈ ಮೊತ್ತವನ್ನು 3 ಕಂತುಗಳಲ್ಲಿ ಬಿಡುಗಡೆ ಮಾಡಲಾಗುವುದು. ಇದಕ್ಕೆ ಪೂರಕವಾಗಿ ರಾಜ್ಯ ಬಜೆಟ್‌ನಲ್ಲಿ ಘೋಷಿಸಿರುವಂತೆ ₹10 ಕೋಟಿ ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ. ಮೊದಲ ವರ್ಷಕ್ಕೆ ₹6.29 ಕೋಟಿ ಬಿಡುಗಡೆ ಮಾಡಲಾಗುತ್ತಿದೆ.

ಮೊದಲ ಹಂತದಲ್ಲಿ ಕೃತಕ ಬುದ್ಧಿಮತ್ತೆ ದತ್ತಾಂಶ ಪ್ರಯೋಗಾಲಯಗಳನ್ನು ಸ್ಥಾಪಿಸಲು 23 ಶೈಕ್ಷಣಿಕ ಸಂಸ್ಥೆಗಳನ್ನು ಆಯ್ಕೆ ಮಾಡಿರುವುದಕ್ಕೂ ಸರ್ಕಾರದ ಅನುಮೋದನೆ ದೊರೆತಿದೆ ಎಂದು ಸಚಿವರು ಹೇಳಿದ್ದಾರೆ.

# ಫೇಸ್ ಲೊಕೇಶನ್: ಡಿಜಿಟಲ್ ಹೆಜ್ಜೆಯೋ..? ಕಳವಳದ ಮುಳ್ಳೋ..?



ವರ್ತಮಾನ–ವಿಜಯ
● ಮಧೂರ ತಿಳಗೂಳಕರ
ಜಿಲ್ಲಾ ವರದಿಗಾರರು

ಇತ್ತೀಚಿನ ದಿನಗಳಲ್ಲಿ ಶಿಕ್ಷಣ ಇಲಾಖೆಯು ಪಾರದರ್ಶಕತೆ ಮತ್ತು ನಿಖರತೆಯನ್ನು ತರುವ ಉದ್ದೇಶದಿಂದ ಸರ್ಕಾರಿ ಮತ್ತು ಅನುದಾನಿತ ಶಾಲಾ ಶಿಕ್ಷಕರಿಗೆ ಮುಖ ಗುರುತಿಸುವಿಕೆಯ ತಂತ್ರಜ್ಞಾನ ಮೂಲಕ ಹಾಜರಾತಿ ದಾಖಲಿಸುವ ಪದ್ಧತಿಯನ್ನು ಜಾರಿಗೆ ತರುತ್ತಿದೆ. ತಂತ್ರಜ್ಞಾನದ ಬೆಳವಣಿಗೆಯ ದೃಷ್ಟಿಯಿಂದ ಇದು ಉತ್ತಮ ಹೆಜ್ಜೆಯಾಗಿ ಕಂಡರೂ, ಗ್ರಾಮೀಣ ಪ್ರದೇಶಗಳಲ್ಲಿ ಕೆಲಸ ಮಾಡುವ ಶಿಕ್ಷಕರಲ್ಲಿ ಇದು ತೀವ್ರ ಕಳವಳ ಮತ್ತು ಆತಂಕವನ್ನು ಮೂಡಿಸಿದೆ ಈ ಹೊಸ ಪದ್ಧತಿ ಮತ್ತು ಅದರಿಂದ ಶಿಕ್ಷಕರು ಎದುರಿಸುತ್ತಿರುವ ಪ್ರಮುಖ ಕಳವಳಗಳ ಕುರಿತಾದ ಒಂದು ವಿಶೇಷ ವರದಿ ಇಲ್ಲಿದೆ.

ಹೌದು, ಫೇಸ್ ಲೋಕೇಶನ್ ಆಪ್‌ಗಳು ಸಂಪೂರ್ಣವಾಗಿ ಇಂಟರ್ನೆಟ್ ಮತ್ತು ಜಿಪಿಎಸ್ ತಂತ್ರಜ್ಞಾನದ ಮೇಲೆ ಆಧಾರಿತವಾಗಿವೆ. ಗ್ರಾಮೀಣ ಭಾಗದ ಶಾಲೆಗಳಲ್ಲಿ ನೆಟ್‌ವರ್ಕ್ ಸಮಸ್ಯೆ ಸಾಮಾನ್ಯ ಇನ್ನು ಮಳೆಗಾಲದ ಸಂದರ್ಭದಲ್ಲಿ ವಿದ್ಯುತ್ ಸಮಸ್ಯೆ ಪ್ರತಿನಿತ್ಯದ ಗೋಳು ಒಂದೆಡೆ, ಶಾಲೆಯ ಆವರಣ ತಲುಪಿದರೂ ನೆಟ್‌ವರ್ಕ್ ಸಿಗದೆ ಹಾಜರಾತಿ ದಾಖಲಾಗದಿದ್ದರೆ ಶಿಕ್ಷಕರು ಅನುಪಸ್ಥಿತ ಎಂದು ಬಿಂಬಿತವಾಗುವ ಭೀತಿ ಇರುತ್ತದೆ




, ತಾಂತ್ರಿಕ ದೋಷದಿಂದಾಗಿ ಸಮಯಕ್ಕೆ ಸರಿಯಾಗಿ ಹಾಜರಾತಿ ಹಾಕಲಾಗದಿದ್ದರೆ, ಅದಕ್ಕೆ ಶಿಕ್ಷಕರನ್ನೇ ಜವಾಬ್ದಾರರನ್ನಾಗಿ ಮಾಡುವುದು ಅವರಲ್ಲಿ ಅನಗತ್ಯ ಮಾನಸಿಕ ಒತ್ತಡವನ್ನು ಸೃಷ್ಟಿಸುತ್ತಿದೆ.

ಇನ್ನು ಖಾಸಗಿತನದ ಉಲ್ಲಂಘನೆಯ ಭೀತಿ

ಶಿಕ್ಷಕರ ಪ್ರಮುಖ ಕಳವಳವಾಗಿದ್ದು ಅವರ ವೈಯಕ್ತಿಕ ದತ್ತಾಂಶದ ಸುರಕ್ಷತೆ ಎಷ್ಟು ಎಂದು ಪ್ರಶ್ನೆಯಾಗಿದ್ದು ಮುಖದ ಸ್ಕ್ಯಾನ್ ಮತ್ತು ಲೈವ್ ಲೋಕೇಶನ್ ಮಾಹಿತಿಯನ್ನು ಸಂಗ್ರಹಿಸುವ ಈ ಆಪ್‌ಗಳ ಸರ್ವರ್‌ಗಳು ಎಷ್ಟು ಸುರಕ್ಷಿತವಾಗಿವೆ ಎಂಬ ಆತಂಕ ಇನ್ನೊಂದೆಡೆ, ಶಿಕ್ಷಕರ ಬಯೋಮೆಟ್ರಿಕ್ ಮತ್ತು ವೈಯಕ್ತಿಕ ಮಾಹಿತಿ ದುರುಪಯೋಗವಾಗುವುದಿಲ್ಲ ಎಂಬ ಗ್ಯಾರಂಟಿ ಏನು? ಎಂಬ ಪ್ರಶ್ನೆಗಳು ಶಿಕ್ಷಕರನ್ನು ಕಾಡುತ್ತಿವೆ, ಪ್ರಾಯೋಗಿಕ ತೊಂದರೆಗಳು ಮತ್ತು ಕರ್ತವ್ಯದ ಸ್ವರೂಪ ಶಿಕ್ಷಕರ ವೃತ್ತಿ ಕೇವಲ ನಾಲ್ಕು ಗೋಡೆಗಳ ಮಧ್ಯೆ ಮುಗಿಯುವುದಿಲ್ಲ ಅನೇಕ ಬಾರಿ ಶಿಕ್ಷಕರು ಕಚೇರಿ ಕೆಲಸ, ಬ್ಯಾಂಕ್ ಕೆಲಸ, ತರಬೇತಿಗಳು ಅಥವಾ ಇಲಾಖೆಯ ಇತರೆ ಕ್ಷೇತ್ರ ಕಾರ್ಯಗಳಿಗಾಗಿ ಹೊರಗಡೆ ಹೋಗಬೇಕಾಗುತ್ತದೆ ಇಂತಹ ಸಂದರ್ಭಗಳಲ್ಲಿ ಶಾಲೆಯ ನಿಗದಿತ ಲೊಕೇಶನ್‌ನಲ್ಲಿ ಹಾಜರಾತಿ ನೀಡುವುದು ಅಸಾಧ್ಯವಾಗುತ್ತದೆ ನಿಯಮಗಳ ಕಟ್ಟುಪಾಡುಗಳು ಶಿಕ್ಷಕರ ಕರ್ತವ್ಯ ನಿರ್ವಹಣೆಗೆ ಪೂರಕವಾಗುವ ಬದಲು ಅಡ್ಡಿಯಾಗುತ್ತಿವೆ ಎಂಬುದು ಅವರ ವಾದ , ಶಿಕ್ಷಕ ವೃತ್ತಿಯನ್ನು ಅತ್ಯಂತ ಗೌರವಾನ್ವಿತ ಮತ್ತು ಜವಾಬ್ದಾರಿಯುತ ವೃತ್ತಿ ಎಂದು ಪರಿಗಣಿಸಲಾಗುತ್ತದೆ. ಆದರೆ, ಇಂತಹ ಕಠಿಣ ಕಣ್ಗಾವಲು ಪದ್ಧತಿಗಳು ಸರ್ಕಾರಕ್ಕೆ ಶಿಕ್ಷಕರ ಮೇಲಿರುವ ನಂಬಿಕೆಯ ಕೊರತೆಯನ್ನು ತೋರಿಸುತ್ತವೆ ಎಂಬ ಅಸಮಾಧಾನ ಶಿಕ್ಷಕರ ವಲಯದಲ್ಲಿ ಕೇಳಿಬರುತ್ತಿದೆ.

ತಂತ್ರಜ್ಞಾನವು ಸಹಕಾರಿಯಾಗಬೇಕೇ ಹೊರತು, ಶಿಕ್ಷಕರನ್ನು ಅಪರಾಧಿಗಳಂತೆ ನೋಡುವ ಸಾಧನವಾಗಬಾರದು ಎಂಬುದು ಅವರ ಅಭಿಪ್ರಾಯವಾಗಿದ್ದು ಯಾವುದೇ ಹೊಸ ತಂತ್ರಜ್ಞಾನವನ್ನು ಜಾರಿಗೆ ತರುವಾಗ ವ್ಯವಸ್ಥೆಯು ಪ್ರಾಯೋಗಿಕ ಅಂಶಗಳನ್ನು ಗಮನಿಸಬೇಕು , ನೆಟ್‌ವರ್ಕ್ ರಹಿತ ಇಂಟರ್ನೆಟ್ ಇಲ್ಲದಿದ್ದರೂ ಹಾಜರಾತಿ ದಾಖಲಾಗಿ, ನೆಟ್‌ವರ್ಕ್ ಸಿಕ್ಕಾಗ ಅಪ್‌ಡೇಟ್ ಆಗುವಂತಹ ಆಫ್‌ಲೈನ್ ವ್ಯವಸ್ಥೆ ಸಹ ಇರಬೇಕು ಮತ್ತು ಮಾಹಿತಿ ಸುರಕ್ಷತೆಯ ಭರವಸೆ ನೀಡಬೇಕು , ಶಿಕ್ಷಕರ ಬಯೋಮೆಟ್ರಿಕ್ ಡೇಟಾ ಸುರಕ್ಷತೆಯ ಬಗ್ಗೆ ಇಲಾಖೆ ಲಿಖಿತ ಭರವಸೆ ನೀಡಬೇಕು ಎಂಬುದು ಶಿಕ್ಷಕರ ಆಗ್ರಹವಾಗಿದೆ , ಇನ್ನು ಕಚೇರಿ ಕೆಲಸ ಅಥವಾ ತರಬೇತಿಯಲ್ಲಿರುವಾಗ ಹಾಜರಾತಿ ದಾಖಲಿಸಲು ಪರ್ಯಾಯ ಸುಲಭ ವ್ಯವಸ್ಥೆ ಇರಬೇಕು ಅಂದಾಗ ಮಾತ್ರ ಶಿಕ್ಷಕರಿಗೆ ಉಪಯೋಗವಾಗಲಿದ್ದು ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರುವುದು ಸ್ವಾಗತಾರ್ಹ. ಆದರೆ, ಅದು ಶಿಕ್ಷಕರ ಸ್ವಾಯತ್ತತೆ, ಗೌರವ ಮತ್ತು ಮಾನಸಿಕ ನೆಮ್ಮದಿಯನ್ನು ಕಿತ್ತುಕೊಳ್ಳುವಂತಿರಬಾರದು. ಶಿಕ್ಷಕರು ಒತ್ತಡ ಮುಕ್ತವಾಗಿದ್ದಾಗ ಮಾತ್ರ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯ. ಆದ್ದರಿಂದ ಸರ್ಕಾರ ಮತ್ತು ಶಿಕ್ಷಣ ಇಲಾಖೆಯು ಶಿಕ್ಷಕರ ಈ ನ್ಯಾಯಸಮ್ಮತ ಕಳವಳಗಳನ್ನು ಆಲಿಸಿ, ವ್ಯವಸ್ಥೆಯನ್ನು ಸರಳಗೊಳಿಸಬೇಕಾದ ಅಗತ್ಯ ತುರ್ತಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)